ಸಂಪುಟ: 22, ಸಂಚಿಕೆ: 70, ಪುಟಗಳು: 8, ಶುಕ್ರವಾರ, 20 ಡಿಸೆಂಬರ್ 2024 RNI NO. KARKAN/2002/08054
epaper: www.sanjemugilu.com


ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3

### ಸುಭಾಷಿತ

ಬೇಸಾಯಗಾರ ಪ್ರತಿದಿನ ಬೆಳಗೆ ನೀರು ಕಟ್ಟುತ್ತಾನೆ. ಆದರೆ ಋತುವಿನಲ್ಲಿ ಮಾತ್ರ ಫಸಲು ಬರುತ್ತದೆ. ಆದ್ದರಿಂದ ಜೀವನದಲ್ಲಿ ತಾಳ್ಮೆಯಿಂದಿರಿ, ಎಲ್ಲಕ್ಕೂ ಅದರದೇ ಆದ ಸಮಯವಿದೆ.

### ಪಂಚಾಂಗ

(ಶುಕ್ರವಾರ 20, ಡಿಸೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
- ಪಂಚಮಿ, ಷಷ್ಠಿ,
- ಶುಕ್ರವಾರ, ಮಖ ನಕ್ಷತ್ರ.
- ರಾಹುಕಾಲ: 10:55 ರಿಂದ 12:21
- ಗುಳಿಕಕಾಲ: 08:03 ರಿಂದ 09:29
- ಯಮಗಂಡಕಾಲ: 03:12 ರಿಂದ 04:38




## ಧ್ವಜಾರೋಹಣದ ಮೂಲಕ 87ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಚಾಲನೆ

**ಮಂಡ್ಯ:** ಶುಕ್ರವಾರದಿಂದ ಮೂರು ದಿನಗಳ ಕಾಲ ಮಂಡ್ಯದ ಸ್ಯಾಂಜೋ ಆಸ್ಪತ್ರೆ ಹಿಂಭಾಗ ನಡೆಯಲಿರುವ 87ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅದ್ದೂರಿ ಚಾಲನೆ ದೊರತಿದೆ.

ರಾಷ್ಟ್ರ ಧ್ವಜ, ನಾಡ ಧ್ವಜ ಹಾಗೂ ಪರಿಷತ್ತಿನ ಧ್ವಜಗಳ ಧ್ವಜಾರೋಹಣ ನೆರವೇರಿಸುವ ಮೂಲಕ ಚಾಲನೆ ನೀಡಲಾಗಿದೆ. ಸಮ್ಮೇಳನದ ಪ್ರಧಾನ ವೇದಿಕೆ ಮುಖ್ಯದ್ವಾರದ ಮುಂಭಾಗ ಧ್ವಜಾರೋಹಣ ಕಾರ್ಯಕ್ರಮ ನೆರವೇರಿದೆ. ಸಚಿವ ಚಲುವರಾಯಸ್ವಾಮಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದ್ದು, ಕ.ಸಾ.ಪ ರಾಜ್ಯಾಧ್ಯಕ್ಷ ನಾಡೋಜ ಮಹೇಶ್ ಜೋಷಿ ನಾಡ ಧ್ವಜಾರೋಹಣ ಮಾಡಿದರು.

ಸಂಚಾಲಕಿ ಡಾ. ಮೀರಾ ಶಿವಲಿಂಗಯ್ಯ ಪರಿಷತ್ತು ಧ್ವಜ ಹಾರಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಧ್ವಜಾರೋಹಣದ ವೇಳೆ ಸಮ್ಮೇಳನಾಧ್ಯಕ್ಷರಾದ ಗೊ.ರು.ಚನ್ನಬಸಪ್ಪ, ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ದಿನೇಶ್ ಗೂಳಿಗೌಡ, ಡಿಸಿ ಡಾ.ಕುಮಾರ್, ಸಿಇಓ ಶೇಕ್ ತನ್ವೀರ್ ಆಸೀಫ್, ಎಸ್ಪಿ



ಮಲ್ಲಿಕಾರ್ಜುನ್ ಬಾಲದಂಡಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಷಿ ಉಪಸ್ಥಿತರಿದ್ದರು.

ಇಂದಿನಿಂದ ಮೂರು ದಿನ ಮಂಡ್ಯದಲ್ಲಿ ನುಡಿಹಬ್ಬದ ಕಲರವ ನಡೆಯಲಿದ್ದು, ಸಕ್ಕರೆ ನಗರಿ ಸಂಪೂರ್ಣ ಸಜ್ಜಾಗಿದೆ. ಮೂರು ದಶಕಗಳ ಬಳಿಕ ಮಂಡ್ಯದಲ್ಲಿ ಸಾಹಿತ್ಯ ಸಮ್ಮೇಳನ ನಡೆಯುತ್ತಿದ್ದು, 80 ಎಕರೆ ಪ್ರದೇಶದಲ್ಲಿ ಪ್ರಧಾನ ವೇದಿಕೆ ಹಾಗೂ ಎರಡು ಸಮಾನಂತರ ವೇದಿಕೆಗಳನ್ನು ನಿರ್ಮಾಣ ಮಾಡಲಾಗಿದೆ. ಕೆಆರ್‌ಎಸ್ ಡ್ಯಾಂ ಮಾದರಿಯಲ್ಲಿ ಪ್ರಧಾನ ವೇದಿಕೆ ನಿರ್ಮಾಣಗೊಂಡಿದೆ. ವೇದಿಕೆ ಸೇರಿ ಪ್ರೇಕ್ಷಕರ ಗ್ಯಾಲರಿಯಲ್ಲಿ ಕನ್ನಡ ಬಾವುಟ ರಾರಾಜಿಸುತ್ತಿದೆ. ರಾಜವಂಶಸ್ಥೆ ಪ್ರಮೋದಾ ದೇವಿ ಒಡೆಯರ್ ಸಮ್ಮೇಳನಾಧ್ಯಕ್ಷರ ಮೆರವಣಿಗೆಗೆ ಚಾಲನೆ ನೀಡಿದ್ದು, 11 ಗಂಟೆಯ ವೇಳೆಗೆ ಸಿಎಂ ಸಿದ್ದರಾಮಯ್ಯ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಡಿಸಿಎಂ ಡಿಕೆಶಿ, ಉಸ್ತುವಾರಿ ಸಚಿವ ಸೇರಿ ಸಚಿವರು, ಶಾಸಕರು, ಸಾಹಿತಿಗಳು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದಾರೆ. ಮಧ್ಯಾಹ್ನ 2 ಗಂಟೆಯಿಂದ ಗೋಷ್ಠಿಗಳು ಆರಂಭಗೊಳ್ಳಲಿದೆ. ಸಂಜೆ 7:30ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಇಂದು ಸಾಧುಕೋಕಿಲ ಅವರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ. ಸಾಹಿತ್ಯಾಸಕ್ತರಿಗಾಗಿ 450 ಪುಸ್ತಕ ಮಳಿಗೆಗಳು ನಿರ್ಮಾಣಗೊಂಡಿದ್ದು, 350ಕ್ಕೂ ಹೆಚ್ಚು ವಾಣಿಜ್ಯ ಮಳಿಗೆಗಳು ನಿರ್ಮಾಣ ಮಾಡಲಾಗಿದೆ.

## ಸಂಕ್ಷಿಪ್ತ ಸುದ್ದಿ

### 180ಕ್ಕೂ ಹೆಚ್ಚು ಅಕ್ರಮ ಬಾಂಗ್ಲಾ, ಪಾಕ್ ವಲಸಿಗರ ಬಂಧನ, ಗಡಿಪಾರಿಗೆ ವಿಶೇಷ ಕಾರ್ಯಪಡೆ

**ಬೆಳಗಾವಿ:** ಅಕ್ರಮ ಬಾಂಗ್ಲಾ ವಲಸಿಗರು ಕರ್ನಾಟಕಕ್ಕೆ ಹಾಗೂ ದೇಶಕ್ಕೆ ಅಪಾಯಕರವಾಗಿದ್ದು, ಅವರನ್ನು ಗುರುತಿಸಿ ಗಡಿಪಾರು ಮಾಡಲು ವಿಶೇಷ ಕಾರ್ಯಪಡೆ ರಚಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಬಿಜೆಪಿ ಸದಸ್ಯ ಅರುಣ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಸಾವಿರಾರು ಅಕ್ರಮ ವಲಸಿಗರು ಭಾರತಕ್ಕೆ ಆಗಮಿಸುಸುತ್ತಿದ್ದಾರೆ ಮತ್ತು ದೇಶದ ವಿವಿಧ ಭಾಗಗಳಿಗೆ ತೆರಳುತ್ತಾರೆ ಎಂದಿದ್ದಾರೆ.



ಅಕ್ರಮ ಬಾಂಗ್ಲಾ ವಲಸಿಗರನ್ನು ತಡೆಯುವ ನಿಟ್ಟಿನಲ್ಲಿ ನಮ್ಮ ರಕ್ಷಣಾ ಸಿಬ್ಬಂದಿ ಶ್ರಮ ವಹಿಸುತ್ತಿದ್ದಾರೆ. ಅದರ ಹೊರತಾಗಿಯೂ, ಅವರು ಭಾರತವನ್ನು ಪ್ರವೇಶಿಸುತ್ತಾರೆ. ಅವರನ್ನು ಗುರುತಿಸಲು ವಿಶೇಷ ಕಾರ್ಯಪಡೆ ರಚಿಸಿದ್ದೇವೆ. ಪ್ರತಿ ವರ್ಷ ಸಾವಿರಾರು ಜನರನ್ನು ಗಡೀಪಾರು ಮಾಡಲಾಗುತ್ತಿದೆ. ಪುಟ 2

### ಕೇವಲ ಐದು ತಾಸು 87 ಕೋಟಿಯ ಒಡೆಯನಾಗಿದ್ದ ಬಾಲಕ



**ಬಿಹಾರ:** 9ನೇ ತರಗತಿ ಬಾಲಕನೊಬ್ಬ ಕೇವಲ ಐದು ಗಂಟೆಗಳ ಕಾಲ 87 ಕೋಟಿ ರೂ. ಒಡೆಯನಾಗಿದ್ದ ವಿಚಿತ್ರ ಘಟನೆ ಬಿಹಾರದ ಮುಜಾಫರ್ ಪುರದಲ್ಲಿ ನಡೆದಿದೆ. ಬಾಲಕ ಕೇವಲ 5 ಗಂಟೆಗಳ ಕಾಲ ಕೋಟ್ಯಧಿಪತಿಯಾಗಿದ್ದ, ಅಂದು ಬಾಲಕ ಎಟಿಎಂನಿಂದ 500 ರೂ. ವಿತ್ ಡ್ರಾ ಮಾಡಿದ್ದ, ಸೈಬರ್ ಗೆ ಬಂದು ಸುಮ್ಮನೆ ಖಾತೆಯಲ್ಲಿ ಎಷ್ಟು ಹಣವಿದೆ ನೋಡೋಣವೆಂದು ಪರಿಶೀಲಿಸಿದಾಗ ಅವನ ಬ್ಯಾಂಕ್ ಖಾತೆಯಲ್ಲಿ 87 ಕೋಟಿ ರೂ. ಇರುವುದನ್ನು ಕಂಡು ಒಮ್ಮೆಲೆ ಬೆಚ್ಚಿಬಿದ್ದಿದ್ದ. ಇಷ್ಟು ಬ್ಯಾಲೆನ್ಸ್ ನೋಡಿ ಸೈಬರ್ ಕೆಫೆ ಮಾಲೀಕರು ಹಾಗೂ ವಿದ್ಯಾರ್ಥಿಗಳು ಬೆಚ್ಚಿಬಿದ್ದಿದ್ದಾರೆ. ಇದಾದ ನಂತರ ಸೈಫ್ ಅಲಿ ಮನೆಗೆ ಬಂದು ತಾಯಿಗೆ ವಿಷಯ ತಿಳಿಸಿದ್ದಾನೆ. ಪುಟ 2

» **ಕೈಗೆ ಬಂದ ತುತ್ತು ಬಾಯಿಗೆ ಬರ್ಲಿಲ್ಲ**

# ಬೆಂಗಳೂರಿಗೆ ಕರೆತರದೆ ರಾತ್ರಿ ಎಲ್ಲಾ ರೌಂಡ್ಸ್; ತಲೆಗೆ ಗಾಯ

# ದೂರು ದಾಖಲಿಸಿದ ರವಿ!

**ಬೆಳಗಾವಿ:** ವಿಧಾನ ಪರಿಷತ್‌ನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಅವಾಚ್ಯ ಪದದಿಂದ ನಿಂದನೆ ಮಾಡಿದ ಆರೋಪದಲ್ಲಿ ಪರಿಷತ್ ಸದಸ್ಯ ಸಿ.ಟಿ ರವಿ ಅವರನ್ನು ಗುರುವಾರ ರಾತ್ರಿ ಬಂಧಿಸಲಾಗಿದೆ. ಸುವರ್ಣಸೌಧದಲ್ಲೇ ಸಿಟಿ ರವಿ ಅವರನ್ನು ಬಂಧಿಸಿ ಕರೆದೊಯ್ದ ಪೊಲೀಸರು ಇಂದು ಬೆಂಗಳೂರಿಗೆ ಕರೆತರುತ್ತಾರೆ ಎನ್ನಲಾಗಿತ್ತು. ಆದರೆ, ಬೆಳಗಾವಿಯಿಂದ ಹೊರಟ ಪೊಲೀಸರು ರಾತ್ರಿಯಿಡಿ ಠಾಣೆಯಿಂದ ಠಾಣೆಗೆ ಕರೆದೊಯ್ದಿದ್ದಾರೆ ಎನ್ನಲಾಗಿದೆ.

**'ನನ್ನ ಜೀವಕ್ಕೆ ಅಪಾಯ ಇದೆ':** ಬಂಧನದ ಬಳಿಕ ಪೊಲೀಸ್ ಠಾಣೆ ಒಳಗೆ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿರುವ ಸಿಟಿ ರವಿ ಅವರು, ನನ್ನ ಜೀವಕ್ಕೆ ಅಪಾಯ ಇದೆ.ನನ್ನ ವಿರುದ್ಧ ಸುಳ್ಳು ಸುದ್ದಿ ಹಬ್ಬಿಸಿದ್ದಾರೆ. ನನ್ನ ಜೀವಕ್ಕೆ ಅಪಾಯ ಇದೆ. ನನ್ನ ಜೀವಕ್ಕೇನಾದರೂ ಆದರೆ ಡಿಕೆ ಶಿವಕುಮಾರ್ ಲಕ್ಷ್ಮಿ ಹೆಬ್ಬಾಳ್ಕರ್ ತಂಡವೆ ಕಾರಣ. ತುರ್ತು ಪರಿಸ್ಥಿತಿಯ ಕಾಲಘಟ್ಟದಲ್ಲಿ ನಡೆಸಿಕೊಂಡಿರೊ ತರ ನಡೆಸಿಕೊಳ್ಳುತ್ತಿದ್ದಾರೆ. ಎಲ್ಲವೂ ನಿಗೂಢವಾಗಿದೆ ಎಂದು ಹೇಳಿದ್ದಾರೆ.

**ಸಿ.ಟಿ ರವಿ ಪ್ರತಿ ದೂರು:** ಖಾನಾಪುರ ಠಾಣೆಯಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಸಿಟಿ ರವಿ ಪ್ರತಿ ದೂರು ದಾಖಲಿಸಿದ್ದಾರೆ. ಕೊಲೆಗೆ ಸಂಚು ಹೂಡಲಾಗಿದೆ ಎಂದು ಸಿಟಿ ರವಿ ಆರೋಪಿಸಿದ್ದಾರೆ. ಗುರುವಾರ ರಾತ್ರಿ ಖಾನಪುರ ಪೊಲೀಸ್ ಠಾಣೆಯಿಂದ ಬೆಂಗಳೂರಿಗೆ ಸಿಟಿ ರವಿ ಅವರನ್ನು ಶಿಫ್ಟ್ ಮಾಡುತ್ತಾರೆ ಎನ್ನಲಾಗಿತ್ತು. ಪೊಲೀಸ್ ಠಾಣೆಯಿಂದ ಹೊರ ಬರುವ ವೇಳೆ ಸಿಟಿ ರವಿ ಹಣೆ ಮೇಲೆ ರಕ್ತದ ಕಲೆ ಕಾಣಿಸಿಕೊಂಡಿದೆ. ಅವರು ಗ್ಲಾಸ್ ಒಡೆದು ಹೊರ ಬರಲು ಯತ್ನಿಸಿದ್ದಾರೆ ಎನ್ನಲಾಗಿದ್ದು, ಕೊಲೆ ಮಾಡಲು ಯತ್ನ ಮಾಡ್ತಿದ್ದಾರೆಂದು ಸಿ.ಟಿ ರವಿ ಆರೋಪಿಸಿದ್ದಾರೆ. ಠಾಣೆಯಿಂದ ಸಿ ಟಿ ರವಿ ಅವರನ್ನು ಪೊಲೀಸರು ಹೊತ್ತುಕೊಂಡು ಬಂದಿದ್ದಾರೆ. ಈ ವೇಳೆ ಸಿಟಿ ರವಿ ಅವರನ್ನು ಕರೆದೊಯ್ಯುವ ವಾಹನದ ಮೇಲೂ ದಾಳಿ ನಡೆದಿದೆ. ಪುಟ 2



### ಬಂಧನ ಖಂಡಿಸಿ ಚಿಕ್ಕಮಗಳೂರು ಬಂದ್‌ಗೆ ಕರೆ

## ಕೇಸರಿ ಪಡೆ ನಿಗಿನಿಗಿ ಕೆಂಡ!

**ಬೆಳಗಾವಿ:** ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ನಿಂದಿಸಿದ ಆರೋಪದ ಮೇಲೆ ಬಿಜೆಪಿ ಎಂಎಲ್‌ಸಿ ಸಿ.ಟಿ ರವಿ ಅವರನ್ನ ಪೊಲೀಸರು ಬಂಧಿಸಿದ್ದಾರೆ. ಸದ್ಯ ಈ ಘಟನೆ ರಾಜ್ಯ ರಾಜಕೀಯದಲ್ಲಿ ದೊಡ್ಡ ಸಂಚಲನ ಸೃಷ್ಟಿಸಿದೆ. ಸಿ.ಟಿ ರವಿ ಬಂಧನ ಖಂಡಿಸಿ ಡಿ. 20ರಂದು ಚಿಕ್ಕಮಗಳೂರು ನಗರ ಬಂದ್‌ಗೆ ನಗರ ಬಿಜೆಪಿ ಕರೆ ಕೊಟ್ಟಿದೆ.

ಇಂದು ಬೆಳಗ್ಗೆ 7 ಗಂಟೆಯಿಂದ ಸಂಜೆ 6 ಗಂಟೆವರೆಗೆ ಬಂದ್‌ಗೆ ಕರೆ ಕೊಟ್ಟಿದೆ. ಈ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ನೂರಾರು ಪೊಲೀಸರು ಸ್ಥಳದಲ್ಲಿ ಬೀಡುಬಿಟ್ಟಿದ್ದಾರೆ. ಪಶ್ಚಿಮ ವಲಯ ಐಜಿಪಿ ಅಮಿತ್ ಸಿಂಗ್ ಗಸ್ತು ತಿರುಗುತ್ತಿದ್ದಾರೆ. ನಗರದ ಹನುಮಂತಪ್ಪ ಸರ್ಕಲ್‌ನಲ್ಲಿ 6 ಕೆಎಸ್‌ಆರ್‌ಪಿ



ತುಕಡಿಗಳು ಸೇರಿದಂತೆ ನೂರಾರು ಪೊಲೀಸರನ್ನು ಭದ್ರತೆಗೆ ನಿಯೋಜಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರ ವಹಿಸಲಾಗಿದೆ. ಪ್ರತಿಭಟನೆ ನಡೆಸುತ್ತಿದ್ದ ವೇಳೆ ಕೆಲವರನ್ನ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಪುಟ 2

## ಸಿ.ಟಿ ರವಿಗೆ ಮತ್ತೊಂದು ಸಂಕಷ್ಟ!

### ಅಶ್ಲೀಲ ಪದ ಬಳಕೆ ಕೇಸ್‌ಗೆ ಮಹಿಳಾ ಆಯೋಗ ಎಂಟ್ರಿ!

**ಬೆಂಗಳೂರು:** ಬೆಳಗಾವಿ ವಿಧಾನಸಭೆ ಚಳಿಗಾಲದ ಅಧಿವೇಶನದ ಕೊನೆಯ ದಿನದ ಕಲಾಪದಲ್ಲಿ ಭಾರೀ ಹೈಡ್ರಾಮ ಉಂಟಾಗಿತ್ತು. ಗುರುವಾರ ಮಧ್ಯಾಹ್ನ ಪರಿಷತ್‌ನಲ್ಲಿ ಬಿಜೆಪಿ ಪರಿಷತ್ ಸದಸ್ಯ ಸಿಟಿ ರವಿ ಅವರು ತಮ್ಮ ವಿರುದ್ಧ ಅಸಂವಿಧಾನಿಕ ಪದ ಬಳಕೆ ಮಾಡಿದ್ದಾರೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಗಂಭೀರ ಆರೋಪ ಮಾಡಿದ್ದರು. ಈ ಪ್ರಕರಣದಲ್ಲಿ ಈಗಾಗಲೇ ಸಿಟಿ ರವಿ ಅವರ ಬಂಧನ ಕೂಡ ಆಗಿದೆ. ಆದರೆ ಇದೀಗ ಅವರಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ.

**ಸಂಕಷ್ಟ:** ಹೌದು, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರನ್ನ ಅಶ್ಲೀಲ ಪದ ಬಳಸಿ ನಿಂದನೆ ಮಾಡಿದ್ದಾರೆ ಎನ್ನುವ ಆರೋಪದ ಪ್ರಕರಣಕ್ಕೆ ಸಂಬಂಧಸಿದಂತೆ ಬಿಜೆಪಿ ಪರಿಷತ್ ಸದಸ್ಯ ಸಿ.ಟಿ ರವಿಗೆ ಮತ್ತೊಂದು ಸಂಕಷ್ಟ ಎದುರಾಗಿದೆ. ಈ ಪ್ರಕರಣಕ್ಕೆ ಇದೀಗ ರಾಜ್ಯ ಮಹಿಳಾ ಆಯೋಗ ಎಂಟ್ರಿ ಕೊಟ್ಟಿದೆ.



**ಮಹಿಳಾ ಆಯೋಗದಿಂದ ಸಿ.ಟಿ ರವಿಗೆ ನೊಟೀಸ್ ಸಾಧ್ಯತೆ:** ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಅವರು ಪ್ರಕರಣಕ್ಕೆ ಸಂಬಂಧಸಿದಂತೆ ಆಯೋಗದಲ್ಲಿ ಸ್ವಯಂ ಪ್ರೇರಿತ ದೂರು ದಾಖಲಿಸಲು ತಯಾರಿ ನಡೆಸಿದ್ದಾರೆ. ಸಿ.ಟಿ ರವಿ ಅವರಿಗೆ ಇಂದು ಮಹಿಳಾ ಆಯೋಗದಿಂದ ನೊಟೀಸ್ ಕಳಿಸುವ ಸಾಧ್ಯತೆ ಇದೆ. ಘಟನೆಯ ಬಗ್ಗೆ ಮಾಹಿತಿ ಕೇಳಿ ಆಯೋಗದಿಂದ ನೊಟೀಸ್ ನೀಡಲಾಗುತ್ತದೆ ಎಂದು ಹೇಳಲಾಗುತ್ತಿದೆ.

**ಸಚಿವೆಯ ವಿಚಾರ ಅಲ್ಲ, ಹೆಣ್ಣಿನ ಘನತೆ, ಮರ್ಯಾದೆಯ ಪ್ರಶ್ನೆ:** ಈ ಬಗ್ಗೆ ಮಾಧ್ಯಮಕ್ಕೆ ಮಹಿಳಾ ಆಯೋಗ ಮಾಹಿತಿ ನೀಡಿದ್ದು, ಇದು ಸಚಿವೆಯ ವಿಚಾರ ಅಲ್ಲ, ಇದು ಒಂದು ಹೆಣ್ಣಿನ ಘನತೆ, ಮರ್ಯಾದೆಯ ಪ್ರಶ್ನೆ ಎಂದು ಹೇಳಿದೆ. ಪುಟ 2

## ಶಾಸಕಾಂಗ ವ್ಯವಸ್ಥೆಗೆ ಅವಮಾನ

**ಬೆಂಗಳೂರು/ಬೆಳಗಾವಿ:** ಸಿ.ಟಿ ರವಿ ಅವರ ಹೇಳಿಕೆ ಶಾಸಕಾಂಗ ವ್ಯವಸ್ಥೆಗೆ ದೊಡ್ಡ ಅವಮಾನ. ಕಾಂಗ್ರೆಸ್ ಪಕ್ಷದ ಅಧ್ಯಕ್ಷನಾಗಿ ಸಿ.ಟಿ ರವಿ ಅವರ ಹೇಳಿಕೆಯನ್ನು ತೀವ್ರವಾಗಿ ಖಂಡಿಸುತ್ತೇನೆ. ಬಿಜೆಪಿಯ ಕೊನೆಗಾಲ ಆರಂಭವಾಗಿದೆ ಎಂಬುದನ್ನು ಅವರು ಅರಿತುಕೊಳ್ಳಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ಎಚ್ಚರಿಸಿದ್ದಾರೆ.

ವಿಧಾನ ಪರಿಷತ್ ಕಲಾಪದ ವೇಳೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ನಿಂದನೆ ಆರೋಪ ಹಾಗೂ ಬಂಧನ ಕುರಿತು ಮಾಧ್ಯಮದ ಜೊತೆಗೆ ಅವರು ಮಾತನಾಡಿದ್ದಾರೆ. ಸಿಟಿ ರವಿ ಹೇಳಿಕೆ ಶಾಸಕಾಂಗ ವ್ಯವಸ್ಥೆಗೆ ದೊಡ್ಡ ಅವಮಾನ ಎಂದಿದ್ದಾರೆ.

ಅಮಿತ್ ಶಾ ಹೇಳಿಕೆಗೆ ದೇಶದಲ್ಲಿ ತೀವ್ರ ವಿರೋಧ ವ್ಯಕ್ತವಾಗಿತ್ತು. ಇದನ್ನು ವಿರೋಧಿಸಿ ಪ್ರತಿಭಟನೆ ನಡೆಸುತ್ತಿದ್ದ ವೇಳೆ ಸದನದಲ್ಲಿ ರಾಹುಲ್ ಗಾಂಧಿ ಡ್ರಗ್ ಅಡಿಕ್ಟ್ ನಾಯಕ ಎಂದು ಕೂಗಿದ್ರು. ಪರಿಷತ್‌ನಲ್ಲಿದ್ದ ನಮ್ಮ ಸದಸ್ಯರ ಬಳಿ ಮಾಹಿತಿ ಪಡೆದೆ, ರಾಹುಲ್ ಗಾಂಧಿ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡುತ್ತಿದ್ದರು. ಇದಕ್ಕೆ ಸದನದಲ್ಲಿ ತೀವ್ರ ವಿರೋಧ ವ್ಯಕ್ತವಾಗಿತ್ತು. ಆ ಸಂದರ್ಭದಲ್ಲಿ ಲಕ್ಷ್ಮಿ ಹೆಬ್ಬಾಳ್ಕರ್ ಸಿಟಿ ರವಿ ಕಾರು ಅಪಘಾತ ಪ್ರಕರಣ ಪ್ರಸ್ತಾಪಿಸಿ ಕೊಲೆಗಡುಕ




ಎಂದಿದ್ದಾರೆ. ಕೊಲೆಗಡುಕ ಎಂದಿದ್ದಕ್ಕೆ ಆ ರೀತಿ ನಿಂದಿಸಿದ್ದು ಸರಿನಾ..? ಸಂಸ್ಕೃತಿ ಹೊಂದಿರುವ ಪಕ್ಷ, ನಾಲಗೆಯಲ್ಲಿ ಆಚಾರ, ವಿಚಾರ ಎಲ್ಲಿದೆ? ಪೊಲೀಸರು ಕಾನೂನು ಕ್ರಮ ಏನಾಗಬೇಕೋ ಅದಾಗುತ್ತೆ ಎಂದು ಹೇಳಿದ್ದಾರೆ.

ಹಿರಿಯ ನಾಯಕರಾಗಿ ಇಂತಹ ಮಾತುಗಳು ಸರಿಯಲ್ಲ. ಅವರನ್ನು ನಂಬಿ ಹಿಂದೆ ನಿಂತ ನಾಯಕರಿಗೂ ಇದು ಶೋಭೆ ತರಲ್ಲ. ಪುಟ 2

### ಭದ್ರಾವತಿಯ ರೈಸ್‌ಮಿಲ್‌ನಲ್ಲಿ ಬಾಯ್ಲರ್ ಸ್ಫೋಟ

## ಓರ್ವ ಕಾರ್ಮಿಕ ಸಾವು

**ಶಿವಮೊಗ್ಗ:** ಶಿವಮೊಗ್ಗ ಜಿಲ್ಲೆಯ ಭದ್ರಾವತಿಯ ಚನ್ನಗಿರಿ ರಸ್ತೆಯಲ್ಲಿರುವ ಗಣೇಶ್ ರೈಸ್‌ಮಿಲ್‌ನಲ್ಲಿ ಬಾಯ್ಲರ್ ಸ್ಫೋಟದಿಂದ ಓರ್ವ ಕಾರ್ಮಿಕ ಮೃತಪಟ್ಟಿದ್ದು 7 ಜನರಿಗೆ ಗಾಯಗಳಾಗಿವೆ. ಮೃತ ವ್ಯಕ್ತಿಯನ್ನು ಬಾಯ್ಲರ್ ಅಪರೇಟರ್ ರಘು ಎಂದು ತಿಳಿದುಬಂದಿದ್ದು, ಕಳೆದ 15 ವರ್ಷಗಳಿಂದ ಇದೇ ರೈಸ್ ಮಿಲ್‌ನಲ್ಲಿ ಕೆಲಸ ಮಾಡುತ್ತಿದ್ದರು. ಭದ್ರಾವತಿಯ ನಿವಾಸಿಯಾಗಿರುವ ರಘು ಅವರಿಗೆ ಇಬ್ಬರು ಮಕ್ಕಳಿದ್ದರು.

ದೀಪು ಹಾಗೂ ಜಗದೀಶ್ ಎಂಬುವವರಿಗೆ ಸೇರಿದ ರೈಸ್ ಮಿಲ್ ಇದಾಗಿದ್ದು, ಘಟನೆಯಲ್ಲಿ ಇಬ್ಬರು ನಾಗರಿಕರು ಸೇರಿ ಒಟ್ಟು 7 ಜನರಿಗೆ ಗಂಭೀರ ಗಾಯಗಳಾಗಿವೆ. ಮೂವರನ್ನು ಮೆಗ್ಗಾನ್ ಆಸ್ಪತ್ರೆಗೆ ದಾಖಲು ಮಾಡಲಾಗಿದ್ದು, ನಾಲ್ವರನ್ನು ಭದ್ರಾವತಿಯ ಸರ್ಕಾರಿ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಸ್ಫೋಟದ ತೀವ್ರತೆಗೆ ಅಕ್ಕಪಕ್ಕದ ಮನೆಗಳಿಗೂ ಹಾನಿಯಾಗಿದೆ.

**ಸ್ಥಳೀಯರು ಹೇಳಿದ್ದೇನು?:** ರೈಸ್ ಮಿಲ್ ಎದುರಿನ ಮನೆ ಮಾಲೀಕರಾದ ಕವಿತಾ ಎಂಬುವವರು ಘಟನೆ ಕುರಿತು ಮಾತನಾಡಿದ್ದು, ಇದ್ದಕ್ಕಿದ್ದ ಹಾಗೆ ಭಾರೀ ಶಬ್ದದ ಜೊತೆಗೆ



ಹೊಗೆ ಕಂಡು ಬಂತು. ಜನ ಎಲ್ಲಾ ಕೂಗುವುದು ಕೇಳಿಸಿತು. ಜನವಸತಿ ಪ್ರದೇಶದಲ್ಲಿ ರೈಸ್ ಮಿಲ್ ಬೇಡ ಎಂದು ಹಲವು ಬಾರಿ ಹೇಳಿದರು ಕೈಗಾರಿಕಾ ಪ್ರದೇಶ ಎಂದು ನಡೆಸುತ್ತಿದ್ದರು ಎಂದಿದ್ದಾರೆ.

**ಮನೇಲಿದ್ದ ಟಿವಿಗೆ ಡ್ಯಾಮೇಜ್:** 40–50 ವರ್ಷಗಳಿಂದ ರೈಸ್ ಮಿಲ್ ಇಲ್ಲಿದ್ದು ಆಗೆಲ್ಲ ಮನೆಗಳಿರಲಿಲ್ಲ. ಬಾಂಬ್ ಬ್ಲಾಸ್ಟ್ ಆದ ರೀತಿ ಭಯವಾಯಿತು. ಮನೇಲಿದ್ದ ಟಿವಿಗೆ ಡ್ಯಾಮೇಜ್ ಆಗಿದೆ. ಪುಟ 2

## ನಂದಿ ಬೆಟ್ಟದಲ್ಲಿ ಹೊಸ ವರ್ಷಾಚರಣೆಗೆ ನಿರ್ಬಂಧ

**ಬೆಂಗಳೂರು:** ಹೊಸ ವರ್ಷಾಚರಣೆಗೂ ನಂದಿಬೆಟ್ಟಕ್ಕೂ ಅದೇನೊ ಒಂಥರ ನಂಟು. ಪ್ರಕೃತಿ ಮಡಿಲಲ್ಲಿ ಕುಡಿದು, ಕುಣಿದು, ಕುಪ್ಪಳಿಸಿ ಹೊಸ ವರ್ಷ 2025ನ್ನು ಆಚರಿಸೋಣ ಅಂತ, ಕೆಲವು ಪಾರ್ಟಿ ಪ್ರಿಯರು ಅಂದುಕೊಂಡಿದ್ದಾರೆ. ಆದರೆ, ಈಗಲೇ ನಿಮ್ಮ ಪ್ಲಾನ್ ಅನ್ನು ಬದಲಾಯಿಸಿಕೊಳ್ಳಿ, ಏಕೆಂದರೆ ನಂದಿಗಿರಿಧಾಮದಲ್ಲಿ ಹೊಸ ವರ್ಷಾಚರಣೆಗೆ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಸಂಪೂರ್ಣ ನಿಷೇಧ ಹೇರಿದೆ.

ಚಿಕ್ಕಬಳ್ಳಾಪುರ ತಾಲೂಕಿನ ನಂದಿಗಿರಿಧಾಮ ಅಂದರೆ ತಂಪಾದ ಹವಾಗುಣ, ತುಂತುರು ಮಳೆ, ಗಿಡ, ಮರ, ಬಳ್ಳಿಗಳ ಸೊಬಗು, ನಕ್ಕು ನಲಿಯುವ ತರಹೆವಾರು ಹೂಗಳ ವಯ್ಯಾರ. ಮಿಗಿಲಾಗಿ ಸಮುದ್ರಮಟ್ಟದಿಂದ 1600 ಮೀಟರ್ ಎತ್ತರದಲ್ಲಿ ನಿಂತು ಸೂರ್ಯೋದಯ ಹಾಗೂ ಸೂರ್ಯಾಸ್ತ ವಿಹಂಗಮ ನೋಟ ನೋಡುವುದಕ್ಕೆ ತುಂಬಾ ಫೇಮಸ್.



ನಂದಿಗಿರಿಧಾಮ ಕಾಣಸಿಗುವ ಬೆಳ್ಳಿ ಮೋಡ, ಇಬ್ಬನಿ, ಸುತ್ತಲೂ ಎತ್ತ ನೋಡಿದರೂ ಮುತ್ತಿಕ್ಕುವ ಮಂಜು, ಇಂಥ ಪ್ರಕೃತಿ ಸೊಬಗಿನಲ್ಲಿ ಕುಳಿತು ಹೊಸ ವರ್ಷ 2025ನ್ನು ಸ್ವಾಗತಿಸೋಣ ಅಂತ ಕೆಲವು ಪಾರ್ಟಿ ಪ್ರಿಯರು ಅಂದುಕೊಂಡಿದ್ದರು. ಆದರೆ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಪಾರ್ಟಿ ಪ್ರಿಯರ ಕನಸು ಭಗ್ನ ಮಾಡಿದೆ. ಗಿರಿಧಾಮದಲ್ಲಿ ಹೊಸ ವರ್ಷಾಚರಣೆಗೆ ನಿರ್ಬಂಧ ವಿಧಿಸಿದೆ. ಪುಟ 2

### ಸಿಎನ್‌ಜಿ ಟ್ಯಾಂಕರ್ ನಡುವೆ ಡಿಕ್ಕಿ

## 15 ಮಂದಿ ಸಾವು!

### ಧಗಧಗಿಸಿದ ಅಗ್ನಿ ಜ್ವಾಲೆ ನಾಲ್ವರು ಸಜೀವ ದಹನ

**ಜೈಪುರ:** ರಾಜಸ್ಥಾನ ಜೈಪುರದ ಭಂಕ್ರೋಟಾ ಪ್ರದೇಶದ ಪೆಟ್ರೋಲ್ ಪಂಪ್‌ನಲ್ಲಿ ಭೀಕರ ಅಪಘಾತ ಸಂಭವಿಸಿದೆ. ಎರಡು ಸಿಎನ್‌ಜಿ ಟ್ಯಾಂಕರ್‌ಗಳು ಪರಸ್ಪರ ಡಿಕ್ಕಿ ಹೊಡೆದ ಪರಿಣಾಮ ಪಂಪ್‌ನಲ್ಲಿ ಭಾರೀ ಬೆಂಕಿ ಕಾಣಿಸಿಕೊಂಡಿದೆ. ಹಲವು ವಾಹನಗಳಿಗೆ ಏಕಾಏಕಿ ಬೆಂಕಿ ಹೊತ್ತಿಕೊಂಡಿದೆ, ಈ ವೇಳೆ ನಾಲ್ವರು ಸಜೀವ ದಹನವಾಗಿದ್ದಾರೆ.

ಶುಕ್ರವಾರ (ಇಂದು) ಮುಂಜಾನೆ 5:30ರ ಸುಮಾರಿಗೆ ಅಜ್ಮೀರ್ ರಸ್ತೆಯಲ್ಲಿ ಘಟನೆ ನಡೆದಿದೆ. ಟ್ರಕ್ ಇತರ ವಾಹನಗಳಿಗೆ



ಡಿಕ್ಕಿ ಹೊಡೆದ ನಂತರ ಪೆಟ್ರೋಲ್ ಪಂಪ್ ಬಳಿ ನಿಲ್ಲಿಸಿದ್ದ ಸಿಎನ್‌ಜಿ ಟ್ಯಾಂಕರ್ ಗೂ ಬೆಂಕಿ ಹೊತ್ತಿಕೊಂಡಿದೆ. ನಾಲ್ವರು ಸಜೀವ ದಹನವಾಗಿದ್ದು 15 ಮಂದಿ ಸಾವನ್ನಪ್ಪಿದ್ದಾರೆ. ಪುಟ 2

## ಪರಿಸರ ಸ್ನೇಹಿ ಕ್ರಿಸ್ಮಸ್ ಟ್ರೀ ರಚಿಸಿದೆ ವಿದ್ಯಾರ್ಥಿಗಳು

**ಬೆಂಗಳೂರು:** ಬೆಂಗಳೂರಿನ ವರ್ತೂರಿನ ದಿ ಗ್ರೀನ್ ಸ್ಕೂಲ್ ಬೆಂಗಳೂರು ವಿದ್ಯಾರ್ಥಿಗಳು ಈ ವರ್ಷ ಕ್ರಿಸ್ ಮಸ್ ಆಚರಿಸಲು ವಿಶಿಷ್ಟ ವಿಧಾನವನ್ನು ಅಳವಡಿಸಿಕೊಂಡಿದ್ದಾರೆ. ಮರುಬಳಕೆ ಮಾಡಿದ ವಸ್ತುಗಳನ್ನು ಬಳಸಿಕೊಂಡು ಅತ್ಯಾಕರ್ಷಕ ಕ್ರಿಸ್ಮಸ್ ಮರವನ್ನು ರಚಿಸಿದ್ದಾರೆ, ಇದು ಸೃಜನಶೀಲತೆ ಮತ್ತು ಸುಸ್ಥಿರತೆಗೆ ಅವರ ಬದ್ಧತೆಯನ್ನು ಪ್ರದರ್ಶಿಸಿದೆ. ಬಿದಿರು ಮತ್ತು ವಿಷಕಾರಿಯಲ್ಲದ ಬಣ್ಣದಿಂದ ಮಾಡಿದ ಈ ಮರವು 3.2 ಅಡಿ ಎತ್ತರವಿದ್ದು, ಶಾಲೆಯ ಅಂಗಳದಲ್ಲಿ ಅಳವಡಿಸಲಾಗಿದೆ. ಕೈಯಿಂದ ಕೆತ್ತಲಾದ ಬಿದಿರಿನ ಹಾಳೆಗಳು ಮತ್ತು ರಟ್ಟಿನಿಂದ ಮಾಡಿದ ನಕ್ಷತ್ರದಿಂದ ಅಲಂಕರಿಸಲ್ಪಟ್ಟಿದೆ. ಈ ಪರಿಸರ ಸ್ನೇಹಿ ನಡೆಯು ತ್ಯಾಜ್ಯವನ್ನು ಕಡಿಮೆ ಮಾಡಲು ಮತ್ತು ಪರಿಸರ ಜವಾಬ್ದಾರಿಯುತ ಅಭ್ಯಾಸಗಳನ್ನು ಉತ್ತೇಜಿಸಲು ಶಾಲೆಯ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುತ್ತಿರುವುದಕ್ಕೆ ಸಾಕ್ಷಿಯಾಗಿದೆ.



## ಬೆಳಗಾವಿ ಕಲಾಪದಲ್ಲಿ ಅಂಬೇಡ್ಕರ್ ಭಾವಚಿತ್ರ ಪ್ರದರ್ಶಿಸಿ ಶಾ ವಿರುದ್ಧ ಧಿಕ್ಕಾರ ಕೂಗಿದ ಕಾಂಗ್ರೆಸ್

**ಬೆಳಗಾವಿ:** ವಿಧಾನಸಭೆ ಮತ್ತು ಪರಿಷತ್ ಕಲಾಪದಲ್ಲೂ ಕಾಂಗ್ರೆಸ್ ಶಾಸಕರು ಅಂಬೇಡ್ಕರ್ ಭಾವಚಿತ್ರ ಪ್ರದರ್ಶಿಸಿ ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಧಿಕ್ಕಾರ ಕೂಗಿದ್ದಾರೆ.ನಿನ್ನೆ ವಿಧಾನಸಭೆಯ ಕಲಾಪ ಆರಂಭವಾಗುತ್ತಿದ್ದಂತೆ ಅಮಿತ್ ಶಾ ಹೇಳಿಕೆಗೆ ಖಂಡನೆ ವ್ಯಕ್ತಪಡಿಸಿ ಚರ್ಚೆಗೆ ಆಗ್ರಹಿಸಿದರು. ಸದನದಲ್ಲಿ ನಿರ್ಣಯ ಕೈಗೊಳಲು ಒತ್ತಾಯಿಸಿದರು.ಸದನದಲ್ಲಿ ಒಟ್ಟಾಗಿ ನಿಂತು ಅಂಬೇಡ್ಕರ್ ಫೋಟೋ ಹಿಡಿದು ಕಾಂಗ್ರೆಸ್ ಸದಸ್ಯರು ಧಿಕ್ಕಾರ ಕೂಗಿದರು. ಈ ಸಂದರ್ಭದಲ್ಲಿ ಬಿಜೆಪಿಯವರು ಕಾಂಗ್ರೆಸ್‌ನಿಂದಲೇ ಅಂಬೇಡ್ಕರ್ ಅವರಿಗೆ ಅನ್ಯಾಯವಾಗಿದೆ ಎಂದು ಹೇಳಿ ಪ್ರತಿಭಟಿಸಿದರು. ಈ ವೇಳೆ ಕಾಂಗ್ರೆಸ್ ಸದಸ್ಯರು ಸದನದಲ್ಲಿ ಪ್ರದರ್ಶಿಸಿದ ಅಂಬೇಡ್ಕರ್ ಭಾವಚಿತ್ರವನ್ನೇ ತೆಗೆದುಕೊಂಡು ಕಾಂಗ್ರೆಸ್ ವಿರುದ್ಧವೇ ಬಿಜೆಪಿ ಶಾಸಕ ಗುರುರಾಜ್ ಗಂಟಿಹೊಳೆ ಪ್ರದರ್ಶಿಸಿದರು.ಗದ್ದಲ, ಕೋಲಾಹಲ ಜೋರಾಗುತ್ತಿದ್ದಂತೆ ಸ್ಪೀಕರ್ ಹತ್ತು ನಿಮಿಷ ಕಲಾಪವನ್ನು ಮುಂದೂಡಿದರು.



## ಬಿಎಸ್‌ವೈ ಹೆಸರಲ್ಲಿ ನಡೆಯುವುದು ಶಕ್ತಿ ಪ್ರದರ್ಶನವಲ್ಲ, ಗುಂಪುಗಾರಿಕೆ ಪ್ರದರ್ಶನ

**ಬಾಗಲಕೋಟೆ:** ಯಡಿಯೂರಪ್ಪ ಹೆಸರಲ್ಲಿ ನಡೆಯುವ ಉತ್ಸವ ಶಕ್ತಿ ಪ್ರದರ್ಶನವಲ್ಲ, ಗುಂಪುಗಾರಿಕೆ ಪ್ರದರ್ಶನ ಎಂದು ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಹೇಳಿದ್ದಾರೆ.



ಬಾಗಲಕೋಟೆಯಲ್ಲಿ ಮಾತನಾಡಿದ ಅವರು, ಬಿಜೆಪಿ ಸಂಘಟನೆ ಉಳಿಯತ್ತದೆ ಮತ್ತೆ ಬಿಜೆಪಿ ಮತ್ತಷ್ಟು ಗಟ್ಟಿಯಾಗುತ್ತದೆ. ಪ್ರತಿ ವರ್ಷವೂ ಯಡಿಯೂರಪ್ಪನವರ ಹುಟ್ಟು ಹಬ್ಬ ಆಚರಣೆಗೆ ಮಾಡದ ಸಮಾವೇಶ ಈಗ ಯಾಕೆ ಎಂದು ಪ್ರಶ್ನಿಸಿದರು. ಹೀಗೆ ಗುಂಪುಗಾರಿಕೆ ನಡೆಯುವ ಕೆಲಸವನ್ನು ಯಡಿಯೂರಪ್ಪ ನಿಲ್ಲಿಸಬೇಕು ಎಂದರು. ಬಿಜೆಪಿಯಲ್ಲಿ ಇರುವ ಗುಂಪುಗಾರಿಕೆ ಮುಂದೆ ಸರಿ ಹೋಗುತ್ತದೆ. ಈಗ ಯಾರ್ಯಾರು ಏನು ಬೇಕಾದ್ರೂ ಹಾರಾಡಬಹುದು. ಬಿಜೆಪಿ ಪಕ್ಷಕ್ಕಾಗಿ ತಪಸ್ಸು ಮಾಡಿ ಕಟ್ಟಿದವರಿಗೆ ಬೆಲೆ ಇದೆ. ಬಿಜೆಪಿಯಲ್ಲಿ ಗುಂಪುಗಾರಿಕೆ ನಡೆಯುವುದಿಲ್ಲ. ವರಿಷ್ಠರು ಅದನ್ನು ಸರಿಯಾಗಿ ಚಿವುಟಿ ಹಾಕುತ್ತಾರೆ ಎಂದು ಹೇಳಿದರು.

ರೇಣುಕಾಚಾರ್ಯ ಬಣದ ಗುಂಪು ಸಮಾವೇಶ ಮಾಡುತ್ತಿದೆ. ಅದಕ್ಕೆ ಬಿಎಸ್‌ವೈ ಅವರ ಒಪ್ಪಿಗೆ ಇದೆ ಇಲ್ವೋ ಗೊತ್ತಿಲ್ಲ. ಆದರೆ ಗುಂಪುಗಾರಿಕೆ ಆಗುವುದಕ್ಕೆ ಬಿಎಸ್‌ವೈ ಒಪ್ಪಿಗೆ ಕೊಡುತ್ತಾರೆ ಎನ್ನುವುದು ನನಗೇನು ಅನಿಸುವುದಿಲ್ಲ ಎಂದರು.

ಕಾಂಗ್ರೆಸ್‌ನಲ್ಲಿ ಒಳ ಒಳಗೆ ಬಡಿದಾಟವಿದೆ. ಯಾವಾಗ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಕೊಡುತ್ತಾರೆ ಅಂತಾ ಕಾಯ್ತಿದ್ದಾರೆ. ನಾಯಕರು ಸುಮ್ಮನೆ ಸಿದ್ದರಾಮಯ್ಯ ಬೆನ್ನಿಗೆ ನಾವಿದ್ದೇವೆ ಎನ್ನುತ್ತಾರೆ. ಸಿಎಂ ಬೆಂಬಲಕ್ಕೆ ಯಾರೆಲ್ಲ ನಿಂತಿದ್ದಾರೋ ಅವರೆಲ್ಲ ಸಿಎಂ ಖುರ್ಚಿ ಮೇಲೆ ಸಿಎಂ ಆಗಲು ಟವೆಲ್ ಹಾಕಿದ್ದಾರೆ. ರಥಸಪ್ತಮಿ ದಿನದಿಂದ ರಾಜ್ಯದಲ್ಲಿ ಏನೇನು ರಾಜಕೀಯ ಬದಲಾವಣೆ ಆಗುತ್ತದೆ ಕಾದು ನೋಡಬೇಕು ಎಂದು ಮಾರ್ಮಿಕವಾಗಿ ನುಡಿದರು.

## ಅಕ್ರಮವಾಗಿ ನೆಲೆಸಿದ್ದ 24 ಮಂದಿ ಪಾಕ್, 159 ಮಂದಿ ಬಾಂಗ್ಲಾ ಪ್ರಜೆಗಳು ವಶಕ್ಕೆ: ಸರ್ಕಾರ ಅಂಕಿ-ಅಂಶ ಬಿಡುಗಡೆ

**ಬೆಳಗಾವಿ:** ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಪಾಕಿಸ್ತಾನ ಮತ್ತು ಬಾಂಗ್ಲಾ ಪ್ರಜೆಗಳ ಅಂಕಿ ಅಂಶವನ್ನು ಸರ್ಕಾರ ಬಿಡುಗಡೆ ಮಾಡಿದೆ. ಬೆಂಗಳೂರು ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿದ್ದ 24 ಜನ ಪಾಕಿಸ್ತಾನ ಮತ್ತು 159 ಮಂದಿ ಬಾಂಗ್ಲಾದೇಶದ ಪ್ರಜೆಗಳನ್ನ ವಶಕ್ಕೆ ಪಡೆಯಲಾಗಿದೆ. ಅಲ್ಲದೇ 115 ಜನ ಬಾಂಗ್ಲಾದೇಶಿಗರು ನಕಲಿ ದಾಖಲೆಗಳ ಮೂಲಕ ವಾಸವಿರುವುದು ಕಂಡುಬಂದಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದರು. ವಿಧಾನ ಪರಿಷತ್‌ನಲ್ಲಿ ಬಿಜೆಪಿ ಸದಸ್ಯ ಡಿ.ಎಸ್ ಅರುಣ್ ಪ್ರಶ್ನೆಗೆ ಸಚಿವರು ಉತ್ತರ ನೀಡಿದರು. ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿದ್ದ 24 ಜನ ಪಾಕಿಸ್ತಾನ, 159 ಮಂದಿ ಬಾಂಗ್ಲಾದೇಶದ ಪ್ರಜೆಗಳನ್ನ ವಶಕ್ಕೆ ಪಡೆಯಲಾಗಿದೆ. ಅಲ್ಲದೇ 115 ಜನ ಬಾಂಗ್ಲಾದೇಶಿಯರು ನಕಲಿ ದಾಖಲೆಗಳ ಮೂಲಕ ವಾಸವಿರುವುದು ಕಂಡುಬಂದಿದೆ. ಅದಕ್ಕಾಗಿ ಬೆಂಗಳೂರಿನಲ್ಲಿ ವಿಶೇಷ ಘಟಕ ಸ್ಥಾಪನೆ ಮಾಡಲಾಗಿದೆ. ಅಕ್ರಮವಾಗಿ ಬರೋದು ಇದೇನೂ ಹೊಸದಲ್ಲ ಲಕ್ಷಾಂತರ ಜನ ಭಾರತಕ್ಕೆ ಬರ್ತಿದ್ದಾರೆ. ಅವರನ್ನ ತಡೆಗಟ್ಟುವ ಕೆಲಸ ಸೈನಿಕರು ಬಾರ್ಡರ್‌ನಲ್ಲಿ ಮಾಡ್ತಿದ್ದಾರೆ. ಆದರೂ ನುಸುಳಿಕೊಂಡು ಹೇಗೆ ಭಾರತಕ್ಕೆ ಬರ್ತಾರೆ ಅನ್ನೋದು ಪ್ರಶ್ನೆಯಾಗಿದೆ. ಇದನ್ನ ತಡೆಗಟ್ಟುವ ಕೆಲಸ ಪ್ರತಿ ವರ್ಷ ನಾವು ಇದರ ಪರಿಶೀಲನೆ ಮಾಡ್ತೀವಿ. ಅಕ್ರಮವಾಗಿ ಇರೋರನ್ನ ಗಡಿಪಾರು ಮಾಡೋ ಕೆಲಸ ಮಾಡ್ತಿದ್ದೇವೆ ಎಂದು ತಿಳಿಸಿದರು. ಇನ್ನೂ ಆಫ್ರಿಕಾದಿಂದ ಬಂದು ಡ್ರಗ್ಸ್ ಮಾರಾಟ ಮಾಡೋ ಕೆಲಸ ಆಗ್ತಿದೆ. ಸ್ಟೂಡೆಂಟ್ ವೀಸಾದಲ್ಲಿ ಬಂದು ಡ್ರಗ್ ದಂಧೆ ಮಾಡ್ತಾರೆ. ಈ ರೀತಿ ಅಕ್ರಮವಾಗಿ ಬಂದು ನೆಲೆಸಿರುವವರ ಪತ್ತೆಗೆ ಪ್ರತಿ ಜಿಲ್ಲೆಯಲ್ಲಿ ಸ್ಪೆಷಲ್ ಟಾಸ್ಕ್ ಫೋರ್ಸ್ ರಚನೆ ಮಾಡಲಾಗಿದೆ. ನಿರಂತರವಾಗಿ ಅನಧಿಕೃತವಾಗಿ ಬಂದಿರುವ ವಿದೇಶಿ ಪ್ರಜೆಗಳನ್ನ ಪತ್ತೆಹಚ್ಚುವ ಕೆಲಸ ಮಾಡ್ತಿದ್ದೇವೆ ಎಂದರು.



## ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಸಿಟಿ ರವಿ ಮಾತು; ಲೈಂಗಿಕ ಕಿರುಕುಳದಂತೆ ಕಾಣುತ್ತಿದೆ ಎಂದ ಸಿಎಂ

**ಸುವರ್ಣ ಸೌಧ:** ವಿಧಾನಸಭೆ ಚಳಿಗಾಲದ ಅಧಿವೇಶನದ ಕೊನೆಯ ದಿನವಾದ ಇಂದು ಕಲಾಪದಲ್ಲಿ ಭಾರೀ ಹೈಡ್ರಾಮ ಉಂಟಾಗಿದೆ. ಗುರುವಾರ ಮಧ್ಯಾಹ್ನ ಪರಿಷತ್‌ನಲ್ಲಿ ಅಂಬೇಡ್ಕರ್ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ನೀಡಿದ್ದ ಹೇಳಿಕೆಯ ಕುರಿತು ನಡೆಯುತ್ತಿದ್ದ ಚರ್ಚೆಯ ಸಂದರ್ಭದಲ್ಲಿ ಗದ್ದಲ ಉಂಟಾಗಿದೆ. ಈ ವೇಳೆ ಪರಿಷತ್ ಬಿಜೆಪಿ ಸದಸ್ಯ ಸಿ ಟಿ ರವಿ ತಮ್ಮ ವಿರುದ್ಧ ಅಸಂವಿಧಾನಿಕ ಪದ ಬಳಕೆ ಮಾಡಿದ್ದಾರೆ ಎಂದು ಪರಿಷತ್‌ನಲ್ಲಿದ್ದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆರೋಪ ಮಾಡಿದ್ದಾರೆ. ಈ ಕುರಿತು ಸಿಎಂ ಸಿದ್ದರಾಮಯ್ಯ ಅವರು ಆಕ್ರೋಶ ಹೊರಹಾಕಿದ್ದಾರೆ.



**ಸಿಟಿ ರವಿ ವಿರುದ್ಧ ಸಿಎಂ ಕಿಡಿ:** ಹೌದು, ಸಿಟಿ ರವಿ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂಬ ವಿಚಾರಕ್ಕೆ ಸಂಬಂಧಿಸಿದಂತೆ ಸುವರ್ಣ ಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಸಿಎಂ ಸಿದ್ದರಾಮಯ್ಯ, ಸಿಟಿ ರವಿ ಮಾತನಾಡಿದ ಸಂದರ್ಭದಲ್ಲಿ ನಾನು ಅಲ್ಲಿ ಇರಲಿಲ್ಲ, ಆದ್ರೆ ಅವರು ಹತ್ತು ಬಾರಿ ಆ ರೀತಿ ಆಕ್ಷೇಪಾರ್ಹ ಹೇಳಿಕೆ ನೀಡಿದ್ದಾರೆ ಎಂದು ನಮ್ಮ ಸದಸ್ಯರು ಹೇಳಿದ್ದಾರೆ. ರವಿ ಮಾತನಾಡಿರುವುದು ಕ್ರಿಮಿನಲ್ ಅಫೆನ್ಸ್ ಅವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಹೆಬ್ಬಾಳಕರ್ ನಿರ್ಧರಿಸಿದ್ದಾರೆ ಎಂದರು.

**ಹೆಬ್ಬಾಳಕರ್ ತೀವ್ರವಾಗಿ ನೊಂದಿದ್ದಾರೆ:** ಸಿಟಿ ರವಿ ಮೇಲೆ ಪೊಲೀಸರು ಏನು ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡೋಣ. ಈ ಘಟನೆಯಿಂದ ನಮ್ಮ ಸಚಿವೆ ಲಕ್ಷ್ಮಿ ಹೆಬ್ಬಾಳಕರ್ ತೀವ್ರವಾಗಿ ನೊಂದಿದ್ದಾರೆ. ಇದು ಒಂದು ರೀತಿಯ ಲೈಂಗಿಕ ಕಿರುಕುಳ ಆಗುತ್ತದೆ. ಲಕ್ಷ್ಮಿ ಹೆಬ್ಬಾಳಕರ್ ಅವರು ಸಭಾಪತಿಗಳಿಗೆ ಹಾಗೂ ಪೊಲೀಸರಿಗೆ ದೂರು ನೀಡಿದ್ದಾರೆ. ಪೊಲೀಸರು ಏನು ಕ್ರಮ ಕೈಗೊಳ್ಳುತ್ತಾರೆ ಎಂಬುದನ್ನು ಕಾದು ನೋಡೋಣ ಎಂದು ಉತ್ತರಿಸಿದರು.

**ಸಭಾಪತಿ ಕಚೇರಿಗೆ ಕಾಂಗ್ರೆಸ್ ಸದಸ್ಯರು:** ಸಭಾಪತಿ ಹೊರಟ್ಟಿ ಚೇಂಬರ್‌ನಲ್ಲಿ ಜಮಾಯಿಸಿದ ಕಾಂಗ್ರೆಸ್ ಸದಸ್ಯರು, ಸದನದಲ್ಲಿ ಕೀಳುಮಟ್ಟದ ಹಾಗೂ ತೀರ ಅವಮಾನಕರ ಪದ ಬಳಕೆ ಮಾಡಿದ್ದಾರೆ. ಸಭಾಪತಿ ಎದುರು ನೇರವಾಗಿ ತಮ್ಮ ವಿರುದ್ಧ ಅವಾಚ್ಯ ಶಬ್ದ ಬಳಸಿದ್ದಾರೆ ಎಂದು ಹೆಬ್ಬಾಳ್ಕರ್ ದೂರು ನೀಡಿದ್ರು. ಸಚಿವರ ಮಾತು ಕೇಳಿ ದಂಗಾದ ಸಭಾಪತಿ ಹೊರಟ್ಟಿ ತಕ್ಷಣ ಪರಿಷತ್ ಕಾರ್ಯದರ್ಶಿಯನ್ನ ಕರೆಸಿ ಮಾತನಾಡಿದ್ದಾರೆ. ಈ ವೇಳೆ ಸಭಾಪತಿ ಕಚೇರಿಯಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಕಣ್ಣೀರು ಹಾಕಿದ್ದಾರೆ ಎನ್ನಲಾಗಿದೆ.

**ದಾಖಲೆಗಾಗಿ ಸಭಾಪತಿ ಹುಡುಕಾಟ:** ಇನ್ನು ಕಾಂಗ್ರೆಸ್ ಸದಸ್ಯರ ಆರೋಪ ಆಲಿಸಿದ ಸಭಾಪತಿ ಹೊರಟ್ಟಿ, ಸದನದ ಆಡಿಯೋ, ವಿಡಿಯೊ ಪರಿಶೀಲನೆ ಮಾಡುವಂತೆ ಪರಿಷತ್ ಕಾರ್ಯದರ್ಶಿಗೆ ಸೂಚನೆ ನೀಡಿದ್ರು. ಇನ್ನು ಸದನ ಮುಂದೂಡಿದ ವೇಳೆ ಮೈಕ್ ಆಫ್ ಇರುತ್ತೆ ಹೀಗಾಗಿ ಆಡಿಯೋ ದಾಖಲೆ ಸಿಗುತ್ತಿಲ್ಲ, ಸ್ಟೆನೋಗಳು ಕೂಡ ಈ ಸಂದರ್ಭದಲ್ಲಿ ಯಾರ ಮಾತನ್ನೂ ದಾಖಲಿಸುವುದಿಲ್ಲ. ಹೀಗಾಗಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಆರೋಪಕ್ಕೆ ಯಾವುದೇ ದಾಖಲೆಗಳು ಸಿಗುತ್ತಿಲ್ಲ. ಹೀಗಾಗಿ ಸ್ಟೆನೋಗಳನ್ನ ತಮ್ಮ ಕೊಠಡಿಗೆ ಕರೆಸಿಕೊಂಡ ಸಭಾಪತಿ ಹೊರಟ್ಟಿ ಎಲ್ಲ ದಿಕ್ಕಿನಿಂದಲೂ ಪರಿಶೀಲಿಸುತ್ತಿದ್ದಾರೆ. ಇದೇ ವೇಳೆ ಸಿಟಿ ರವಿ ಅಮಾನತಿಗೆ ಕಾಂಗ್ರೆಸ್ ಒತ್ತಾಯಿಸಿದ್ದು, ಸದನದಲ್ಲೂ ಈ ಬಗ್ಗೆ ಆಗ್ರಹಿಸಲು ಸಿದ್ದತೆ ನಡೆಸಿದ್ದಾರೆ. ಕಲಾಪ ಆರಂಭವಾಗುತ್ತಿದ್ದಂತೆ ಕಾಂಗ್ರೆಸ್ ಸದಸ್ಯರು ಮನವಿ ಮಾಡಲು ಸಿದ್ಧತೆ ನಡೆಸಿದ್ದಾರೆ.

## ಅಪಘಾತದಲ್ಲಿ ಐವರು ಸಾವು: ಮುಳಬಾಗಿಲು ಶಾಸಕನಿಂದ ತಲಾ 20,000 ರೂ. ಆರ್ಥಿಕ ನೆರವು

**ಕೋಲಾರ:** ಬೈಕ್‌ಗಳಿಗೆ ಬೊಲೆರೋ ಡಿಕ್ಕಿಯಾಗಿ ಐವರು ಮೃತಪಟ್ಟಿರುವ ಘಟನೆ ಕೋಲಾರದಲ್ಲಿ ನಡೆದಿದೆ. ಈ ಹಿನ್ನೆಲೆ ಮೃತರ ಕುಟುಂಬಗಳಿಗೆ ಮುಳಬಾಗಿಲು ಶಾಸಕ ಸಮೃದ್ಧಿ ಮಂಜುನಾಥ್ ಆರ್ಥಿಕ ನೆರವು ನೀಡಿದ್ದಾರೆ.



ಮೃತರ ಕುಟುಂಬಸ್ಥರು ತೀವ್ರ, ಬಡವರಾಗಿದ್ದರಿಂದ ಅಂತ್ಯ ಸಂಸ್ಕಾರಕ್ಕಾಗಿ ತಲಾ 20,000 ರೂ. ನೆರವು ನೀಡಿದ್ದಾರೆ. ಬುಧವಾರ ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕು ಗುಡಿಪಲ್ಲಿ ರಸ್ತೆಯಲ್ಲಿ ಸಂಭವಿಸಿದ್ದ ಭೀಕರ ರಸ್ತೆ ಅಪಘಾತದಲ್ಲಿ ಐದು ಮಂದಿ ಮೃತಪಟ್ಟಿದ್ದಾರೆ. ಮೃತರೆಲ್ಲರೂ ಕೂಲಿ ಕೆಲಸ ಮಾಡಿಕೊಂಡಿದ್ದರು. ಕಡು ಬಡತನದ ಕುಟುಂಬಕ್ಕೆ ಸಾವಿನಿಂದ ಆಘಾತವಾದ ಹಿನ್ನೆಲೆ ಅಂತ್ಯಸಂಸ್ಕಾರಕ್ಕಾಗಿ ಸಮೃದ್ಧಿ ಮಂಜುನಾಥ್ ಆರ್ಥಿಕ ನೆರವು ನೀಡಿದ್ದಾರೆ.

ಕೂಲಿ ಮುಗಿಸಿಕೊಂಡು ಮನೆಗೆ ತೆರಳುತ್ತಿದ್ದವರು ಸಾವಿನ ಮನೆಗೆ ಹೋಗಿದ್ದು, ಅವರ ಕುಟುಂಬಗಳು ಬೀದಿಪಾಲಾಗಿವೆ. ಇದನ್ನರಿತ ಸಮೃದ್ಧಿ ಮಂಜುನಾಥ್ ಮೃತರ ಕುಟುಂಬಗಳಿಗೆ ಆರ್ಥಿಕ ನೆರವಿನ ಹಸ್ತ ಚಾಚಿದ್ದಾರೆ. ಸದ್ಯ ಬೆಳಗಾವಿ ಅಧಿವೇಶನದಲ್ಲಿರುವ ಶಾಸಕ ಸಮೃದ್ಧಿ ಮಂಜುನಾಥ್ ತಮ್ಮ ಆಪ್ತ ಸಹಾಯಕ ಹಾಗೂ ಸ್ಥಳೀಯ ಮುಖಂಡರ ಸಮ್ಮುಖದಲ್ಲಿ ಅಂತ್ಯಸಂಸ್ಕಾರಕ್ಕಾಗಿ ಹಣ ತಲುಪಿಸಿದ್ದು, ಅಧಿವೇಶನ ಮುಗಿದ ನಂತರ ಸ್ವತಃ ಮೃತ ಕುಟುಂಬಗಳನ್ನು ಭೇಟಿ ಮಾಡಿ ಮತ್ತಷ್ಟು ಪರಿಹಾರ ನೀಡುವುದಾಗಿ ತಮ್ಮ ಆಪ್ತರ ಮೂಲಕ ಸಂದೇಶವನ್ನು ರವಾನೆ ಮಾಡಿದ್ದಾರೆ. ಇನ್ನು ಕಳೆದ ವಾರ ಮುರುಡೇಶ್ವರದಲ್ಲಿ ನೀರು ಪಾಲಾದ ವಿದ್ಯಾರ್ಥಿನಿಯರ ಕುಟುಂಬಗಳಿಗೂ ಸಹ ಸಮೃದ್ಧಿ ಮಂಜುನಾಥ್ ತಲಾ ಒಂದೊಂದು ಲಕ್ಷ ಪರಿಹಾರ ನೀಡಿದ್ದರು.

## 4 ಲಕ್ಷ ಲಂಚ ಸ್ವೀಕರಿಸುತ್ತಿದ್ದಾಗ ಲೋಕಾ ಬಲೆಗೆ ಬಿದ್ದ ಅಧಿಕಾರಿ; ಅರೆಸ್ಟ್

**ಮಂಗಳೂರು:** 4 ಲಕ್ಷ ಲಂಚ ಸ್ವೀಕರಿಸುತ್ತಿದ್ದಾಗ ಮುಲ್ಕಿ ಕಂದಾಯ ನಿರೀಕ್ಷಕ, ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಅಧಿಕಾರಿಯನ್ನು ಬಂಧಿಸಲಾಗಿದೆ. ಮುಲ್ಕಿ ಕಂದಾಯ ನಿರೀಕ್ಷಕ ಜಿ.ಎಸ್.ದಿನೇಶ್ ಬಂಧಿತ ಆರೋಪಿ. ಆಸ್ತಿಯ ಪಹಣಿಯಲ್ಲಿ ಹೆಸರು ಸೇರಿಸಲು 4 ಲಕ್ಷ ರೂಪಾಯಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ. ಹೆಸರು ಸೇರ್ಪಡಗೆ ಅರ್ಜಿ ಸಲ್ಲಿಸಿದ್ದರೂ ಒಂದು ವರ್ಷದಿಂದ ಕ್ರಮ ಕೈಗೊಳ್ಳದೇ ಫೈಲ್ ಹಾಗೆಯೇ ಇರಿಸಿದ್ದ. ಕಾನೂನು ಬದ್ಧವಾಗಿ ಮಾಡಬೇಕಾದ ಸರ್ಕಾರಿ ಕೆಲಸಕ್ಕೆ ಲಂಚದ ಬೇಡಿಕೆ ಇಟ್ಟಿದ್ದ. ಈ ಕುರಿತು ಮಂಗಳೂರು ಲೋಕಾಯುಕ್ತ ಕಚೇರಿಗೆ ಸಂತ್ರಸ್ತ ವ್ಯಕ್ತಿ ದೂರು ನೀಡಿದ್ದರು. ಮಂಗಳೂರು ಹೊರವಲಯದ ಸುರತ್ಕಲ್ ಜಂಕ್ಷನ್ ಬಳಿ 4 ಲಕ್ಷ ರೂಪಾಯಿ ಲಂಚದ ಹಣವನ್ನು ಸ್ವೀಕರಿಸುವಾಗ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದರು.



ರೆಡ್‌ಹ್ಯಾಂಡ್ ಆಗಿ ಕಂದಾಯ ನಿರೀಕ್ಷಕ ದಿನೇಶ್ ಸಿಕ್ಕಿಬಿದ್ದಿದ್ದಾನೆ. ಲೋಕಾಯುಕ್ತ ಎಸ್‌ಪಿ ನಟರಾಜ್ ನೇತೃತ್ವದಲ್ಲಿ ದಾಳಿ ನಡೆಸಲಾಗಿತ್ತು.

## ದೂರು ದಾಖಲಿಸಿದ ರವಿ!

**'ಪೊಲೀಸರಿಂದ ನನಗೆ ಜೀವ ಬೆದರಿಕೆ ಇದೆ':** ಇನ್ನು ಖಾನಾಪುರ ಠಾಣೆಯ ಎದುರು ಮಾತನಾಡಿದ ಸಿ ಟಿ ರವಿ ಅವರು, ಸಭಾಪತಿ ರೂಲಿಂಗ್ ಕೊಟ್ಟ ಮೇಲೆ ನನ್ನ ಮೇಲೆ ಪೊಲೀಸರು ಎಫ್‌ಐಆರ್ ಏಕೆ ಮಾಡಿದ್ರು. ಯಾವ ದುರುದ್ದೇಶಕ್ಕೆ ಪೊಲೀಸರು ಹೀಗೆ ಮಾಡಿದ್ದಾರೆ ಗೊತ್ತಿಲ್ಲ. ಇವರು ಯಾವ ಕಾರಣಕ್ಕೆ ಎಫ್‌ಐಆರ್ ಹಾಕಿದ್ದಾರೆ ಹೇಳಿಲ್ಲ. ಏಕೆ ಠಾಣೆಗೆ ಕರೆದುಕೊಂಡು ಬಂದು ಕೂಡಿಸಿದ್ದಾರೆ, ಎಫ್‌ಐಆರ್ ಮಾಡಿದ್ದೇಕೆ ಗೊತ್ತಿಲ್ಲ. ಅಧಿಕೃತ ಕಸ್ಟಡಿಗೆ ತೆಗೆದುಕೊಂಡರೆ ಮೊದಲು ನನಗೆ ಮಾಹಿತಿ ಕೊಡಬೇಕು. ಪೊಲೀಸರ ನಡುವಳಿಕೆ ಅನುಮಾನಸ್ಪದವಾಗಿದೆ. ಪರಿಷತ್ ಸಭಾಂಗಣದಲ್ಲಿ ಡಿಕೆಶಿ, ಹೆಬ್ಬಾಳ್ಕರ್ ನನಗೆ ನೇರ ಬೆದರಿಕೆ ಹಾಕಿದ್ದಾರೆ. ಪೊಲೀಸರಿಂದ ನನಗೆ ಜೀವ ಬೆದರಿಕೆ ಇದೆ ಎಂದು ಎಂದರು.

**ಬಾಗಲಕೋಟೆಗೆ ಸಿ.ಟಿ ರವಿ:** ಪೊಲೀಸರು ಸಿ.ಟಿ ರವಿ ಅವರನ್ನು ಬೆಂಗಳೂರಿಗೆ ಕರೆತರದ ರಾತ್ರಿಯಿಡಿ ಠಾಣೆಯಿಂದ ಠಾಣೆಗೆ ಕರೆದೊಯ್ದಿದ್ದಾರೆ. ಬೆಳಗಿನಜಾವ ಸಿ ಟಿ ರವಿ ಅವರಿದ್ದ ವಾಹನ ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಲೊಕಾಪೂರ ಪಟ್ಟಣದತ್ತ ಬಂದಿದೆ. ಸುದ್ದಿ ತಿಳಿದು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆಗೆ ಜಮಾಯಿಸಿದ್ದಾರೆ. ಬಿಜೆಪಿ ಕಾರ್ಯಕರ್ತರನ್ನು ನೋಡಿದ ಪೊಲೀಸರು ಮತ್ತೆ ಮಾರ್ಗ ಬದಲಾಯಿಸಿ ಯಾದವಾಡ್ ದತ್ತ ಕರೆದೊಯ್ದಿದ್ದಾರೆ.

ಸದ್ಯದ ಮಾಹಿತಿ ಪ್ರಕಾರ ಸಿ.ಟಿ ರವಿ ಅವರನ್ನು ರಾತ್ರಿ ಎಲ್ಲಾ ರೌಂಡ್ ಹೊಡೆಸಿ ಬೆಳಗಾವಿ ಜಿಲ್ಲೆಯಲ್ಲಿಯೇ ಇರಿಸಿದ್ದಾರೆ ಎಂದು ತಿಳಿದುಬಂದಿದೆ. ಯರಗಟ್ಟಿಯಲ್ಲಿ ಸಿಟಿ ರವಿ ಅವರನ್ನು ಇರಿಸಲಾಗಿದ್ದು, ಬೆಳಗ್ಗೆ 10 ಗಂಟೆಯ ಬಳಿಕ ನಗರ ಪೊಲೀಸರಿಗೆ ಹಸ್ತಾಂತರಿಸುವ ಸಾಧ್ಯತೆ ಇದೆ.

### ನಿಗಿನಿಗಿ ಕೆಂಡ!

**3 ಜಿಲ್ಲೆ 5 ತಾಲ್ಲೂಕಿನಲ್ಲಿ ಇಡೀ ರಾತ್ರಿ ಸುತ್ತಾಟ::** ನಿನ್ನೆ ಸಂಜೆ ಸಿ.ಟಿ ರವಿ ಅವರನ್ನು ಬಂಧಿಸಿರುವ ಪೊಲೀಸರು ರಾತ್ರಿಯಿಡೀ ಜಿಲ್ಲೆಯನ್ನ ಸುತ್ತಾಡಿಸಿದ್ದಾರೆ. ಇದರಿಂದ ತಮಗೆ ಮಾನಸಿಕ ಹಿಂಸೆ ನೀಡಿದ್ದಾರೆಂದು ಸಿ.ಟಿ ರವಿ ಆಕ್ರೋಶ ಹೊರಹಾಕಿದ್ದಾರೆ.

ಬೆಳಗಾವಿ, ಬಾಗಲಕೋಟೆ, ಧಾರವಾಡ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಯರಗಟ್ಟಿ ಮೂಲಕ ಮತ್ತೆ ಬೆಳಗಾವಿಯತ್ತ ಕರೆತಂದಿದ್ದಾರೆ. ಸಿ.ಟಿ ರವಿಗೆ ಉಪಹಾರ, ಕಾಫಿ, ಟೀ ವ್ಯವಸ್ಥೆ ಮಾಡಿಕೊಟ್ಟ ಪೊಲೀಸರು ರಾತ್ರಿಯಿಡೀ ಜಾಗರಣೆ ಮಾಡಿಸಿದ್ದಾರೆ. ಇಂದು ಬೆಳಗ್ಗೆ ಯರಗಟ್ಟಿ ಬಳಿಯ ಡಾಬಾದಲ್ಲಿ ಉಪಹಾರದ ವ್ಯವಸ್ಥೆ ಮಾಡಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

**ಖಾನಾಪುರ ಪೊಲೀಸ್ ಠಾಣೆ ಮುಂದೆ ಹೈಡ್ರಾಮಾ:** ಇನ್ನೂ ಸಿ.ಟಿ ರವಿ ಅವರನ್ನ ಬೆಂಗಳೂರಿಗೆ ಕರೆತರುವ ವೇಳೆ ಖಾನಾಪುರ ಪೊಲೀಸ್ ಠಾಣೆ ಮುಂದೆ ಭಾರೀ ಹೈಡ್ರಾಮಾ ನಡೆದಿದೆ. ಹಣೆಗೆ ಪೆಟ್ಟಾಗಿ ರಕ್ತ ಸೋರುತ್ತಿದ್ದರೂ, ಪೊಲೀಸರು ಸಿ.ಟಿ ರವಿ ಅವರನ್ನ ಹೊತ್ತು ವಾಹನದಲ್ಲಿ ಹಾಕಿದ್ದಾರೆ. ಈ ವೇಳೆ ನನ್ನ ಕೊಲೆಗೆ ಸಂಚು ರೂಪಿಸಿದ್ದಾರೆ ಎಂದು ಸಿ.ಟಿ ರವಿ ಚೀರಾಡಿದ್ದಾರೆ. ರಸ್ತೆ ಮಧ್ಯೆ ಧರಣಿ ಕುಳಿತು, ನನ್ನನ್ನ ಕೊಲೆ ಮಾಡಲು ಪ್ರಯತ್ನ ಮಾಡ್ತಿದ್ದೀರಿ, ನೀವು ಅಧಿಕಾರಿಗಳಂತೆ ನಡೆದುಕೊಳ್ತಿದ್ದೀರಾ? ಎಂದು ಕಿಡಿ ಕಾರಿದ್ದಾರೆ.

**ಠಾಣೆ ಮುಂದೆ ಬಿಜೆಪಿ ಪ್ರತಿಭಟನೆ:** ಸಿ.ಟಿ ರವಿ ಬಂಧನ ಖಂಡಿಸಿ ತಡರಾತ್ರಿ ವಿಪಕ್ಷ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದ್ದಾರೆ. ಈ ವೇಳೆ ಮಾತನಾಡಿರುವ ಆರ್. ಅಶೋಕ್, ರಾಜ್ಯವನ್ನು ಕಾಂಗ್ರೆಸ್‌ನವರು ಮಿನಿ ಪಾಕಿಸ್ತಾನ ಮಾಡಿದ್ದಾರೆ, ಸಿಟಿ ರವಿ ಜನಪ್ರತಿನಿಧಿಯೆಂಬುದನ್ನು ಮರೆತು ಹಲ್ಲೆ ಮಾಡಿದ್ದಾರೆ.

## ಮೊದಲನೇ ಪುಟದಿಂದ...

ಸಿಟಿ ರವಿ ಹಣೆಗೆ ರಕ್ತ ಬರುವಂತೆ ಹಲ್ಲೆ ಮಾಡಿದ್ದಾರೆ, ಪೊಲೀಸರಿಗೆ ನಮ್ಮ ಸರ್ಕಾರ ಬಂದ ಬಳಿಕ ತಕ್ಕ ಪಾಠ ಕಲಿಸುತ್ತೇವೆ ಎಂದು ಎಚ್ಚರಿಕೆ ನೀಡಿದ್ದಾರೆ.

### ಮತ್ತೊಂದು ಸಂಕಷ್ಟ!

ಪೊಲೀಸರು ಸಿಟಿ ರವಿ ಅವರನ್ನು ಬಂಧಿಸಿ ಖಾನಾಪುರ ಪೊಲೀಸ್ ಠಾಣೆಗೆ ಕರೆದೊಯ್ದಿದ್ದರು. ಇದೀಗ ಸಿಟಿ ರವಿ ಅವರನ್ನು ಬೆಂಗಳೂರಿಗೆ ಪೊಲೀಸರು ಕರೆತರುತ್ತಿದ್ದಾರೆ.

**ಬಿಗಿಭದ್ರತೆಯೊಂದಿಗೆ ಸಿಟಿ ರವಿ ಶಿಫ್ಟ್!:** ಸಿಟಿ ರವಿಯನ್ನ ಬೆಳಗಾವಿ ಖಾನಾಪುರ ಠಾಣೆಯಿಂದ ಬೆಂಗಳೂರಿಗೆ ಕರೆದೊಯ್ಯುತ್ತಿದ್ದು, ಇದಕ್ಕಾಗಿ ಪ್ರತ್ಯೇಕ ವ್ಯಾನ್ ಒಂದನ್ನು ಸಿದ್ಧಪಡಿಸಲಾಗಿತ್ತು. ಖಾನಾಪುರ ಠಾಣೆ ಮುಂದೆ ಹೈಡ್ರಾಮವೇ ನಡೆದರೂ, ಇದನ್ನೆಲ್ಲಾ ಮೀರಿ ಇದೀಗ ಪೊಲೀಸರು ಬಿಗಿ ಭದ್ರತೆಯೊಂದಿಗೆ ಸಿಟಿ ರವಿ ಅವರನ್ನು ಬೆಂಗಳೂರಿಗೆ ಕರೆತರುತ್ತಿದ್ದಾರೆ.

ಇನ್ನು ಇಂದು ರಾತ್ರೋರಾತ್ರಿ ಸಿಟಿ ರವಿಯನ್ನು ಪೊಲೀಸರು ಬಿಗಿಭದ್ರತೆಯೊಂದಿಗೆ ಬೆಂಗಳೂರಿಗೆ ಕರೆತರುತ್ತಿದ್ದಾರೆ. ನಾಳೆ ಸಂಜೆಯೊಳಗೆ ಬೆಂಗಳೂರಿನ ಜನಪ್ರತಿನಿಧಿ ಕೋರ್ಟ್‌ಗೆ ಸಿಟಿ ರವಿಯನ್ನು ಪೊಲೀಸರು ಹಾಜರುಪಡಿಸಲಿದ್ದಾರೆ ಎಂದು ಹೇಳಲಾಗುತ್ತಿದೆ.

### ವ್ಯವಸ್ಥೆಗೆ ಅವಮಾನ

ಕೆಪಿಸಿಸಿ ಅಧ್ಯಕ್ಷನಾಗಿ ನಾನು ತೀವ್ರವಾಗಿ ಖಂಡಿಸುತ್ತೇನೆ. ಬಿಜೆಪಿಯ ಕೊನೆಗಾಲ ಆರಂಭವಾಗಿದೆ ಎಂದು ಭವಿಷ್ಯ ನುಡಿದಿದ್ದಾರೆ.

ಇನ್ನೂ ತನ್ನ ವಿರುದ್ಧ ಕೊಲೆಗೆ ಸಂಚು ರೂಪಿಸಿದ್ದಾರೆ ಎಂಬ ಸಿ.ಟಿ ರವಿ ಆರೋಪಕ್ಕೆ ಪ್ರತಿಕ್ರಿಯಿಸಿ, ತಾನು ಮಾಡಿದ ತಪ್ಪು ಮುಚ್ಚಿಕೊಳ್ಳಲು ಸಿಟಿ ರವಿ ಕೊಲೆಗೆ ಯತ್ನ ಆರೋಪ ಮಾಡ್ತಿದ್ದಾರೆ ಅಂತ ತಿಳಿಸಿದ್ದಾರೆ. ಇದೇ ವೇಳೆ ಸಭಾಪತಿಗಳು ಪೊಲೀಸರ ನಡೆಯ ಬಗ್ಗೆಯೂ ಡಿಸಿಎಂ ಅಸಮಾಧಾನ ಹೊರಹಾಕಿದ್ದಾರೆ.

### 15 ಮಂದಿ ಸಾವು!

ಸುಮಾರು 15 ಮಂದಿಗೆ ಸುಟ್ಟ ಗಾಯಗಳಾಗಿವೆ. ಅಪಘಾತದಲ್ಲಿ ಗಾಯಗೊಂಡವರನ್ನು ಸವಾಯಿ ಮಾನ್ಸಿಂಗ್ ಆಸ್ಪತ್ರೆಯ ತುರ್ತು ಚಿಕಿತ್ಸಾ ವಿಭಾಗಕ್ಕೆ ದಾಖಲು ಮಾಡಲಾಗಿದೆ. ಅಧಿಕಾರಿಗಳ ಪ್ರಕಾರ ಇನ್ನೂ ಹಲವಾರು ಮಂದಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ.

ಸದ್ಯ ಪೊಲೀಸರು ಹಾಗೂ ರಕ್ಷಣಾ ತಂಡಗಳು ಸ್ಥಳಕ್ಕೆ ದೌಡಾಯಿಸಿದ್ದು, ಬೆಂಕಿ ನಂದಿಸುವ ಕಾರ್ಯದಲ್ಲಿ ತೊಡಗಿವೆ. 20ಕ್ಕೂ ಹೆಚ್ಚು ಅಗ್ನಿಶಾಮಕ ಸಿಬ್ಬಂದಿ ಸ್ಥಳದಲ್ಲೇ ಬೆಂಕಿ ನಿಯಂತ್ರಿಸಲು ಹರಸಾಹಸ ಪಡುತ್ತಿದ್ದಾರೆ. ಸುರಕ್ಷತೆ ದೃಷ್ಟಿಯಿಂದ ಸಮೀಪದ ಮಾರ್ಗವನ್ನು ಬೇರೆಡೆಗೆ ತಿರುಗಿಸಲಾಗಿದೆ. ಅಪಘಾತದ ವೀಡಿಯೋಗಳು ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುತ್ತಿವೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಇತರ ವಾಹನಗಳಿಗೆ ಡಿಕ್ಕಿ ಹೊಡೆದ ಟ್ರಕ್‌ನಲ್ಲಿ ರಾಸಾಯನಿಕ ತುಂಬಿತ್ತು. ಟ್ರಕ್ ಡಿಕ್ಕಿ ಹೊಡೆಯುತ್ತಿದ್ದಂತೆ ಬೆಂಕಿ ಹೊತ್ತಿ, ಇತರ ವಾಹನಗಳಿಗೂ ವ್ಯಾಪಿಸಿದೆ. ಎಷ್ಟು ವಾಹನಗಳಿಗೆ ಬೆಂಕಿ ಹೊತ್ತಿಕೊಂಡಿದೆ ಎಂದು ಸದ್ಯಕ್ಕೆ ಖಚಿತ ಮಾಹಿತಿ ಇಲ್ಲ. ಸಂತ್ರಸ್ತರನ್ನು ಭೇಟಿ ಮಾಡಲು ರಾಜಸ್ಥಾನ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಕೂಡ ಆಸ್ಪತ್ರೆಗೆ ಧಾವಿಸಿದ್ದಾರೆ.

### ವರ್ಷಾಚರಣೆಗೆ ನಿರ್ಬಂಧ

ಡಿಸೆಂಬರ್ 31ಸಂಜೆ 6 ಗಂಟೆಯಿಂದ 2025 ಜನವರಿ1ರಂದು ಬೆಳಿಗ್ಗೆ ರಾತ್ರಿ 11 ಗಂಟೆವರೆಗೂ ಸಾರ್ವಜನಿಕ ಪ್ರವೇಶ ನಿರ್ಬಂಧಿಸಿದ್ದು, ಜೊತೆಗೆ ಅತಿಥಿ ಗೃಹಗಳಿಗೆ ಪ್ರವೇಶ ಕೂಡ ನಿರ್ಬಂಧಿಸಿದೆ. ಇದರಿಂದ ಪ್ರವಾಸೋದ್ಯಮ ಇಲಾಖೆಗೂ ನಿರ್ಬಂಧದ ಬಿಸಿ ಮುಟ್ಟಿದೆ. ಹೊಸ ವರ್ಷ ಆಚರಣೆಗೆ ಬೆಂಗಳೂರಿನ ಪಬ್ ರೆಸಾರ್ಟ್‌ಗಳ ಬದಲು ಪ್ರಕೃತಿಯ ಮಡಿಲಲ್ಲಿ ಹೊಸ ವರ್ಷಾಚರಣೆಯ ಕನಸು ಕಂಡಿದ್ದ ಯುವ ಸಮುದಾಯ ನಂದಿಗಿರಿಧಾಮದಲ್ಲಿ ಹೊಸ ವರ್ಷಾಚರಣೆಗೆ ನಿರ್ಬಂಧ ವಿಧಿಸಿದ್ದಕ್ಕೆ ನಿರಾಶೆ ವ್ಯಕ್ತಪಡಿಸಿದ್ದಾರೆ.

### ಓರ್ವ ಕಾರ್ಮಿಕ ಸಾವು

ರಸ್ತೆಯಲ್ಲಿ ಜನರ ಕೂಗಾಟ ಕಂಡು ಗಾಬರಿ ಆತಂಕವಾಯಿತು ಎಂದು ಕವಿತಾ ತಿಳಿಸಿದ್ದಾರೆ.

ಭದ್ರಾವತಿ ಗಣೇಶ ರೈಸ್ ಮಿಲ್ ಬಾಯ್ಲರ್ ಬ್ಲಾಸ್ಟ್ ಪ್ರಕರಣ ಹಿನ್ನೆಲೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿದ ಜಿಪಂ ಸಿಇಒ ಹೇಮಂತ್, ಗಾಯಾಳುಗಳಿಗೆ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆ ಹೇಗಾಯ್ತು ಎಂಬುದನ್ನು ಪರಿಶೀಲಿಸಲು ತಾಂತ್ರಿಕ ತಂಡ ಬಾಯ್ಲರ್ ಇನ್ಸ್‌ಪೆಕ್ಟರ್ ಬರುತ್ತಾರೆ. ರೈಸ್ ಮಿಲ್‌ನಲ್ಲಿ ಒಂದೇ ಒಂದು ಬಾಯ್ಲರ್ ಇತ್ತು ಅದು ಬ್ಲಾಸ್ಟ್ ಆಗಿದೆ. ಬ್ಲಾಸ್ಟ್ ಹಿನ್ನೆಲೆ ಇಂದಿರಾ ನಗರ ಕಾಲೋನಿಯಲ್ಲಿ ಮನೆಯೊಂದರ ಮೇಲೆ ಬಾಯ್ಲರ್ ತುಂಡೊಂದು ಬಿದ್ದಿದೆ. ಅದೃಷ್ಟವಶಾತ್ ಆ ಮನೆಯಲ್ಲಿ ಯಾರು ಇರಲಿಲ್ಲ. ಹಾಗಾಗಿ ಯಾವುದೇ ಪ್ರಾಣಪಾಯ ಆಗಿಲ್ಲ.

### ಕಾರ್ಯಪಡೆ

ಇಲ್ಲಿಯವರೆಗೆ, ಅಕ್ರಮವಾಗಿ ನೆಲೆಸಿದ್ದ 159 ಬಾಂಗ್ಲಾದೇಶಿ ಪ್ರಜೆಗಳು ಮತ್ತು 24 ಪಾಕಿಸ್ತಾನೀಯರನ್ನು ಬಂಧಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಬಾಂಗ್ಲಾದೇಶದ 115 ಜನರು ನಕಲಿ ದಾಖಲೆಗಳೊಂದಿಗೆ ಅಕ್ರಮವಾಗಿ ನೆಲೆಸಿದ್ದಾರೆ ಎಂದು ಅವರು ತಿಳಿಸಿದ್ದಾರೆ.

ಭಾರತದಲ್ಲಿ ಇಂತಹ ಎಷ್ಟು ಅಕ್ರಮ ವಲಸಿಗರು ನೆಲೆಸಿದ್ದಾರೆ ಎಂದು ಬಿಜೆಪಿಯ ಅರುಣ್ ಪ್ರಶ್ನಿಸಿದ್ದಾರೆ. ಅಲ್ಲದೆ, ಚಿತ್ರದುರ್ಗದಲ್ಲಿ ಆರು ಮಂದಿಯ ಬಂಧನದಿಂದ ಕರ್ನಾಟಕದ ಹೋಂಸ್ಟೇ ಮತ್ತು ರೆಸಾರ್ಟ್‌ಗಳು ಅಕ್ರಮ ವಲಸಿಗರಿಗೆ ಸ್ವರ್ಗವಾಗಿ ಪರಿಣಮಿಸಿರುವುದು ತಿಳಿದುಬಂದಿದೆ ಎಂದಿದ್ದಾರೆ.

ಅಕ್ರಮ ವಲಸಿಗರು ಡ್ರಗ್ ಪೆಡ್ಲಿಂಗ್ ಮತ್ತು ಇತರ ಕಾನೂನುಬಾಹಿರ ಚಟುವಟಿಕೆಗಳನ್ನು ನಡೆಸುತ್ತಾರೆ ಎಂದೂ ಅವರು ಆರೋಪಿಸಿದ್ದಾರೆ.

ಬಾಂಗ್ಲಾದೇಶಿ ಪ್ರಜೆಗಳನ್ನು ಗುರುತಿಸಿ ಗಡಿಪಾರು ಮಾಡಲು ವಿಶೇಷ ಪಡೆ ರಚಿಸಲಾಗಿದೆ. ಬಾಂಗ್ಲಾದೇಶಿ ವಲಸಿಗರು ಮಾತ್ರವಲ್ಲ, ಅಧ್ಯಯನಕ್ಕೆ ಬರುವ ಕೆಲವು ಆಫ್ರಿಕನ್ನರು ಸಹ ಅದೇ ರೀತಿ ನಾಪತ್ತೆಯಾಗಿದ್ದಾರೆ ಎಂದು ಪರಮೇಶ್ವರ ಸದನಕ್ಕೆ ತಿಳಿಸಿದ್ದಾರೆ.

### ಬಾಲಕ

9ನೇ ತರಗತಿಯ ವಿದ್ಯಾರ್ಥಿ ಸೈಫ್‌ಗೆ ಈ ಘಟನೆ ಅರ್ಥವಾಗದೇ ಇದ್ದಾಗ ಆತನ ತಾಯಿ ಗ್ರಾಮದ ವ್ಯಕ್ತಿಯೊಬ್ಬರಿಗೆ ಈ ವಿಷಯ ತಿಳಿಸಿದ್ದಾಳೆ.

ಬ್ಯಾಂಕ್ ಸ್ಟೇಟ್‌ಮೆಂಟ್‌ಗಾಗಿ ಸೈಫ್ ಸಿಎಸ್‌ಪಿ (ಕಸ್ಟಮರ್ ಸರ್ವಿಸ್ ಪಾಯಿಂಟ್) ಗೆ ಹೋದಾಗ, ಖಾತೆಯಿಂದ 87 ಕೋಟಿ 65 ಲಕ್ಷ ರೂಪಾಯಿ ಹಿಂಪಡೆಯಲಾಗಿದೆ ಮತ್ತು ಖಾತೆಯಲ್ಲಿ ಕೇವಲ 532 ರೂ. ಈ ಬಗ್ಗೆ ಸೈಫ್ ಬ್ಯಾಂಕ್‌ಗೆ ತೆರಳಿ ಮಾಹಿತಿ ನೀಡಿದಾಗ 5 ಗಂಟೆಯೊಳಗೆ ಖಾತೆಯಿಂದ 87 ಕೋಟಿ 65 ಲಕ್ಷ ರೂ. ಗಳನ್ನು ತೆಗೆದು ಹಾಕಿರುವುದು ದೃಢಪಟ್ಟಿದೆ.

ಸೈಫ್ ಅವರ ಕುಟುಂಬವು ಈ ವಿಷಯದಲ್ಲಿ ಯಾವುದೇ ಅಧಿಕೃತ ದೂರು ನೀಡಿಲ್ಲ. ಆದರೆ ಹಣವನ್ನು ಯಾರು ಕಳುಹಿಸಿದ್ದಾರೆ ಮತ್ತು ಎಲ್ಲಿಂದ ಕಳುಹಿಸಿದ್ದಾರೆ ಎಂಬುದು ತಿಳಿದಿಲ್ಲ. ನಾರ್ತ್ ಬಿಹಾರ ಗ್ರಾಮೀಣ ಬ್ಯಾಂಕ್ ವಿದ್ಯಾರ್ಥಿಯೊಬ್ಬನ ಖಾತೆಗೆ ಇಷ್ಟೊಂದು ಮೊತ್ತ ಹೇಗೆ ಬಂತು ಎಂಬ ಬಗ್ಗೆ ತನಿಖೆ ನಡೆಸುತ್ತಿದ್ದು, ಕೆಲವೇ ಗಂಟೆಗಳಲ್ಲಿ ಈ ಮೊತ್ತ ಹಿಂಪಡೆದಿದ್ದು, ಆತನ ಖಾತೆಯನ್ನು ಸ್ಥಗಿತಗೊಳಿಸಲಾಗಿದೆ.

## ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅಶ್ಲೀಲ ಪದ ಬಳಕೆ

**ಹುಬ್ಬಳ್ಳಿ:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರ ವಿರುದ್ಧ ಬಿಜೆಪಿ ಎಂಎಲ್ ಸಿ ಸಿ.ಟಿ.ರವಿ ಅವರು ಮಾತನಾಡಿದ್ದ ಬಗ್ಗೆ ಯಾವುದೇ ರೆಕಾರ್ಡ್ ಇಲ್ಲ, ಆದರೆ, ಅಶ್ಲೀಲ ಪದ ಬಳಸಿದ್ದಾರೆ ಎಂದು ನಾಲ್ವರು ಸಾಕ್ಷಿ ಹೇಳಿದ್ದಾರೆ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.



ಹುಬ್ಬಳ್ಳಿಯಲ್ಲಿ ಪ್ರತಿನಿಧಿ ಜೊತೆ ಮಾತನಾಡಿದ ಅವರು, ಆಡಿಯೋ ರೆಕಾರ್ಡ್ ಆಗಿಲ್ಲ ಸಾಕ್ಷಿಗಳು ಮಾತ್ರ ಇವೆ. ರೆಕಾರ್ಡ್ ಹುಡುಕಿದ್ದೇನೆ ನಮಗೆ ಆಡಿಯೋ ಸಿಕ್ಕಿಲ್ಲ. ನಾಲ್ಕು ಜನರು ಸಾಕ್ಷಿ ಹೇಳಿದ್ದಾರೆ. ಸಿಟಿ ರವಿ ಮತ್ತು ಲಕ್ಷ್ಮೀ ಹೆಬ್ಬಾಳ್ಕರ್ ಇಬ್ಬರ ದೂರನ್ನೂ ಪಡೆದಿದ್ದೇವೆ ಎಂದು ತಿಳಿಸಿದರು.

ಸದನದಲ್ಲಿ ಪ್ರಶ್ನೋತ್ತರ ವೇಳೆ ಮುಗಿದ ಬಳಿಕ, ಕಾಂಗ್ರೆಸ್ ನವರು ಕೇಂದ್ರ ಸಚಿವ ಅಮಿತ್ ಶಾ ಅವರ ವಿರುದ್ಧ ಪ್ರತಿಭಟನೆಗೆ ಮುಂದಾದರು. ಈ ವೇಳೆ ಗಲಾಟೆ ಆಯ್ತು, ಗಲಾಟೆ ಹಿನ್ನಲೆ ಕಲಾಪ ಮುಂದೂಡಿದ್ವಿ. ಅವಾಗ ಇದೆಲ್ಲ ಗಲಾಟೆ ಆಗಿದೆ. ಸಂಜೆ 6 ಗಂಟೆಗೆ ಸಿಟಿ ರವಿ ಬಂಧನವಾಗಿರುವ ಬಗ್ಗೆ ಮಾಹಿತಿ ಬಂದಿದೆ ಎಂದರು.

ನಾನು ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಸಿಟಿ ರವಿ ಅವರನ್ನು ಕರೆದು ಮಾತನಾಡಿದೆ. ಇದನ್ನು ಇಲ್ಲಿಗೆ ಮುಗಿಸೋಣ ಅಂತ ಸಲಹೆ ನೀಡಿದೆ. ನಾನು ಹತಾಶರಾಗಿದ್ದಾರೆ ಎಂದಿದ್ದೇನೆ. ಅದನ್ನು ತಪ್ಪಾಗಿ ಅರ್ಥ ಮಾಡಿಕೊಳ್ಳಲಾಗಿದೆ ಅಂತ ಸಿಟಿ ರವಿ ಅವರು ಹೇಳಿದರು, ಎಂದು ಸಭಾಪತಿಗಳು ಮಾಹಿತಿ ನೀಡಿದರು.

ಈ ರೀತಿ ಆಗಿರುವುದು ಮೊದಲ ಸಲ. 45 ವರ್ಷಗಳ ರಾಜಕೀಯ ಇತಿಹಾಸದಲ್ಲಿ ಇಂತಹ ಘಟನೆ ಆಗಿರಲಿಲ್ಲ, ಒಂದೊಂದು ಸಲ ಯಾಕಾದರೂ ಅಲ್ಲಿ ಕೂತಿದ್ದೇನೆ ಅನಸತ್ತೆ ಎಂದು ಅಸಮಾಧಾನ ಹೊರಹಾಕಿದರು.

ನಾನು ಯಾರ ಪರವೂ ಇಲ್ಲ, ಎರಡು ಕಡೆ ಯೋಚನೆ ಮಾಡಿದ್ದೇನೆ. ಇದು ಕಡ್ಡಿ ಹೋಗಿ ಗುಡ್ಡ ಆಯ್ತು. ಬೇಲಿಯೇ ಎದ್ದು ಹೊಲ ಮೇಯ್ದರೇ ಏನಾಗತ್ತೆ. ಜನ ನಮ್ಮನ್ನು ನೋಡುತ್ತಾರೆ. ಶಾಸಕರು ನಡುವಳಿಕೆ ತಿದ್ದುಕೊಳ್ಳಬೇಕು ಎಂದು ಸೂಚನೆ ನೀಡಿದರು.

**ಸಭಾಪತಿಗಳಿಗೆ ಲಕ್ಷ್ಮೀ ಹೆಬ್ಬಾಳ್ಕರ್ ದೂರು:** ಬಿಜೆಪಿಯ ವಿಧಾನ ಪರಿಷತ್ ಸದಸ್ಯ ಸಿಟಿ ರವಿಯವರು ತಮ್ಮ ವಿರುದ್ಧ ಅಶ್ಲೀಲ ಪದ ಬಳಕೆ ಮಾಡಿದ್ದಾರೆಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಸಭಾಪತಿ ಬಸವರಾಜ್ ಹೊರಟ್ಟಿ ಅವರಿಗೆ ಲಿಖಿತ ದೂರು ನೀಡಿದ್ದಾರೆ. ಸಿಟಿ ರವಿಯವರು 10 ಬಾರಿ ಅಶ್ಲೀಲ ಪದ ಬಳಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ. ಲಕ್ಷ್ಮೀ ಹೆಬ್ಬಾಳ್ಕರ್ ನೀಡಿರುವ ದೂರಿಗೆ ನಾಗರಾಜ್ ಯಾದವ್ , ಉಮಾಶ್ರೀ, ಡಾ.ಯತೀಂದ್ರ ಸಿದ್ದರಾಮಯ್ಯ, ಬಲ್ಕಿಸ್ ಬಾನು ಸಾಕ್ಷಿಯಾಗಿದ್ದಾರೆ.

ದೂರು ಪಡೆದ ತಕ್ಷಣ ಸಭಾಪತಿಗಳು ಕಲಾಪದ ಆಡಿಯೋ, ವಿಡಿಯೋ ಪರಿಶೀಲನೆ ನಡೆಸಿದರು. ಆಡಿಯೋ, ವಿಡಿಯೋ ಪರಿಶೀಲನೆ ವೇಳೆ ಹಾಜರಿದ್ದ ಡಿಸಿಎಂ ಡಿಕೆ ಶಿವಕುಮಾರ್ ಹಾಜರಿದ್ದರು. ಬಳಿಕ, ಡಿಸಿಎಂ ಡಿಕೆ ಶಿವಕುಮಾರ್ ಸಚಿವರಾದ ಹೆಚ್ .ಕೆ.ಪಾಟೀಲ್ , ಪ್ರಿಯಾಂಕ್ ಖರ್ಗೆ ಸೇರಿದಂತೆ ವಿವಿಧ ನಾಯಕರ ಜೊತೆ ಚರ್ಚೆ ನಡೆಸಿ, ಸಿ.ಟಿ.ರವಿ ವಿರುದ್ಧ ಪೊಲೀಸರಿಗೆ ದೂರು ನೀಡಲು ನಿರ್ಧಾರ ಕೈಗೊಂಡಿದ್ದರು.

ಇದೇ ವೇಳೆ ಪರಿಷತ್ ಹೊರಗೆ ಸಿ.ಟಿ.ರವಿ ಅವರ ಮೇಲೆ ಹಲ್ಲೆಗೆ ಯತ್ನಿಸಲಾಯಿತು. ಸಭಾಪತಿ ಬಸವರಾಜ್ ಹೊರಟ್ಟಿ ಅವರು ಕೂಡಲೇ ಸಿ.ಟಿ.ರವಿ ಅವರನ್ನು ಕರೆಸಿಕೊಂಡರು. ಸಭಾಪತಿ ಮುಂದೆಯೂ ಅಶ್ಲೀಲ ಪದ ಬಳಸಿಲ್ಲವೆಂದು ಸಿ.ಟಿ.ರವಿ ವಾದಿಸಿದರು. ಇಬ್ಬರ ಹೇಳಿಕೆ ದಾಖಲಿಸಿಕೊಂಡು ಸಭಾಪತಿ ಬಸವರಾಜ್ ಹೊರಟ್ಟಿ ಅವರು ರೂಲಿಂಗ್ ನೀಡಿದರು.

**ಸಿಟಿ ರವಿ ಪದ ಬಳಕೆ ಬಿಜೆಪಿ ಸಂಸ್ಕೃತಿನಾ: ಡಿಕೆ ಶಿವಕುಮಾರ್ :** ಕೇಂದ್ರ ಸರ್ಕಾರ ಅಮಿತ್ ಶಾ ಅವರ ಹೇಳಿಕೆ ಬಗ್ಗೆ ಎರಡೂ ಸದನದಲ್ಲಿ ಪ್ರತಿಭಟನೆ ನಡೆಯುತ್ತಿತ್ತು. ಅಂಬೇಡ್ಕರ್ ಅವಮಾನಗೆ ಆಗಿರುವ ಬಗ್ಗೆ ಲಕ್ಷ್ಮೀ ಹೆಬ್ಬಾಳ್ಕರ್ ಮಾತನಾಡುತ್ತಿದ್ದರು. ಸಿ.ಟಿ.ರವಿ ವಿರುದ್ಧ ಸಚಿವೆ ಲಕ್ಷ್ಮೀ ಹೆಬ್ಬಾಳ್ಕಾರ್ ಗರಂ ಆಗಿದ್ದಾರೆ. ವಾಹನ ಗುದ್ದಿಸಿ ಇಬ್ಬರನ್ನು ಕೊಲೆ ಮಾಡಿದ್ದೀಯಾ, ನೀನು ಕೊಲೆಗಾರ, ನೀನು ಕೊಲೆಗಡುಕ ಅಂತ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಕರೆದಿದ್ದಾರೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ತಿಳಿಸಿದರು.

ಆಗ ಲಕ್ಷ್ಮೀ ಹೆಬ್ಬಾಳ್ಕರ್ ಅವರಿಗೆ ಗೆ ಸಿ.ಟಿ.ರವಿ ಅಶ್ಲೀಲ ಪದಗಳಿಂದ ನಿಂದಿಸಿದ್ದಾರೆ. ಬಿಜೆಪಿ ಎಂಎಲ್ ಸಿ ಸಿ.ಟಿ.ರವಿ ಮಾತನಾಡಿರುವ ಬಗ್ಗೆ ದಾಖಲೆ ಇದೆ. ಎಲ್ಲಾ ದಾಖಲೆಗಳನ್ನು ಸಂಗ್ರಹ ಮಾಡಿದ್ದೇನೆ, ನಿಮಗೆ ಕೊಡುತ್ತೇನೆ. ಸಿಟಿ ರವಿ ಮಾತನಾಡಿದ್ದು ಚಿಕ್ಕಮಗಳೂರು ಜಿಲ್ಲೆಯ ಸಂಸ್ಕೃತಿನಾ ಭಾರತೀಯ ಸಂಸ್ಕೃತಿನಾ ಅಥವಾ ಬಿಜೆಪಿ ಸಂಸ್ಕೃತಿನಾ ಎಂದು ಪ್ರಶ್ನಿಸಿದರು.

## ರಕ್ತ ಬರುವಂತೆ ಸಿ.ಟಿ ರವಿ ಮೇಲೆ ಹಲ್ಲೆ

### ನನ್ನ ಕೊಲೆಗೆ ಸಂಚು ರೂಪಿಸಿದ್ದಾರೆಂದು ಚೀರಾಡಿದ ಎಂಎಲ್‌ಸಿ

**ಬೆಳಗಾವಿ:** ಇಲ್ಲಿನ ಸುವರ್ಣಸೌಧದಲ್ಲಿ ಡಿ. 19ರಂದು ನಡೆದ ವಿಧಾನ ಪರಿಷತ್ ಕಲಾಪದಲ್ಲಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಅವಾಚ್ಯ ಶಬ್ದಗಳಿಂದ ಬಿಜೆಪಿ ನಾಯಕ ಸಿ.ಟಿ ರವಿ ನಿಂದಿಸಿದ್ದು ರಾಜ್ಯ ರಾಜಕೀಯದಲ್ಲಿ ದೊಡ್ಡ ರಾದ್ಧಾಂತವಾಗಿದೆ. ಮಹಿಳೆಯರಿಗೆ ಅಪಮಾನವಾಗುವಂತಹ ಬಳಸಿದ್ದಕ್ಕಾಗಿ ಅವರ ಎಫ್ ಐಆರ್ ಕೂಡ ಆಗಿದೆ. ಪೊಲೀಸರು ಬಂಧಿಸಿ ರಾತ್ರಿಯಿಡೀ ಸುತ್ತಾಡಿಸಿದ್ದಾರೆ.




ಈ ವೇಳೆ ಸಿ.ಟಿ ರವಿ ಅವರ ಮೇಲೆ ಹಲ್ಲೆಯೂ ನಡೆದ್ದು, ತಲೆಗೆ ಗಾಯವಾಗಿದೆ. ಹಣೆಯಿಂದ ರಕ್ತ ಸೋರುತ್ತಿರುವ ದೃಶ್ಯಗಳು ಕಂಡುಬಂದಿವೆ. ಅಲ್ಲದೇ ಹಣೆಯಲ್ಲಿ ರಕ್ತ ಸೋರುತ್ತಿದ್ದರೂ ಪೊಲೀಸರು ಹೊತ್ತು ಅವರನ್ನು ಜೀಪ್‌ನಲ್ಲಿ ಕೂರಿಸಿರುವ ದೃಶ್ಯಗಳು ಜಾಲತಾಣಗಳಲ್ಲೂ ಸದ್ದು ಮಾಡುತ್ತಿವೆ.

**ಖಾನಾಪುರ ಪೊಲೀಸ್ ಠಾಣೆ ಮುಂದೆ ಹೈಡ್ರಾಮಾ:** ಇನ್ನೂ ಸಿ.ಟಿ ರವಿ ಅವರನ್ನ ಬೆಂಗಳೂರಿಗೆ ಕರೆತರುವ ವೇಳೆ ಖಾನಾಪುರ ಪೊಲೀಸ್ ಠಾಣೆ ಮುಂದೆ ಭಾರೀ ಹೈಡ್ರಾಮಾ ನಡೆದಿದೆ. ಹಣೆಗೆ ಪೆಟ್ಟಾಗಿ ರಕ್ತ ಸೋರುತ್ತಿದ್ದರೂ, ಪೊಲೀಸರು ಸಿ.ಟಿ ರವಿ ಅವರನ್ನ ಹೊತ್ತು ವಾಹನದಲ್ಲಿ ಹಾಕಿದ್ದಾರೆ. ಈ ವೇಳೆ ನನ್ನ ಕೊಲೆಗೆ ಸಂಚು ರೂಪಿಸಿದ್ದಾರೆ ಎಂದು ಸಿ.ಟಿ ರವಿ ಚೀರಾಡಿದ್ದಾರೆ.

**ಡಿಕೆಶಿ, ಲಕ್ಷ್ಮಿ ಹೆಬ್ಬಾಳ್ಕರ್ ನೇರವಾಗಿ ಬೆದರಿಕೆ ಹಾಕಿದ್ದಾರೆ:** ಡಿಸಿಎಂ ಶಿವಕುಮಾರ್ ಹಾಗೂ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ನೇರವಾಗಿ ಸುವರ್ಣ ಸೌಧ ಸಭಾಂಗಣದಲ್ಲಿ ಬೆದರಿಕೆ ಹಾಕಿದ್ದಾರೆ ಎಂದು ಎಂಎಲ್‌ಸಿ ಸಿ.ಟಿ ರವಿ ಗಂಭೀರ ಆರೋಪ ಮಾಡಿದ್ದಾರೆ.

ಠಾಣೆಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪೊಲೀಸರಿಂದ ಜೀವಕ್ಕೆ ಅಪಾಯವಿದೆ. ಅನುಮಾನಾಸ್ಪದವಾಗಿ, ನಿಗೂಢವಾಗಿ ವರ್ತನೆ ಮಾಡುತ್ತಿದ್ದಾರೆ. ಇಲ್ಲಿಗೆ ನಮ್ಮನ್ನು ಯಾಕೆ ಕರೆದುಕೊಂಡು ಬಂದರು ಎಂದು ಹೇಳಿಲ್ಲ. ನನ್ನ ಮೇಲೆ ಯಾವ ಕೇಸ್ ಹಾಕಿದ್ದಾರೆ ಎಂದು ಮಾಹಿತಿ ನೀಡಿಲ್ಲ. ನನ್ನನ್ನು ಪ್ರತ್ಯೇಕವಾಗಿ ಕರೆದುಕೊಂಡು ಬಂದಿದ್ದಾರೆ. ಸುವರ್ಣಸೌಧದಲ್ಲಿ ನನ್ನ ಮೇಲೆ ಕೊಲೆ ಪ್ರಯತ್ನ ನಡೆಯಿತು. ಕೊಲೆ ಪ್ರಯತ್ನದ ಬಗ್ಗೆ ಸಭಾಪತಿಗೂ ದೂರುಕೊಟ್ಟಿದ್ದೇನೆ ಎಂದು ಕಿಡಿಕಾರಿದರು.

ಪೊಲೀಸರಿಗೆ ದೂರು ನೀಡಿದ್ದೇನೆ. ಕಳೆದ 2 ಗಂಟೆಯಿಂದ ಎಫ್‌ಐಆರ್ ಮಾಡಿ ಎಂದು ಒತ್ತಾಯಿಸಿದ್ದೇನೆ. ನಮಗೆ ಎಫ್‌ಐಆರ್ ಕಾಪಿ ನೀಡುತ್ತಿಲ್ಲ. ಪೊಲೀಸರ ನಡೆ ಅನುಮಾನಸ್ಪದವಾಗಿದೆ. ಇವರದು ಹಿಡನ್ ಅಜೆಂಡಾ ಇದ್ದ ಹಾಗೆ ಕಾಣುತ್ತಿದೆ. ಇದರ ಹಿಂದಿನ ದುರುದ್ದೇಶ ನನಗೆ ತಿಳಿಯುತ್ತಿಲ್ಲಾ. ಸಭಾಪತಿ ಅವರು ರೋಲಿಂಗ್ ಕೊಟ್ಟ ಮೇಲೆ ಇವರು ಯಾವ ಕಾರಣಕ್ಕೆ ಎಫ್‌ಐಆರ್ ಹಾಕಿದ್ದಾರೆ ಹೇಳಬೇಕು. ಏನೇ ಇರಲಿ ಅವರು ಮೊದಲು ನನಗೆ ಹೇಳಬೇಕು. ಇವರ ನಡೆ ಅನುಮಾನಾಸ್ಪದವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ವಿ.ಕಾಮೇಶ್ವರ ರಾವ್ ಮಾಹಿತಿ

# ಲೋಕ ಅದಾಲತ್‌ನಲ್ಲಿ 38,80,881 ಪ್ರಕರಣ ಇತ್ಯರ್ಥ

**ಬೆಂಗಳೂರು:** ಇದೇ ಡಿಸೆಂಬರ್ 14 ರಂದು ನಡೆದ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ ರಾಜ್ಯದ ನ್ಯಾಯಾಲಯಗಳಲ್ಲಿನ 38,80,881 ಪ್ರಕರಣಗಳು ಇತ್ಯರ್ಥಗೊಂಡಿದ್ದು ಇದರ ಒಟ್ಟು ಪರಿಹಾರದ ಮೊತ್ತ 2248 ಕೋಟಿಯಾಗಿದೆ ಎಂದು ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ವಿ.ಕಾಮೇಶ್ವರ ರಾವ್ ತಿಳಿಸಿದರು.

ಡಿಸೆಂಬರ್ 18 ರಂದು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಈ ಕುರಿತು ಹಮ್ಮಿಕೊಳ್ಳಲಾದ ಮಾಧ್ಯಮ ಗೋಷ್ಠಿಯಲ್ಲಿ ಈ ವಿಷಯ ತಿಳಿಸಿ ಮಾತನಾಡುತ್ತಾ, ದಂಪತಿಗಳ ವೈವಾಹಿಕ ಜೀವನಕ್ಕೆ ಸಂಬಂಧಿಸಿದಂತೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಒಟ್ಟು 1581 ವೈವಾಹಿಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಸದರಿ ಪ್ರಕರಣಗಳಲ್ಲಿ ಸುಮಾರು 307 ದಂಪತಿಗಳು ರಾಜಿ ಸಂಧಾನದಿಂದ ಒಂದಾಗಿ ಜೀವನ ನಡೆಸಲು ತೀರ್ಮಾನಿಸಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಂಡಿರುತ್ತಾರೆ ಎಂದು ಹೇಳಿದರು.

(ವಿಭಾಗ ದಾವೆ) ಗೆ ಸಂಬಂಧಿಸಿದಂತೆ ಒಟ್ಟು 3311 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಮೋಟಾರು ವಾಹನ ಅಪರಾಧ ಪರಿಹಾರ ಪ್ರಕರಣಗಳಿಗೆ ಸಂಬಂಧಿತ ಒಟ್ಟು 5168 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ರೂ.260 ಕೋಟಿಗಳಷ್ಟು ಪರಿಹಾರ ಮೊತ್ತವನ್ನು ಇತ್ಯರ್ಥಪಡಿಸಲಾಗಿದೆ ಎಂದು ಹೇಳಿದರು.

(ಚೆಕ್ ಬೌನ್ಸ್) ಒಟ್ಟು 11,262 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಎಲ್.ಎ.ಸಿ. ಅಮಲ್ಜಾರಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಒಟ್ಟು 597 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಎಂ.ವಿ.ಸಿ. ಅಮಲ್ಜಾರಿಯ ಒಟ್ಟು 1004 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ರೂ. 82 ಕೋಟಿಗಳನ್ನು ಪರಿಹಾರ ಮೊತ್ತವಾಗಿ ನೀಡಲಾಗಿರುತ್ತದೆ ಎಂದು ತಿಳಿಸಿದರು. ಇತರೆ ಅಮಲ್ಜಾರಿಯ ಒಟ್ಟು 3432 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ರೂ. 132 ಕೋಟಿಗಳನ್ನು ಇತ್ಯರ್ಥದ ಮೊತ್ತವಾಗಿ ನೀಡಲಾಗಿರುತ್ತದೆ ಎಂದು ಹೇಳಿದರು. ಗ್ರಾಹಕರ ವ್ಯಾಜ್ಯಗಳ ಒಟ್ಟು 611 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ರೂ. 3 ಕೋಟಿ 53 ಲಕ್ಷಗಳನ್ನು ಇತ್ಯರ್ಥದ ಮೊತ್ತವಾಗಿ ನೀಡಲಾಗಿರುತ್ತದೆ. ರೇರಾಗೆ ಸಂಬಂಧಿಸಿದ ಒಟ್ಟು 82 ಪ್ರಕರಣಗಳನ್ನು ಇತ್ಯರ್ಥ ಪಡಿಸಿದ್ದು ರೂ. 5 ಕೋಟಿ 28 ಲಕ್ಷ ಇತ್ಯರ್ಥಗೊಂಡಿರುತ್ತದೆ ಎಂದರು.

ಈ ರಾಷ್ಟ್ರೀಯ ಲೋಕ್ ಆದಾಲತ್‌ನ ಇನ್ನೊಂದು ವಿಶೇಷವೆಂದರೆ ಹಿರಿಯ ನಾಗರಿಕರು 1921 ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಂಡು ಲೋಕ್ ಅದಾಲತ್‌ನ ಪ್ರಯೋಜನ ಪಡೆದಿರುತ್ತಾರೆ. ಈ ಬಾರಿಯ ರಾಷ್ಟ್ರೀಯ ಲೋಕ್ ಆದಾಲತ್‌ನ ವಿಶೇಷ ಪ್ರಕರಣಗಳ ವಿಲೇವಾರಿ : ಗೌರವಾನ್ವಿತ ಉಚ್ಚ ನ್ಯಾಯಾಲಯ, ಬೆಂಗಳೂರು ಪೀಠದಲ್ಲಿ ಎಂ.ಎಫ್.ಎ. ನಂ. 2068/2024. ಶಿವಣ್ಣ ವಿರುದ್ಧ ಶ್ರೀರಾಮ್ ಜನರಲ್ ಇನ್ಸೂರೆನ್ಸ್ ಕಂಪನಿ ಲಿಮಿಟೆಡ್ ಪ್ರಕರಣವು ರೂ. 88,00,000/- ಲಕ್ಷಕ್ಕೆ (ಎಂ.ವಿ.ಸಿ. ಸಂಖ್ಯೆ 1807/2022 ಪ್ರಕರಣದಲ್ಲಿ ಘೋಷಿಸಿರುವ ಪರಿಹಾರ ಮೊತ್ತ ರೂ. 21,26,000/-) ಗೌರವಾನ್ವಿತ ನ್ಯಾಯಮೂರ್ತಿ ವಿ. ಕಾಮೇಶ್ವರ ರಾವ್, ನ್ಯಾಯಮೂರ್ತಿಗಳು, ಉಚ್ಚ ನ್ಯಾಯಾಲಯ ರವರ ಪೀಠದ ಮುಂದೆ ಇತ್ಯರ್ಥವಾಗಿರುತ್ತದೆ.

ಬೆಂಗಳೂರಿನ ಹೆಚ್ಚುವರಿ ನಗರ ಸಿವಿಲ್ ನ್ಯಾಯಾಲಯದಲ್ಲಿನ (ಸಿಸಿಹೆಚ್ -83) ಅಂಟ.ಂ.ಕ. ಓಂ. 74/2022, ಶ್ರೀ ಶ್ರೀನಿವಾಸ ಎ.ಎಸ್. ವಿರುದ್ಧ ಮೇ. ಕಾಂಡಿಡ್ ಬಿಲ್ಡರ್ಸ್ ಪ್ರೈ.ಲಿ., ಪ್ರಕರಣವು ರೂ. 23,70,00,000/- (ಇಪ್ಪತ್ತೂರು ಕೋಟಿ ಎಪ್ಪತ್ತು ಲಕ್ಷಗಳು) ಇತ್ಯರ್ಥವಾಗಿರುತ್ತದೆ.

ಬೆಂಗಳೂರಿನ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ (ಎಸಿಎಂಎಂ-34) ನ್ಯಾಯಾಲಯದಲ್ಲಿನ ಸಿ.ಸಿ. ನಂ. 54618/2022, ಆಕ್ಸಿಸ್ ಬ್ಯಾಂಕ್ ವಿರುದ್ಧ ಎಲ್. ಜಯರಾಮ್, ಚೆಕ್ ಬೌನ್ಸ್ ಪ್ರಕರಣವನ್ನು ರೂ. 19,87,00,000/- (ರೂ. ಹತ್ತೊಂಬತ್ತು ಕೋಟಿ ಎಂಬತ್ತೇಳು ಲಕ್ಷಗಳು) ಗಳಿಗೆ ಇತ್ಯರ್ಥಪಡಿಸಲಾಗಿರುತ್ತದೆ.

ಕೋಲಾರ ಜಿಲ್ಲೆಯ 1ನೇ ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಲಯದಲ್ಲಿ ದಾಖಲಾಗಿದ್ದ ನಿರ್ದಿಷ್ಟ ಕರಾರು ಪಾಲನೆಯ ಪ್ರಕರಣ ಸಂಖ್ಯೆ 409/2023. ಕಳವಗುಂಟ ಜಗನ್ಮೋಹನ್ ವಿರುದ್ಧ ಎಸ್.ವಿ. ಡೆವೆಲಪರ್, ಪ್ರಕರಣವನ್ನು ತಾಜಿ ಮೂಲಕ ರೂ. 1,00,00,000/- (ರೂ. ಒಂದು ಕೋಟಿ) ಗಳಿಗೆ ಇತ್ಯರ್ಥಪಡಿಸಲಾಯಿತು.

ಈ ಬಾರಿಯ ರಾಷ್ಟ್ರೀಯ ಲೋಕ್ ಅದಾಲತ್ ನಲ್ಲಿ 5 ವರ್ಷ ಮತ್ತು ಅದಕ್ಕೂ ಹಳೆಯ ವರ್ಷಗಳ 2,259 ಪ್ರಕರಣಗಳು, 10 ವರ್ಷ ಮತ್ತು ಅದಕ್ಕೂ ಹಳೆಯ ವರ್ಷಗಳ 261 ಪ್ರಕರಣಗಳು ಹಾಗೂ 15 ವರ್ಷ ಮತ್ತು ಅದಕ್ಕೂ ಹಳೆಯ ವರ್ಷಗಳ 68 ಪ್ರಕರಣಗಳು ಒಟ್ಟು 2,588 ಹಳೆಯ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿರುತ್ತದೆ.

ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಪೋಷಕರಾದ ನ್ಯಾ ಎನ್.ವಿ.ಅಂಜಾರಿಯಾ ರವರ ಸೂಕ್ತ ಮಾರ್ಗದರ್ಶನದಲ್ಲಿ ಸದರಿ ಲೋಕ್ ಅದಾಲತ್ ಅನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸಲಾಗಿದೆ ಎಂದರು.

ರಾಷ್ಟ್ರೀಯ ಲೋಕ್ ಆದಾಲತ್‌ನಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ಸಂಪೂರ್ಣ ಸಹಕಾರ ನೀಡಿರುವ ನ್ಯಾಯಾಂಗ ಅಧಿಕಾರಿಗಳು, ವಕೀಲರು. ಕಕ್ಷಿದಾರರು. ವಿಮಾ ಕಂಪನಿಯ ಅಧಿಕಾರಿಗಳು, ಬ್ಯಾಂಕ್ ಅಧಿಕಾರಿಗಳು, ಸರ್ಕಾರದ ವಿವಿಧ ಇಲಾಖೆಯ ಮುಖ್ಯಸ್ಥರು, ಅಧಿಕಾರಿಗಳಿಗೆ, ಕಕ್ಷಿದಾರರಿಗೆ ಹಾಗೂ ಮಾಧ್ಯಮ ಮಿತ್ರರಿಗೆ ಧನ್ಯವಾದಗಳನ್ನು ಸಲ್ಲಿಸಿದರು.

## ಡಾ. ಪುರುಷೋತ್ತಮ ಬಿಳಿಮಲೆ ನೇತೃತ್ವದ ನಿಯೋಗವು ನವದೆಹಲಿ ಭೇಟಿ

# ಕನ್ನಡದ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ಆಗ್ರಹ

**ನವದೆಹಲಿ / ಬೆಂಗಳೂರು:** ಕನ್ನಡದ ಜ್ವಲಂತ ಸಮಸ್ಯೆಗಳ ಪರಿಹಾರ ಕುರಿತಂತೆ ಕೇಂದ್ರ ಸರ್ಕಾರವನ್ನು ಆಗ್ರಹಿಸುವ ಸಲುವಾಗಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದವತಿಯಿಂದ ಪರಿಣಿತರ ಸಮಿತಿಯು ನವದೆಹಲಿಗೆ ಆಗಮಿಸಿ, ಹಲವಾರು ಪ್ರಮುಖ ವಿಷಯಗಳ ಕುರಿತಂತೆ ನಿಯೋಗವು ಗಣ್ಯರ ಗಮನಕ್ಕೆ ತಂದಿದ್ದು, ಇವುಗಳ ಪರಿಹಾರಕ್ಕೆ ಪ್ರಾಮಾಣಿಕವಾಗಿ ಪ್ರಯತ್ನಿಸುವುದಾಗಿ ಗಣ್ಯರು ಭರವಸೆ ನೀಡಿರುತ್ತಾರೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ. ಪುರುಷೋತ್ತಮ ಬಿಳಿಮಲೆ ಅವರು ಮಾಧ್ಯಮಗಳಿಗೆ ತಿಳಿಸಿದರು.



ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ, ಧರ್ಮೇಂದ್ರ ಪ್ರಧಾನ್ ರವರುಗಳನ್ನು ಭೇಟಿ ಮಾಡಿ ಮನವಿ ಪತ್ರಗಳನ್ನು ಸಲ್ಲಿಸಲಾಗಿದೆ. ಮಾಜಿ ಪ್ರಧಾನಿಗಳಾದ ಹೆಚ್.ಡಿ. ದೇವೇಗೌಡ ರವರನ್ನು ಸಹ ಭೇಟಿ ಮಾಡಿ ಸಹಕರಿಸಲು ಕೋರಲಾಗಿದೆ ಎಂದು ಅವರು ತಿಳಿಸಿದರು.

ದಿನಾಂಕ 17/12/2024 ರಂದು ರಾಜ್ಯದ ಸಂಸದರ ಸಭೆ ಕರೆದು ಕನ್ನಡ ಸಮಸ್ಯೆಗಳ ಕುರಿತಂತೆ ಮನವರಿಕೆ ಮಾಡಲಾಗಿದೆ. ಈ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್, ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಂಸದರಾದ ಕುಮಾರನಾಯ್ಕ್, ತುಕಾರಂ, ಈರಣ್ಣ ಕಡಾರಿ, ಡಾ. ಸಿ.ಎನ್. ಮಂಜುನಾಥ್ ಇದ್ದರು. ದಿನಾಂಕ 18/12/2024 ರಂದು ಸಂಸದರಾದ ಶ್ರೀಮತಿ ಸುಧಾಮೂರ್ತಿ, ಡಾ. ಕೆ.ಸುಧಾಕರ್ ಅವರುಗಳನ್ನು ಭೇಟಿ ಮಾಡಲಾಗಿದೆ.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರವರು ಕನ್ನಡಕ್ಕಾಗಿ ತಾವು ಎಂದಿಗೂ ಸೇವೆಗೆ ಸಿದ್ಧ. ನೀವು ತಂದಿರುವ ಕನ್ನಡದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಕ್ರಿಯಾಶೀಲರಾಗಿ ಪಾಲ್ಗೋಳ್ಳುತ್ತೇನೆ ಎಂಬ ಭರವಸೆಯನ್ನು ನೀಡಿದ್ದಾರೆ. ಕೇಂದ್ರ ಮಂತ್ರಿ ಸನ್ಮಾನ್ಯ ಹೆಚ್.ಡಿ. ಕುಮಾರಸ್ವಾಮಿರವರು ಸಹ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ನಿಯೋಗದ ಮನವಿಯನ್ನು ಪೂರ್ಣವಾಗಿ ಓದಿ ಕೇಂದ್ರ ಸರ್ಕಾರದ ಕ್ರಮಗಳಿಗೆ ಈ ಕೋರಿಕೆಗಳು ಪ್ರಸ್ತುತವಾಗಿದ್ದು, ತಮ್ಮೆಲ್ಲ ಸಹಕಾರವನ್ನು ನೀಡಲಾಗುತ್ತದೆ ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್ ಅವರು, ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಕಾರಜೋಳರವರು ಹಾಗೂ ಸಭೆಯಲ್ಲಿ ಹಾಜರಿದ್ದ ನಿಯೋಗದ ಮನವಿಯನ್ನು ಸ್ವೀಕರಿಸಿ ಕನ್ನಡದ ಸೇವೆಗೆ ತಾವು ಸದಾ ಸಿದ್ಧವೆಂದು ಹೇಳಿದ್ದಾರೆ. ಎಲ್ಲ ಸಂಸದರು ಸಂಸತ್ತಿನಲ್ಲಿ ಕನ್ನಡದಲ್ಲಿಯೇ ಮಾತನಾಡಬೇಕೆಂಬ ನನ್ನ ಆಗ್ರಹಕ್ಕೆ ಕ್ರಿಯಾಶೀಲವಾಗಿ ಸ್ಪಂದಿಸಿದ್ದಾರೆ.

ರಾಜ್ಯಸಭೆಯ ವಿರೋಧಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರನ್ನು ನಿಯೋಗವು ದಿನಾಂಕ 18/12/2024 ರಂದು ಭೇಟಿ ಮಾಡಿ ಮನವಿ ಸಲ್ಲಿಸಿದೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅನು?ಾನ ಯೋಗ್ಯ ಸಲಹೆಗಳೆಲ್ಲದರ ಕುರಿತಂತೆ ಕ್ರಮವಹಿಸಲು ಸಂಬಂಧಪಟ್ಟ ಸಚಿವರಿಗೆ ಕೋರಲಾಗವುದು ಎಂದು ಅವರು ಪ್ರತಿಕ್ರಿಯಿಸಿದ್ದಾರೆ ಎಂದು ತಿಳಿಸಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರ ನವದೆಹಲಿಯಲ್ಲಿ ಇರುವ ಆಯ್ದ ರಸ್ತೆ-ನಿಲ್ದಾಣಗಳಿಗೆ ಕನ್ನಡದ ಮೇರು ವ್ಯಕ್ತಿಗಳ ಹೆಸರನ್ನು ಇಡಬೇಕೆಂದು ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಲಿದೆ. ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ರವರೊಂದಿಗೆ ಸಂಸತ್ ಭವನದಲ್ಲಿ ಸಭೆಯನ್ನು ನಡೆಸಲಾಗಿದ್ದು, ಕೆಳಕಂಡ ವಿಷಯಗಳ ಕುರಿತಂತೆ ಕ್ರಮವಹಿಸುವುದಾಗಿ ತಿಳಿಸಿದ್ದಾರೆ ಎಂದರು.

ಮೈಸೂರಿನಲ್ಲಿರುವ ಕೇಂದ್ರ ಭಾರತೀಯ ಭಾಷಾಸಂಸ್ಥೆಯ (ಸಿಐಐಎಲ್) ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರವನ್ನು ಪ್ರತ್ಯೇಕಿಸಲಾಗುವುದು. ಶಾಸ್ತ್ರೀಯ ಕನ್ನಡ ಅತ್ಯುನ್ನತ ಕೇಂದ್ರಕ್ಕೆ ಕೇಂದ್ರ ಸರ್ಕಾರದಿಂದ ನೀಡಬೇಕಿರುವ ಎಲ್ಲಾ ಆರ್ಥಿಕ ಸಹಕಾರವನ್ನು ಒದಗಿಸಲಾಗುವುದು.

ಕೇಂದ್ರ ಭಾರತೀಯ ಭಾಷಾಸಂಸ್ಥೆಯ ಆಡಳಿತ ವ್ಯಾಪ್ತಿಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಸಮರ್ಪಕ ಕಾರ್ಯಚಟುವಟಿಕೆಗಳಿಗೆ ಕಾಯಕಲ್ಪವು ಅಗತ್ಯವಿದ್ದು, ಈ ಕೇಂದ್ರದ ಆಡಳಿತ ವ್ಯವಸ್ಥೆಯನ್ನು ಮೇಲ್ದರ್ಜೆಗೇರಿಸಿ ಅನುಕೂಲ ಮಾಡಲಾಗುವುದು.

ಮೈಸೂರಿನ ಕೇಂದ್ರ ಭಾರತೀಯ ಭಾಷಾಸಂಸ್ಥೆಯು ತನ್ನ ಸ್ಥಾಪನೆಯನ್ನು ಅರ್ಥಪೂರ್ಣವಾಗಿಸಲು ಇನ್ನಷ್ಟು ತಂತ್ರಜ್ಞಾನ ಸ್ನೇಹಿಯಾಗಬೇಕಾದ ಅನಿವಾರ್ಯತೆ ಇದೆ ಎಂದು ಪ್ರಧಾನ್ ಅಭಿಪ್ರಾಯಿಸಿದ್ದು, ಈಗಾಗಲೇ ಕೇಂದ್ರ ಸರ್ಕಾರವು ಬೆಂಗಳೂರಿನಲ್ಲಿ ಈ ಸಂಸ್ಥೆಯ ತಂತ್ರಜ್ಞಾನ ಕಚೇರಿಯನ್ನು ತೆರೆಯಲು ಸೂಚಿಸಲಾಗಿದೆ ಎಂಬ ಮಾಹಿತಿಯನ್ನು ಧರ್ಮೇಂದ್ರ ಪ್ರಧಾನ್ ನೀಡಿದ್ದಾರೆ ಎಂದು ತಿಳಿಸಿದರು.

ಶಾಸ್ತ್ರೀಯ ಕನ್ನಡ ಸ್ಥಾನಮಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ನಿಟ್ಟಿನಲ್ಲಿ ಸೂಕ್ತ ಸಲಹೆಗಳು ಅವಶ್ಯಕವಿದ್ದು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಈ ಕುರಿತಂತೆ ಸಲಹೆಗಳನ್ನು ನೀಡಿದಲ್ಲಿ ಅವುಗಳ ಅನು?ಾನದ ಕುರಿತಂತೆ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದ್ದು, ಈ ಬಗ್ಗೆ ತಜ್ಞರಿಂದ ವರದಿ ಸಿದ್ಧಪಡಿಸಿ ಸಲ್ಲಿಸಲಾಗುವುದು.

ಕನ್ನಡ ಭಾಷಾಕಲಿಕಾ ಅಧಿನಿಯಮದ ಅನುಸಾರ ಕನ್ನಡವನ್ನು ಕಡ್ಡಾಯವಾಗಿ ಕಲಿಸಲು ರಾಜ್ಯದ ಎಲ್ಲಾ ಕೇಂದ್ರ ಪಠ್ಯಕ್ರಮದ ಶಾಲೆಗಳಿಗೆ ನಿರ್ದೇಶನ ನೀಡಲು ನಿಯೋಗವು ಸಚಿವರನ್ನು ಕೋರಿದ್ದು, ಮುಂದಿನ ಒಂದು ವಾರದೊಳಗೆ ಅಗತ್ಯ ನಿರ್ದೇಶನ ನೀಡುತ್ತೇನೆ ಎಂದು ಪ್ರಧಾನ್ ಭರವಸೆ ನೀಡಿದ್ದಾರೆ.

ಜವಾಹರ್ಲಾಲ್ ವಿಶ್ವವಿದ್ಯಾಲಯದಲ್ಲಿರುವ ಕನ್ನಡ ಪೀಠಕ್ಕೆ ಪ್ರಾಧ್ಯಾಪಕರ ನೇಮಕಾತಿ ಆಗಿಲ್ಲದೇ ಇರುವ ಅಂಶದ ಕುರಿತಂತೆ ನಿಯೋಗದ ಮನವಿಯನ್ನು ಆಲಿಸಿದ ಸಚಿವರು ಕೇಂದ್ರ ಸಚಿವರಿಗೆ ತಾವು ಸಹ ಪತ್ರ ಬರೆದು ಕೂಡಲೇ ಕ್ರಮವಹಿಸಲು ಮನವಿ ಮಾಡುವುದಾಗಿ ತಿಳಿಸಿದ್ದಾರೆ. ಅದೇ ರೀತಿ ಕನ್ನಡ ಭಾಷಾಕಲಿಕಾ ಅಧಿನಿಯಮ 2015ರ ಅನು?ಾನಕ್ಕಾಗಿ ಕೇಂದ್ರ ಪಠ್ಯಕ್ರಮದ ಶಾಲೆಗಳಿಗೆ ಸೂಚನೆ ನೀಡುವ ಕುರಿತಂತೆಯೂ ಕೇಂದ್ರ ಶಿಕ್ಷಣ ಸಚಿವರಿಗೆ ಕೋರುವುದಾಗಿ ಪ್ರಲ್ಹಾದ ಜೋಶಿರವರು ಮಾಹಿತಿ ನೀಡಿದ್ದಾರೆ.

ನಿಯೋಗದಲ್ಲಿ ನನ್ನ ಜೊತೆಯಲ್ಲಿ ಮಾಜಿ ಸಭಾಪತಿಗಳಾದ ವಿ.ಆರ್. ಸುದರ್ಶನ್, ಮಾಜಿ ಸಂಸದ ಎಲ್. ಹನುಮಂತಯ್ಯ, ಶಿಕ್ಷಣತಜ್ಞ ಹಿ.ಚಿ. ಬೋರಲಿಂಗಯ್ಯ, ಸಾಹಿತಿಗಳಾದ ಅಗ್ರಹಾರ ಕೃಷ್ಣಮೂರ್ತಿ, ವಿದ್ಯಾವರ್ಧಕ ಸಂಘ ಧಾರವಾಡದ ಶಂಕರ ಹಲಗತ್ತಿ, ಪ್ರಾಧಿಕಾರದ ಸದಸ್ಯರಾದ ವಿ.ಪಿ. ನಿರಂಜನಾರಾಧ್ಯ, ಎ.ಬಿ.ರಾಮಚಂದ್ರಪ್ಪ, ದಾಕ್ಷಾಯಿಣಿ ಹುಡೇದ ಹಾಗೂ ಪ್ರಾಧಿಕಾರದ ಕಾರ್ಯದರ್ಶಿ ಡಾ.ಸಂತೋಷ ಹಾನಗಲ್ಲ ಮತ್ತು ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಟಿ.ಎಸ್. ಫಣಿಕುಮಾರ್ ಇದ್ದರು ಎಂದು ಅವರು ತಿಳಿಸಿದರು.

## ತರಬೇತಿ ಕಾರ್ಯಕ್ರಮ

**ಬೆಂಗಳೂರು:** ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ನಿಖರ ಬೇಸಾಯ ಅಭಿವೃದ್ಧಿ ಕೇಂದ್ರ, ತೋಟಗಾರಿಕೆ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು ಹಾಗೂ ಐಸಿಎಆರ್ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಂಯುಕ್ತ ಆಶ್ರಯದಲ್ಲಿ ಡಿಸೆಂಬರ್ 17 ರಿಂದ 23 ರ ವರೆಗೆ ಹಮ್ಮಿಕೊಂಡಿರುವ ಒಂದು ವಾರದ ''ಸೂಕ್ಷ್ಮ ನೀರಾವರಿ'' ತರಬೇತಿ ಕಾರ್ಯಕ್ರಮವನ್ನು ಕೃಷಿ ವಿಶ್ವವಿದ್ಯಾನಿಲಯದ ಸಂಶೋಧನಾ ನಿರ್ದೇಶನಾಲಯದ ಮುಖ್ಯ ವೈಜ್ಞಾನಿಕ ಅಧಿಕಾರಿ ಹಾಗೂ ಕೃಷಿ ಇಂಜಿನೀಯರಿಂಗ್ ಕಾಲೇಜಿನ ವಿಶೇಷ ಅಧಿಕಾರಿ ಡಾ.ಹೆಚ್.ಜಿ. ಅಶೋಕ್ ಉದ್ಘಾಟಿಸಿದರು. ನಂತರ ಮಾತನಾಡಿದ ಅವರು, ಸೂಕ್ಷ್ಮ ನೀರಾವರಿಯ ವಿಧಗಳು, ಮಹತ್ವ ಹಾಗೂ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಸೂಕ್ಷ್ಮ ನೀರಾವರಿ ಅಳವಡಿಸಿಕೊಳ್ಳಲು ರೈತರನ್ನು ಪ್ರೋತ್ಸಾಹಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ದೊರೆಯುವ ಯೋಜನೆಯ ಸೌಲಭ್ಯಗಳನ್ನು ರೈತರು ಪಡೆಯಬೇಕು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಮುಖ್ಯ ಅತಿಥಿಯಾಗಿ ಕೃಷಿ ವಿಶ್ವವಿದ್ಯಾನಿಲಯದ ತೋಟಗಾರಿಕೆ ವಿಭಾಗದ ನಿವೃತ್ತ ಪ್ರಾಧ್ಯಾಪಕರಾದ ಡಾ.ಆರ್.ಕೃಷ್ಣ ಮನೋಹರ್ ಮಾತನಾಡಿ, ಸೂಕ್ಷ್ಮ ನೀರಾವರಿಯನ್ನು ಅಳವಡಿಸಿಕೊಂಡು ಹೆಚ್ಚಿನ ಬೆಳೆ ಉತ್ಪಾದನೆ ಹಾಗೂ ಬೆಳೆಯ ಗುಣಮಟ್ಟವನ್ನು ಹೆಚ್ಚಿಸುವುದರ ಜೊತೆಗೆ ನೀರಿನ ಉಳಿತಾಯದ ಬಗ್ಗೆ ಹಾಗೂ ರಸಾವರಿ ಕುರಿತು ಉಪಯೋಗ ಮತ್ತು ಅಳವಡಿಸಿಕೊಳ್ಳುವುದರ ಬಗ್ಗೆ ರೈತರಿಗೆ ಮನದಟ್ಟು ಮಾಡಿದರು. ಕಾರ್ಯಕ್ರಮದಲ್ಲಿ ಡಾ. ಶ್ರೀನಿವಾಸಪ್ಪ.ಕೆ.ಎನ್.,ಪ್ರಾಧ್ಯಾಪಕರು ಹಾಗೂ ಪ್ರಧಾನ ಸಂಶೋಧಕರು, ನಿಖರ ಕೃಷಿ ಅಭಿವೃದ್ಧಿ ಕೇಂದ್ರ, ತೋಟಗಾರಿಕೆ ವಿಭಾಗ, ಡಾ. ಬಿ.ಜಿ. ಹನುಮಂತರಾಯ, ಹಿರಿಯ ವಿಜ್ಞಾನಿಗಳು ಹಾಗೂ ಮುಖ್ಯಸ್ಥರು, ಕೃಷಿ ವಿಜ್ಞಾನಕೇಂದ್ರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ಡಾ. ಪಿ. ವೆಂಕಟೇಶ ಮೂರ್ತಿ, ಪ್ರಾಧ್ಯಾಪಕರು ಹಾಗೂ ವಿಶ್ವವಿದ್ಯಾನಿಲಯ ಮುಖ್ಯಸ್ಥರು, ತೋಟಗಾರಿಕೆ ವಿಭಾಗ, ಡಾ.ಆರ್.ವಸಂತಕುಮಾರಿ, ಪ್ರಾಧ್ಯಾಪಕರು, ಶ್ರೀಮತಿ ಸೌಜನ್ಯ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್, ಬೆಂಗಳೂರು, ರವರು ಉಪಸ್ಥಿತರಿದ್ದರು.

## ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು:** 2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಕೆ.ಆರ್ ವೃತ್ತ, ಬೆಂಗಳೂರು ಇಲ್ಲಿ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ತಮ್ಮ ಅರ್ಜಿಗಳನ್ನು ನಿಗಧಿತ ನಮೂನೆಯಲ್ಲಿ ವಿಶ್ವವಿದ್ಯಾಲಯದ ವೆಬ್ ಸೈಟ್ www.uvce.karnataka.gov.in ನಿಂದ ಡೌನ್ಲೋಡ್ ಮಾಡಿಕೊಂಡು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಿಗೆ ಡಿಸೆಂಬರ್ 24 ರಂದು ಅಥವಾ ಅದಕ್ಕೂ ಮುಂಚಿತವಾಗಿ ಸಲ್ಲಿಸುವುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಆ ವಿಭಾಗದ ಮುಖ್ಯಸ್ಥರನ್ನು ಸಂಪರ್ಕಿಸಬಹುದು ಎಂದು ವಿಶ್ವವಿದ್ಯಾನಿಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿರಿಯ ನಾಗರಿಕರಿಗೆ ಗುರುತಿನ ಚೀಟಿ ವಿತರಿಸಿದ ಜಿಲ್ಲಾಧಿಕಾರಿ ಡಾ. ಎನ್ ಶಿವಶಂಕರ

**ಬೆಂಗಳೂರು ಗ್ರಾಮಾಂತರ:** ಉತ್ತಮ ಆಡಳಿತ ಸಪ್ತಾಹ-2024 ರ ಅಂಗವಾಗಿ ಇಂದೇ ಸಕಾಲದಲ್ಲಿ ಹಿರಿಯ ನಾಗರಿಕರ ಗುರುತಿನ ಚೀಟಿಗಾಗಿ ಅರ್ಜಿ ಸಲ್ಲಿಸಿದ ಕೆಲವೇ ನಿಮಿಷಗಳಲ್ಲಿ ಅನುಮೋದಿಸಿ ಜಿಲ್ಲಾಧಿಕಾರಿಗಳಿಂದ ಹಿರಿಯ ನಾಗರಿಕರಿಗೆ ಗುರುತಿನ ಚೀಟಿ ವಿತರಿಸಲಾಯಿತು. ಉತ್ತಮ ಆಡಳಿತ ಸಪ್ತಾಹ-2024 ವು 19.12.2024 ರಿಂದ 24.12.2024 ರವರೆಗೆ ನಡೆಯಲಿದೆ. ''ಪ್ರಶಾಸನ್ ಗಾಂವ್ ಕಿ ಓರೆ(ಗ್ರಾಮದ ಕಡೆಗೆ ಆಡಳಿತ)'' ಎಂಬ ಅಭಿಯಾನದ ಮೂಲಕ ಜಿಲ್ಲೆಯಾದ್ಯಂತ ಸಾರ್ವಜನಿಕ ಕುಂದುಕೊರತೆಗಳಿಗೆ ತ್ವರಿತ ಪರಿಹಾರ ಮತ್ತು ಸೇವಾ ವಿತರಣೆಯನ್ನು ಸುಧಾರಿಸುವುದು ಸಪ್ತಾಹದ ಮುಖ್ಯ ಉದ್ದೇಶವಾಗಿದೆ. ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೇವನಹಳ್ಳಿ ತಾಲ್ಲೂಕಿನ ಕೊಯಿರಾ ಗ್ರಾಮದ ಗಾಂಧಿವಾದಿ ಹಾಗೂ ಪರಿಸರ ಸಂರಕ್ಷಕರಾದ ಕೆ.ಎಸ್ ಕೃಷ್ಣಪ್ಪ ಹಾಗೂ ದೊಡ್ಡಬಳ್ಳಾಪುರ ನಗರದ ನಿವೃತ್ತ ಶಿಕ್ಷರಾದ ಎಸ್.ಎಸ್ ರಾಜೇಂದ್ರ ಅವರಿಗೆ ಹಿರಿಯ ನಾಗರಿಕರ ಗುರುತಿನ ಚೀಟಿ ವಿತರಿಸಲಾಯಿತು.



ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಅಮರೇಶ್ ಅವರು ಮಾತನಾಡಿ ಜಿಲ್ಲೆಯ ಎಲ್ಲಾ ಹಿರಿಯ ನಾಗರಿಕರು ಇಂದೇ ಸಕಾಲ ವಿಶೇಷ ಯೋಜನೆಯಲ್ಲಿ ಹಿರಿಯ ನಾಗರಿಕರ ಗುರುತಿನ ಚೀಟಿಗಳನ್ನು ಪಡೆದು ವಿನೂತನ ಕಾರ್ಯಕ್ರಮದ ಸೌಲಭ್ಯಗಳನ್ನು ಪಡೆಯಲು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಜಗದೀಶ ಎನ್. ಎಂ, ಇಲಾಖೆಯ ಸಿಬ್ಬಂದಿ ರವಿಕುಮಾರ್, ಪ್ರಸನ್ನ ಮತ್ತು ಸಮಾಜಕಾರ್ಯ ಪ್ರಶಿಕ್ಷಣಾರ್ಥಿ ಮನೋಜ್ ಬಿ.ಹೆಚ್ ಉಪಸ್ಥಿತರಿದ್ದರು.

## ನೇಕಾರರ ಮಕ್ಕಳಿಂದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿಗೆ ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ನೇಕಾರರ ಮಕ್ಕಳಿಗೆ ಹೆಚ್ಚಿನ ಹಾಗೂ ಉನ್ನತ ಶಿಕ್ಷಣ ಪ್ರೋತ್ಸಾಹಿಸಲು''ವಿದ್ಯಾರ್ಥಿವೇತನ''ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೊಂದಣಿಯಾಗಿರುವ ಶಿಕ್ಷಣ ಸಂಸ್ಥೆಗಳು/ ವಿಶ್ವ ವಿದ್ಯಾಲಯಗಳಲ್ಲಿ ಪದವಿಯ ಇತ್ಯಾದಿ, ಎಲ್.ಎಲ್.ಬಿ/ ಪ್ಯಾರಾ ಮೆಡಿಕಲ್/ ಬಿ.ಫಾರ್ಮ್/ ನರ್ಸಿಂಗ್ ಇತ್ಯಾದಿ ವೃತ್ತಿಪರ ಕೋರ್ಸ್ಗಳು, ಎಂಬಿಬಿಎಸ್/ ಬಿ.ಇ/ ಬಿ.ಟೆಕ್ ಮತ್ತುಎಲ್ಲಾ ಸ್ನಾತಕೋತ್ತರ ಕೋರ್ಸ್ಗಳಲ್ಲಿ ವ್ಯಾ ಸಂಗ ಮಾಡುತ್ತಿರುವ ನೇಕಾರರ ಮಕ್ಕಳು ಡಿ. 31 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಪದವಿಯ ಮುಂಚೆ ಪಿಯುಸಿ/ಐಟಿಐ/ಡಿಪ್ಲೊಮೋ ರೂ.2,500/- ರಿಂದ ರೂ. 3,000/-, ಎಲ್ಲಾ ಬಿ.ಎ/ಬಿ.ಎಸ್.ಸಿ/ಬಿ.ಕಾಂ ಇತ್ಯಾದಿ ರೂ. 5,000/- ರಿಂದ ರೂ. 5,500/-, ಎಲ್.ಎಲ್.ಬಿ/ ಪ್ಯಾರ ಮೆಡಿಕಲ್/ ಬಿ ಫಾರ್ಮ್/ನರ್ಸಿಂಗ್ ಇತ್ಯಾದಿ ವೃತ್ತಿಪರ ಕೋರ್ಸ್ಗಳು ರೂ. 7,500/- ರಿಂದ ರೂ. 8000/-, ಎಂಬಿಬಿಎಸ್/ ಬಿ.ಇ/ ಬಿ.ಟೆಕ್ ಮತ್ತುಎಲ್ಲಾ ಸ್ನಾತಕೋತ್ತರ ಕೋರ್ಸ್ಗಳು ರೂ. 10,000/- ರಿಂದ ರೂ. 11,000/- ಈ ರೀತಿ ವಿದ್ಯಾರ್ಥಿ ವೇತನದ ಸದುಪಯೋಗ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಛೇರಿ, ಗಾರ್ಮೆಂಟ್ಸ್ ತರಬೇತಿ ಕೇಂದ್ರದ ಕಟ್ಟಡ, ಕೆಐಎಡಿಬಿ ಅಪೇರಲ್ ಪಾರ್ಕ್, ದೊಡ್ಡಬಳ್ಳಾಪುರ ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ

**ಚಾಮರಾಜನಗರ:** ರಾಜ್ಯಸಭೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಅವಮಾನಿಸುವಂತಹ ಹೇಳಿಕೆ ನೀಡಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಚಾಮರಾಜನಗರದಲ್ಲಿ ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಪ್ರತಿಭಟನೆ ನಡೆಯಿತು.



ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾ ರರು ಬಿಜೆಪಿ ಸರ್ಕಾರ ಹಾಗೂ ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರಾಜ್ಯಸಭೆಯಲ್ಲಿ ಅಮಿತ್ ಶಾ ಅವರು ಅಂಬೇಡ್ಕರ್ ಅವರ ಹೆಸರು ಹೇಳುವುದು ಒಂದು ಫ್ಯಾಶನ್ ಆಗಿದೆ ಎಂದು ಟೀಕಿಸಿದ್ದಾರೆ. ಇದು ದೇಶದ ದಲಿತರು ಮತ್ತು

ಬಾಬಾಸಾಹೇಬರಿಗೆ ಮಾಡಿದ ಅವಮಾನವಾಗಿದೆ. ಬಿಜೆಪಿ ನಾಯಕರಿಗೆ ಯಾವ ರೀತಿಯ ಚಿಂತನೆ ಇದೆ ಎಂದು ಅಮಿತ್ ಶಾ ಇಡೀ ದೇಶಕ್ಕೆ ತೋರಿಸಿದ್ದಾರೆ. ಕೂಡಲೇ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು. ಅಂಬೇಡ್ಕರ್ ಅವರನ್ನು ಅವಮಾನಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಜೊತೆಗೆ ರಾಷ್ಟ್ರದ ಜನತೆಯಲ್ಲಿ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ರಾಜ್ಯ ಬಂದ್ ಕರೆ ನೀಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಯರಿಯೂರು ರಾಜಣ್ಣ, ದಲಿತ ಸಂಘರ್ಷ ಸಮಿತಿ ಡಿ.ಜಿ.ಸಾಗರ್ ಬಣದ ಜಿಲ್ಲಾ ಸಂಯೋಜಕ ಸಿ.ಎಂ.ಶಿವಣ್ಣ, ಸಾಹಿತಿ ಸೋಮಶೇಖರ್ ಬಿಸಲ್ವಾಡಿ, ರಾಮಸಮುದ್ರ ಸುರೇಶ್, ಗೂಳೀಪುರ ಅನಿಲ್, ಹೊನ್ನೂರು ಕೃಷ್ಣಮೂರ್ತಿ, ಮಂಜೇಶ್ ಗೀಜರ್, ಆಟೋ ಉಮೇಶ್, ಕಂದಹಳ್ಳಿ ನಾರಾಯಣ, ಆಲೂರು ನಾಗೇಂದ್ರ, ನಂಜುಂಡಸ್ವಾಮಿ, ರಂಗಸ್ವಾಮಿ ಮಾಡ್ರಹಳ್ಳಿ, ರವಿಕುಮಾರ್, ಆಟೋ ಕೆಂಪರಾಜು, ರಂಗಸ್ವಾಮಿ ಸೇರಿದಂತೆ ಇತರರು ಭಾಗವಹಿಸಿದ್ದರು.

# ಕಾಫಿ ಎಸ್ಟೇಟ್ ಸೂಪರ್ವೈಸರ್ ಸರ್ಟಿಫಿಕೇಟ್ ಕೋರ್ಸ್‌ಗೆ ಅರ್ಜಿ

**ಬೆಂಗಳೂರು:** ಚಿಕ್ಕಮಗಳೂರಿನ ಕೇಂದ್ರ ಕಾಫಿ ಸಂಶೋಧನಾ ಸಂಸ್ಥೆಯಿಂದ ಕಾಫಿ ಎಸ್ಟೇಟ್ ಸೂಪರ್ವೈಸರ್ ಸರ್ಟಿಫಿಕೇಟ್ ಕೋರ್ಸ್ ಮತ್ತು ಡಿಪ್ಲೋಮಾ ಕೋರ್ಸ್‌ಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕಾಫಿ ಎಸ್ಟೇಟ್ ಸೂಪರ್ವೈಸರ್ ಸರ್ಟಿಫಿಕೇಟ್ ಕೋರ್ಸ್ ಒಂದು ವರ್ಷದ ಸಮಗ್ರ, ತರಬೇತಿ ಯೋಜನೆಯಾಗಿದ್ದು, ಇದು ಕಾಫಿ ತೋಟಗಳಿಗೆ ಪರಿಣತಿ ಹೊಂದಿದ ಸೂಪರ್ವೈಸರ್‌ಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಕೋಸ್‌ರ್ನಿಂದ ಕ್ಷೇತ್ರ, ಕಾರ್ಯ ಮತ್ತು ಪ್ರಾಯೋಗಿಕ ಅನುಭವಕ್ಕಾಗಿ ಕ್ಷೇತ್ರ ಮಟ್ಟದಲ್ಲಿ ಇನ್ನೂ ಒಂದು ವರ್ಷದ ಇಂಟರ್ನ್‌ಶಿಪ್‌ನ್ನು ಒಳಗೊಂಡಿದೆ. ಅದೇ ರೀತಿ ಕಾಫಿ ಎಸ್ಟೇಟ್ ನಿರ್ವಹಣೆಯ ಡಿಪ್ಲೋಮಾ ಕೋರ್ಸ್ 2 ವರ್ಷದ ಅವಧಿಯದ್ದಾಗಿದ್ದು, ಕಾಫಿ ಎಸ್ಟೇಟ್ ನಿರ್ವಹಣೆಯಲ್ಲಿ ಪರಿಣತಿ ಹೊಂದಿದ ತಜ್ಞರನ್ನು ತರಬೇತಿಗೊಳಿಸಲು ಉದ್ದೇಶಿಸಲಾಗಿದೆ. ಕಾಫಿ ಎಸ್ಟೇಟ್ ಸೂಪರ್ವೈಸರ್ ಸರ್ಟಿಫಿಕೇಟ್ ಕೋರ್ಸ್‌ಗೆ ಸೇರಬಯಸುವವರು ಕನಿಷ್ಠ 8ನೇ ತರಗತಿ ಉತ್ತೀರ್ಣ ಅಥವಾ 10 ನೇ ತರಗತಿ ಅನುತ್ತೀರ್ಣರಾಗಿರಬಹುದು. ವಯೋಮಿತಿಯು 18 ರಿಂದ 35 ವರ್ಷದೊಳಗಿರಬೇಕು, ಹಾಗೂ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ 5 ವರ್ಷಗಳ ಸಡಿಲಿಕೆ ಇರುತ್ತದೆ. ಕೋರ್ಸ್‌ನ ಅವಧಿಯು ಒಂದು ವರ್ಷಗಳಾಗಿರುತ್ತದೆ. ಪ್ರಾದೇಶಿಕ ಭಾಷೆಗಳಾದ ಕನ್ನಡ, ತಮಿಳ್, ತೆಲುಗು, ಮಲಯಾಳಂ ಮಾಧ್ಯಮದಲ್ಲಿ ಬೋಧನೆ ಮಾಡಲಾಗುವುದು.

ಕೋರ್ಸ್‌ನ ಶುಲ್ಕವು ಪ್ರತಿ ಅಭ್ಯರ್ಥಿಗಳಿಗೆ ರೂ.6,000/- ಹಾಗೂ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ರೂ.3,000/- ನಿಗಧಿಪಡಿಸಲಾಗಿದೆ. ಮೊದಲ ವರ್ಷದ ತರಬೇತಿಯಲ್ಲಿ ರೂ.5,000/- ತಿಂಗಳ ಭತ್ಯೆ ಹಾಗೂ ಇಂಟರ್ನ್‌ಶಿಪ್ ಅವಧಿಯಲ್ಲಿ ರೂ.6,000/- ತಿಂಗಳ ಭತ್ಯೆ ನೀಡಲಾಗುತ್ತದೆ.

ಕಾಫಿ ಎಸ್ಟೇಟ್ ನಿರ್ವಹಣೆಯ ಡಿಪ್ಲೋಮಾ ಕೋರ್ಸ್‌ಗೆ ಸೇರಬಯಸುವವರು ಕನಿಷ್ಠ 12ನೇ ತರಗತಿ ಉತ್ತೀರ್ಣರಾಗಿರಬೇಕು, ವಯೋಮಿತಿಯು 18 ರಿಂದ 35 ವರ್ಷದೊಳಗಿರಬೇಕು, ಹಾಗೂ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ 5 ವರ್ಷಗಳ ಸಡಿಲಿಕೆ ಇರುತ್ತದೆ. ಕೋರ್ಸ್‌ನ ಅವಧಿಯು ಎರಡು ವರ್ಷಗಳಾಗಿರುತ್ತದೆ. ಇಂಗ್ಲೀಷ್ ಮಾಧ್ಯಮದಲ್ಲಿ ಬೋಧನೆ ಮಾಡಲಾಗುವುದು.

ಕೋರ್ಸ್‌ನ ಶುಲ್ಕವು ಪ್ರತಿ ಸಾಮಾನ್ಯ ಅಭ್ಯರ್ಥಿಗಳಿಗೆ ರೂ.10,000/- ಹಾಗೂ ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ರೂ.5,000/- ನಿಗಧಿಪಡಿಸಲಾಗಿದೆ. ಈ ಶುಲ್ಕವನ್ನು ಎರಡು ಕಂತುಗಳಲ್ಲಿ ಪಾವತಿಸಬಹುದು. ಆರ್ಥಿಕವಾಗಿ ಹಿಂದುಳಿದ ವರ್ಗದ ಅಭ್ಯರ್ಥಿಗಳು (ಭಾರತ ಸರ್ಕಾರದ ಮಾರ್ಗಸೂಚಿಗಳ ಪ್ರಕಾರ) ಮತ್ತು ಎಸ್.ಸಿ/ಎಸ್.ಟಿ ಅಭ್ಯರ್ಥಿಗಳಿಗೆ ಮೊದಲ ವರ್ಷದಲ್ಲಿ ರೂ.6,000/- ತಿಂಗಳ ಭತ್ಯೆ ನೀಡಲಾಗುತ್ತದೆ. ಹಾಗೂ ಎರಡನೇ ವರ್ಷದಲ್ಲಿ ಎಲ್ಲಾ ಅಭ್ಯರ್ಥಿಗಳಿಗೆ ರೂ.10,000/- ತಿಂಗಳ ಭತ್ಯೆ ನೀಡಲಾಗುತ್ತದೆ. ಕಾಫಿ ಎಸ್ಟೇಟ್ ನಿರ್ವಹಣೆಯ ಡಿಪ್ಲೋಮಾ ಕೋಸ್‌ರ್ಗೆ ಕೇವಲ 10 ಅಭ್ಯರ್ಥಿಗಳಿಗೆ ಪ್ರವೇಶವಿರುತ್ತದೆ ಹಾಗೂ ಕಾಫಿ ಬೆಳೆಯುವ ಪ್ರದೇಶಗಳಿಂದ ಬಂದ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುತ್ತದೆ. ಕಾಫಿ ಎಸ್ಟೇಟ್ ಸೂಪರ್ವೈಸರ್ ಸರ್ಟಿಫಿಕೇಟ್ ಕೋರ್ಸ್‌ಗೆ ಸೇರಬಯಸುವವರಿಗೆ ಉಚಿತ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು ಅದೇ ರೀತಿ ಕಾಫಿ ಎಸ್ಟೇಟ್ ನಿರ್ವಹಣೆಯ ಡಿಪ್ಲೋಮಾ ಕೋಸ್‌ರ್ಗೆ ಸೇರಬಯಸುವವರಿಗೆ ಬೆಂಗಳೂರನ್ನು ಹೊರತುಪಡಿಸಿ ಉಚಿತ ವಸತಿ ವ್ಯವಸ್ಥೆ ಕಲ್ಪಿಸಲಾಗುವುದು.

ಎರಡೂ ಕೋರ್ಸ್‌ಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಕಾಫಿ ಮಂಡಳಿ ವತಿಯಿಂದ ಪ್ರಮಾಣಪತ್ರವನ್ನು ನೀಡಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಜಾಲತಾಣ https://coffeeboard.gov.in ನಿಂದ ಡೌನ್‌ಲೋಡ್ ಮಾಡಿಕೊಂಡು ಸಮರ್ಪಕ ದಾಖಲೆಗಳೊಂದಿಗೆ ಭರ್ತಿಯಾದ ಅರ್ಜಿಯನ್ನು nodalofficertrainingccri@gmail.com ಗೆ ಇ-ಮೇಲ್ ಮೂಲಕ ಸ್ಕ್ಯಾನ್ ಮಾಡಿ, 2024ನೇ ಡಿಸೆಂಬರ್ 31 ರ ಒಳಗಾಗಿ ಮೂಲ ಅರ್ಜಿ ಪ್ರತಿ ಹಾಗೂ ಸಂಬಂಧಿತ ದಾಖಲೆಗಳನ್ನು ಕೇಂದ್ರ, ಕಾಫಿ ಸಂಶೋಧನಾ ಸಂಸ್ಥೆ, ಕಾಫಿ ರಿಸರ್ಚ್ ಸ್ಟೇಷನ್, ಚಿಕ್ಕಮಗಳೂರು ಜಿಲ್ಲೆ-577117 ಈ ವಿಳಾಸಕ್ಕೆ ಸಲ್ಲಿಸಬೇಕು. ಅರ್ಹತಾ ಪಟ್ಟಿ ಹೊಂದಿದ ಅಭ್ಯರ್ಥಿಗಳನ್ನು ಪ್ರಾಯೋಗಿಕ ಪರೀಕ್ಷೆಗೆ ಒಳಪಡಿಸಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಹಿತಿ ನೀಡಿ, ಮುಂದಿನ ಸೂಚನೆಗಾಗಿ ಸಂಶೋಧನಾ ನಿರ್ದೇಶಕರು, ಕೇಂದ್ರ ಕಾಫಿ ಸಂಶೋಧನಾ ಸಂಸ್ಥೆ ಚಿಕ್ಕಮಂಗಳೂರಿಗೆ ವರದಿ ಮಾಡಲು ಸೂಚಿಸಲಾಗುತ್ತದೆ.

ಕಾಫಿ ಮಂಡಳಿಯು ಯಾವುದೇ ಹಂತದಲ್ಲಾದರೂ ಈ ಅಧಿಸೂಚನೆಯನ್ನು ಹಿಂಪಡೆಯಲು/ರದ್ದುಗೊಳಿಸಲು ಹಕ್ಕು ಹೊದಿಸುತ್ತದೆ ಎಂದು ಕೇಂದ್ರ, ಕಾಫಿ ಸಂಶೋಧನಾ ಸಂಸ್ಥೆ, ಚಿಕ್ಕಮಂಗಳೂರಿನ ಸಂಶೋಧನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲಕಾರ್ಮಿಕ ಪದ್ಧತಿಯಿಂದ ಮುಕ್ತಗೊಂಡ ಮಕ್ಕಳಿಗೆ ನ್ಯಾಯಾಧೀಶರಿಂದ ಆಹಾರದ ಕಿಟ್ ವಿತರಣೆ

**ಚಾಮರಾಜನಗರ:** ಬಾಲಕಾರ್ಮಿಕ ಪದ್ಧತಿಯಿಂದ ಮುಕ್ತಗೊಂಡ ಸಂತ್ರಸ್ತ ಮಕ್ಕಳಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ್ ಅವರು ಆಹಾರ ಕಿಟ್‌ಗಳನ್ನು ವಿತರಣೆ ಮಾಡಿದರು.




ನಗರದ ಜಿಲ್ಲಾ ನ್ಯಾಯಾಲಯದ ವ್ಯಾಜ್ಯ ಪೂರ್ವ ಸಭಾಂಗಣದಲ್ಲಿಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಬಾಲ ಯೋಜನಾ ಸೊಸೈಟಿ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಾಲಕಾರ್ಮಿಕತೆಯಿಂದ ಮುಕ್ತಗೊಂಡ ಸಂತ್ರಸ್ತ ಬಾಲಕರಿಗೆ ಹಿರಿಯ ಸಿವಿಲ್ ನ್ಯಾಯಾಧೀಶರು ತಾತ್ಕಾಲಿಕವಾಗಿ ಆಹಾರ ಕಿಟ್‌ಗಳನ್ನು ವಿತರಿಸಿದರು.

ಇದೇ ವೇಳೆ ಮಾತನಾಡಿದ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ್ ಅವರು ಕಾರ್ಮಿಕ ಇಲಾಖಾ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯು ಜಿಲ್ಲೆಯಲ್ಲಿ ಬಾಲಕಾರ್ಮಿಕರನ್ನು ಗುರುತಿಸಿ, ರಕ್ಷಿಸಿ ಅವರಿಗೆ ಪುನರ್ವಸತಿ ಕಲ್ಪಿಸಲು ಮುಂದಾಗಿದೆ. ಇದು ಉತ್ತಮ ಬೆಳವಣಿಗೆಯಾಗಿದೆ. ಸರ್ಕಾರದ ಈ ಯೋಜನೆ ಸದ್ಬಳಕೆಯಾಗಬೇಕು ಎಂದರು.

ಬಾಲಕಾರ್ಮಿಕ ಪದ್ಧತಿ ಸಾಮಾಜಿಕ ಪಿಡುಗಾಗಿ ಪರಿಣಮಿಸಿದೆ. ಬಡತನದ ಬಾಧೆ ತಾಳಲಾರದೇ ಬಾಲಕಾರ್ಮಿಕರಾಗುವ ಮಕ್ಕಳು ತಮ್ಮ ಭವಿಷ್ಯವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಅಂತಹ ಬಾಲಕಾರ್ಮಿಕರನ್ನು ಗುರುತಿಸಿ, ಮುಕ್ತಿಗೊಳಿಸಿ ತಾತ್ಕಾಲಿಕವಾಗಿ ಅವರ ಜೀವನ ನಿರ್ವಹಣೆಗಾಗಿ ಆಹಾರದ ಕಿಟ್‌ಗಳನ್ನು ನೀಡಲಾಗುತ್ತಿದೆ. ಬಾಲಕಾರ್ಮಿಕತೆಯಿಂದ ಮುಕ್ತಗೊಂಡ ಮಕ್ಕಳ ಶಿಕ್ಷಣ ಮುಂದುವರಿಕೆಗೂ ಸಹ ಇಲಾಖೆ ಅವಕಾಶ ಕಲ್ಪಿಸಿದೆ ಎಂದು ನ್ಯಾಯಾಧೀಶರಾದ ಈಶ್ವರ್ ಅವರು ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಡಾ. ಎಂ. ಸವಿತ ಅವರು ಮಾತನಾಡಿ ಬಾಲಕಾರ್ಮಿಕರನ್ನು ಗುರುತಿಸಿ ರಕ್ಷಿಸುವುದು ಇಲಾಖೆಯ ಪ್ರಮುಖ ಜವಾಬ್ದಾರಿಯಾಗಿದೆ. ಪ್ರಸ್ತುತ ಗುರುತಿಸಲಾಗಿರುವ ಬಾಲಕಾರ್ಮಿಕರಿಗೆ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ (ಎಸ್.ಸಿ.ಪಿ, ಟಿಎಸ್.ಪಿ) ಉಪಯೋಜನೆಗಳಡಿ ಪುನರ್ವಸತಿ ಕಲ್ಪಿಸಲಾಗುತ್ತಿದೆ. ಬಾಲಕಾರ್ಮಿಕ ಪದ್ಧತಿಯಿಂದ ಮುಕ್ತಗೊಳಿಸಿದ ಬಳಿಕ ಮಕ್ಕಳಿಗೆ ತೊಂದರೆಯಾಗದಂತೆ ತಕ್ಷಣವೇ ಅಗತ್ಯ ಆಹಾರದ ಪರಿಕರಗಳನ್ನು ಒದಗಿಸಲಾಗುತ್ತದೆ ಎಂದರು.

ಬಾಲಕಾರ್ಮಿಕ ಮಕ್ಕಳಲ್ಲಿ ಕೀಳಿರಿಮೆ ಹೋಗಲಾಡಿಸಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರಲು ಇಲಾಖೆ ಸತತ ಪ್ರಯತ್ನ ಮಾಡುತ್ತಿದೆ. ಅಂತಹ ಮಕ್ಕಳ ಮುಂದಿನ ಭವಿಷ್ಯವನ್ನು ಉತ್ತಮವಾಗಿ ರೂಪಿಸಲು ಶೈಕ್ಷಣಿಕ ವ್ಯವಸ್ಥೆಯಡಿ ಸರ್ಕಾರಿ ಶಾಲೆ ಹಾಗೂ ಅಗತ್ಯವಿದ್ದರೆ ವಿದ್ಯಾರ್ಥಿನಿಲಯಗಳಲ್ಲಿಯೂ ಅವಕಾಶ ಮಾಡಿಕೊಡಲಾಗುತ್ತದೆ. ಮಕ್ಕಳು ಸಮಾಜದಲ್ಲಿ ಉತ್ತಮ ಪ್ರಜೆಯಾಗಿ ರೂಪುಗೊಳ್ಳಲು ಉನ್ನತ ಶಿಕ್ಷಣಕ್ಕೂ ಅವಕಾಶ ಕಲ್ಪಿಸಲಾಗುತ್ತದೆ ಎಂದು ಡಾ. ಸವಿತಾ ಅವರು ತಿಳಿಸಿದರು.

ಜಿಲ್ಲಾ ಬಾಲ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕರಾದ ಮಹೇಶ್ ಅವರು ಇದೇ ಸಂದರ್ಭದಲ್ಲಿ ಹಾಜರಿದ್ದರು.

# ಸಂಜೆ ಟಿಪ್ಸ್

## 4ಜಿ ಅನುಭವದಲ್ಲಿ ಕರ್ನಾಟಕದಲ್ಲಿ ಮೊದಲ ಸ್ಥಾನ ಪಡೆದ ವಿ (Vi)

ಓಪನ್ಸಿಗ್ನಲ್ ನ '4ಜಿ ಸಂಪರ್ಕಜಾಲ ಅನುಭವದ ವರದಿ ನವೆಂಬರ್ 2024' ರಲ್ಲಿ ಕರ್ನಾಟಕದಲ್ಲಿನ ತನ್ನ ಅಸಾಧಾರಣ 4ಜಿ ನೆಟ್ವರ್ಕ್ ಅನುಭವವನ್ನು ಶ್ಲಾಘಿಸಲಾಗಿದೆ ಎಂದು ದೇಶದ ಪ್ರಮುಖ ದೂರಸಂಪರ್ಕ ಸೇವಾಸಂಸ್ಥೆಯಾಗಿರುವ ವಿ (Vi) ಇಂದು ಇಲ್ಲಿ ಮಾಹಿತಿ ಹಂಚಿಕೊಂಡಿದೆ. ಸ್ಮಾರ್ಟ್ಫೋನ್ 4ಜಿ ಬಳಕೆದಾರರ 4ಜಿ ಅನುಭವವನ್ನು ಪರಿಶೀಲಿಸಿ, ಓಪನ್ಸಿಗ್ನಲ್ ಈ ವರದಿ ಸಿದ್ಧಪಡಿಸಿದೆ.ರಾಜ್ಯದ ದೂರಸಂಪರ್ಕ ಕ್ಷೇತ್ರದಲ್ಲಿ ಗ್ರಾಹಕರು ಪಡೆಯುವ 4ಜಿ ಅನುಭವಕ್ಕೆ ಸಂಬಂಧಿಸಿದಂತೆ ವಿ (Vi) – ನಾಯಕನಾಗಿ ಹೊರಹೊಮ್ಮಿದ್ದು, ರಾಷ್ಟ್ರೀಯ ಮಟ್ಟದಲ್ಲಿ ಎಲ್ಲಾ ಆರು ವಿಭಾಗಗಳಾದ 4ಜಿ ಡೌನ್ಲೋಡ್ ವೇಗ, 4ಜಿ ಅಪ್ಲೋಡ್ ವೇಗ, 4ಜಿ ವಿಡಿಯೋ ಅನುಭವ, 4ಜಿ ಲೈವ್ ವಿಡಿಯೋ ಅನುಭವ, 4ಜಿ ಗೇಮ್ ಅನುಭವ ಮತ್ತು 4ಜಿ ಧ್ವನಿ ಅಪ್ಲಿಕೇಷನ್ ಅನುಭವದ ಕ್ಷೇತ್ರಗಳಲ್ಲಿ ಸಂಪೂರ್ಣ ವಿಜೇತರಾಗಿದ್ದಾರೆ. ಭಾರತದಲ್ಲಿ ವಿ(Vi)ಯ 4ಜಿ ಬಳಕೆದಾರರು, ಕೇವಲ 4ಜಿ ವೇಗವನ್ನಷ್ಟೇ ಆನಂದಿಸುವುದಲ್ಲದೆ, ಲೈವ್ ಮತ್ತು ಆನ್ ಡಿಮ್ಯಾಂಡ್ ವಿಡಿಯೋಗಳನ್ನು ಸ್ಟ್ರೀಮಿಂಗ್ ಮಾಡುವಾಗ, ಒಬ್ಬರಿಗಿಂತ ಹೆಚ್ಚಿನ ಜನರು ಮೊಬೈಲ್ ಆಟಗಳನ್ನು ಆಡುವಾಗ ಮತ್ತು ಮೊಬೈಲ್ ಧ್ವನಿ ಅಪ್ಲಿಕೇಷನ್ಗಳಲ್ಲಿ ಓವರ್-ದಿ-ಟಾಪ್ (ಒಟಿಟಿ) ಧ್ವನಿ ಸೇವೆಗಳನ್ನು ಬಳಸುವಾಗ ಉತ್ತಮ ಗುಣಮಟ್ಟದ ಅನುಭವ ಪಡೆಯುತ್ತಾರೆ ಎಂಬುದನ್ನು ಇದು ಸೂಚಿಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ವಿ(ಗಿ)ಯ ಕರ್ನಾಟಕ,ಆಂಧ್ರಪ್ರದೇಶ ಮತ್ತು ತೆಲಂಗಾಣದ ಕ್ಲಸ್ಟರ್ ಹೆಡ್, ಆನಂದ್ ದಾನಿ ಅವರು, ''ಕರ್ನಾಟಕದಲ್ಲಿ ನಮ್ಮ ಅತ್ಯುತ್ತಮ 4ಜಿ ಸಂಪರ್ಕ ಜಾಲದ ಕಾರ್ಯಕ್ಷಮತೆಗಾಗಿ ಗುರುತಿಸಿಕೊಂಡಿರುವುದಕ್ಕೆ ನಾವು ಹೆಚ್ಚು ಹೆಮ್ಮೆಪಡುತ್ತೇವೆ. ಈ ಸಾಧನೆಯು ನಮ್ಮ ನೆಟ್ವರ್ಕ್ ಅನ್ನು ಬಲಪಡಿಸುವಲ್ಲಿ ಮತ್ತು ನಮ್ಮ ಗ್ರಾಹಕರಿಗೆ ಅಡೆತಡೆರಹಿತ ಸಂಪರ್ಕವನ್ನು ಖಾತ್ರಿಪಡಿಸುವಲ್ಲಿ ನಮ್ಮ ನಿರಂತರ ಹೂಡಿಕೆಗಳಿಗೆ ದೊರೆತ ಗೆಲುವು ಆಗಿದೆ. ಸಂಪರ್ಕ ಕ್ಷೇತ್ರದಲ್ಲಿ ಉತ್ಕೃಷ್ಟತೆ ಒದಗಿಸಲು ನಾವು ಬದ್ಧರಾಗಿದ್ದೇವೆ ಎಂದು ಹೇಳಿದ್ದಾರೆ. ಈ ಮನ್ನಣೆಯು ಅತ್ಯುತ್ತಮ ದರ್ಜೆಯ ಡಿಜಿಟಲ್ ಅನುಭವಗಳನ್ನು ನೀಡುವುದರ ವಿ ಯ ಬದ್ಧತೆಯನ್ನು ಮತ್ತು ಕರ್ನಾಟಕ ಸೇರಿದಂತೆ ದೇಶದಾದ್ಯಂತ ನೆಟ್ವರ್ಕ್ ಕಾರ್ಯಕ್ಷಮತೆ ಹೆಚ್ಚಿಸುವಲ್ಲಿ ವಿ ನೀಡುತ್ತಿರುವ ನಿರಂತರ ಗಮನವನ್ನು ಎತ್ತಿ ತೋರಿಸುತ್ತದೆ. ಈ ಪ್ರಯತ್ನಗಳ ಭಾಗವಾಗಿ, ನೆಟ್ವರ್ಕ್ ಸಾಮರ್ಥ್ಯ ಹೆಚ್ಚಿಸಲು 2100 ಒಳೂದ ಮತ್ತು 1800 ಒಳೂದ ಬ್ಯಾಂಡ್ನಲ್ಲಿ ಸ್ಪೆಕ್ಟ್ರಮ್ ಅನ್ನು ಅಪ್ಗ್ರೇಡ್ ಮಾಡುವ ಮೂಲಕ ವಿ ತನ್ನ 4ಜಿ ಸಾಮರ್ಥ್ಯವನ್ನು 5300ಕ್ಕೂ ಹೆಚ್ಚು ಸೈಟ್ಗಳಲ್ಲಿ ಹೆಚ್ಚಿಸಿದೆ. ಹೀಗಾಗಿ 30ಕ್ಕೂ ಹೆಚ್ಚು ಜಿಲ್ಲೆಗಳು ಮತ್ತು 600ಕ್ಕೂ ಹೆಚ್ಚು ಪಟ್ಟಣಗಳಲ್ಲಿ ವೇಗವಾದ ಇಂಟರ್ನೆಟ್ ಅನ್ನು ಖಚಿತಪಡಿಸುತ್ತಿದೆ.

## ಕ್ಯಾರೆಟ್ ಹಲ್ವಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಒಂದು ಕೆಜಿ ಕ್ಯಾರೆಟ್, ಒಂದುವರೆ ಲೀಟರ್ ಹಾಲು, ಏಲಕ್ಕಿ 5-7, ತುಪ್ಪ 5-7 ಟೇಬಲ್ ಚಮಚ, ಸಕ್ಕರೆ ರುಚಿಗೆ ತಕ್ಕಷ್ಟು, ಒಣ ದ್ರಾಕ್ಷಿ ಮತ್ತು ಗೋಡಂಬಿ.

### ಮಾಡುವ ವಿಧಾನ

ನೀವು ತೆಗೆದುಕೊಂಡ ಕ್ಯಾರೆಟ್ ಗಳ ಸಿಪ್ಪೆ ಸುಲಿದು ಚೆನ್ನಾಗಿ ತೊಳೆದುಕೊಳ್ಳಿ.

ಈಗ ಹಾಲಿಗೆ ಏಲಕ್ಕಿ ಅಥವಾ ಏಲಕ್ಕಿ ಪುಡಿ ಸೇರಿಸಿ. ನಂತರ ಒಂದು ಪ್ಯಾನ್ ನಲ್ಲಿ ತುಪ್ಪ ಹಾಕಿ ಬಿಸಿ ಮಾಡಿ ಅದಕ್ಕೆ ತುರಿದ ಕ್ಯಾರೆಟ್ ಸೇರಿಸಿ. ಕಡಿಮೆ ಉರಿಯಲ್ಲಿ 10 ರಿಂದ 15 ನಿಮಿಷಗಳು ಇದನ್ನು ಬಾಡಿಸಿ ಸಕ್ಕರೆ ಹಾಕಿದ ನಂತರದಲ್ಲಿ, ಇನ್ನು ಸ್ವಲ್ಪ ಹೊತ್ತು ಕ್ಯಾರೆಟ್ ಬಣ್ಣ ಬದಲಾಗುವವರೆಗೆ ಬಾಡಿಸಿ. ಕೊನೆಯಲ್ಲಿ ಡ್ರೈ ಫ್ರೂಟ್ಸ್ ಸೇರಿಸಿ ತಿನ್ನಲು ಕೊಡಿ.

## ದಾಳಿಂಬೆ ಸಿಪ್ಪೆಯ ಪ್ರಯೋಜನಗಳು



### ಹೆಲ್ತ್ ಟಿಪ್ಸ್

ಹೃದಯವನ್ನು ಆರೋಗ್ಯವಾಗಿಡುತ್ತದೆ. ಆಂಟಿಆಕ್ಸಿಡೆಂಟ್ಗಳಿಂದ ಸಮೃದ್ಧವಾಗಿರುವ ದಾಳಿಂಬೆ ಸಿಪ್ಪೆಯು ಹೃದಯವನ್ನು ಆರೋಗ್ಯಕರವಾಗಿಡಲು ಸಹಾಯ ಮಾಡುತ್ತದೆ. ದಾಳಿಂಬೆ ಸಿಪ್ಪೆಯನ್ನು ಬಳಸುವುದರಿಂದ ಕೊಲೆಸ್ಟ್ರಾಲ್ ಅನ್ನು ಕಡಿಮೆ ಮಾಡಬಹುದು. ಇದರಿಂದಾಗಿ ಹೃದಯಾಘಾತದ ಅಪಾಯ ಕಡಿಮೆಯಾಗುತ್ತದೆ.

ವಿಟಮಿನ್ಗಳು ಮತ್ತು ಇತರ ಅಗತ್ಯ ಪೋಷಕಾಂಶಗಳು ದಾಳಿಂಬೆ ಸಿಪ್ಪೆಯಲ್ಲಿ ಕಂಡುಬರುತ್ತವೆ, ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ಈ ಚಹಾವನ್ನು ಕುಡಿಯುವುದರಿಂದ ನೀವು ಋತುಮಾನದ ಕಾಯಿಲೆಗಳನ್ನು ತಪ್ಪಿಸಬಹುದು. ದಾಳಿಂಬೆಯು ರೋಗನಿರೋಧಕ ಶಕ್ತಿಯನ್ನು ಬಲಪಡಿಸುವ ಪಾಲಿಫಿನಾಲ್ಗಳನ್ನು ಹೊಂದಿರುತ್ತದೆ.

ದಾಳಿಂಬೆ ಸಿಪ್ಪೆಯ ಚಹಾವು ತೂಕ ನಷ್ಟಕ್ಕೆ ಪ್ರಯೋಜನಕಾರಿಯಾಗಿದೆ. ಸ್ಥೂಲಕಾಯದಿಂದ ಬಳಲುತ್ತಿರುವವರು ದಿನಕ್ಕೆ ಒಮ್ಮೆ ದಾಳಿಂಬೆ ಸಿಪ್ಪೆಯ ಟೀ ಕುಡಿಯಬೇಕು. ಈ ಚಹಾವನ್ನು ಕುಡಿಯುವುದರಿಂದ ದೇಹದಲ್ಲಿ ಸಂಗ್ರಹವಾಗಿರುವ ಹೆಚ್ಚುವರಿ ಕೊಬ್ಬನ್ನು ಕಡಿಮೆ ಮಾಡುತ್ತದೆ.

ಆಲ್ಝೈಮರ್ನ ಅಪಾಯವನ್ನು ಕಡಿಮೆ ಮಾಡುತ್ತದೆ. ದಾಳಿಂಬೆ ಸಿಪ್ಪೆಯು ವೃದ್ಧಾಪ್ಯದಲ್ಲಿ ಸಂಭವಿಸುವ ಆಲ್ಝೈಮರ್ನ ಅಪಾಯವನ್ನು ಕಡಿಮೆ ಮಾಡುವ ಅಂಶಗಳನ್ನು ಒಳಗೊಂಡಿದೆ. ದಾಳಿಂಬೆ ಸಿಪ್ಪೆಯಲ್ಲಿ ನ್ಯೂರೋ ಡಿಜೆನೆರೆಟಿವ್ ಅಂಶಗಳಿದ್ದು ಆಲ್ಝೈಮರ್ಸ್ನಂತಹ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ ಎಂದು ಹಲವು ಅಧ್ಯಯನಗಳಲ್ಲಿ ಕಂಡುಬಂದಿದೆ.

## ತೆಂಗಿನೆಣ್ಣೆಗೆ ಈ ಹಣ್ಣಿನ ರಸ ಹಿಂಡಿ ಹಚ್ಚಿ..

### ಬ್ಯೂಟಿ ಟಿಪ್ಸ್



ಬಿಳಿ ಕೂದಲನ್ನು ಮರಳಿ ಕಪ್ಪಾಗಿಸಲು ತೆಂಗಿನೆಣ್ಣೆಗೆ ಈ ಹಣ್ಣಿನ ರಸ ಹಿಂಡಿ ಹಚ್ಚಿ. ಇದು ಅತ್ಯುತ್ತಮ ಮನೆಮದ್ದಾಗಿದೆ. ಕೂದಲಿನ ಆರೋಗ್ಯವನ್ನು ಸುಧಾರಿಸಲು ತೆಂಗಿನೆಣ್ಣೆಯನ್ನು ಯಾವಾಗಲೂ ಬಳಸಲಾಗುತ್ತದೆ. ಇದರಿಂದ ತಲೆಹೊಟ್ಟು ಸುಲಭವಾಗಿ ನಿವಾರಣೆಯಾಗುತ್ತದೆ. ಕೂದಲಿನ ಬೆಳವಣಿಗೆಗೂ ಇದು ತುಂಬಾ ಪ್ರಯೋಜನಕಾರಿ. ಸಮಯಕ್ಕೆ ಮುಂಚಿತವಾಗಿ ನಿಮ್ಮ ಕೂದಲು ಬಿಳಿ ಬಣ್ಣಕ್ಕೆ ತಿರುಗಿದ್ದರೆ ಬಯಸಿದರೆ ಕೂದಲಿಗೆ ತೆಂಗಿನೆಣ್ಣೆ ಜೊತೆ ಕೆಲವು ಪದಾರ್ಥ ಬೆರೆಸಿ ಅನ್ವಯಿಸಬೇಕಾಗುತ್ತದೆ. ಕೆಮಿಕಲ್ಸ್ ಇರುವ ಹೇರ್ ಡೈ ಬದಲು ಆಯುರ್ವೇದದಲ್ಲಿರುವ ಕೆಲವು ಸಲಹೆಗಳನ್ನು ಅನುಸರಿಸಿದರೆ ಉತ್ತಮ ಫಲಿತಾಂಶ ಪಡೆಯಬಹುದು. ಬಿಳಿ ಕೂದಲು ಶಾಶ್ವತವಾಗಿ ಕಪ್ಪು ಬಣ್ಣಕ್ಕೆ ತಿರುಗುತ್ತದೆ. ನಿಂಬೆ ರಸವು ಹಲವಾರು ಔಷಧೀಯ ಗುಣಗಳನ್ನು ಹೊಂದಿದ್ದು ಕೂದಲಿಗೆ ಪ್ರಯೋಜನಕಾರಿಯಾಗಿದೆ. ತಲೆಹೊಟ್ಟು ಸಮಸ್ಯೆಗೂ ಇದು ಪರಿಹಾರ ನೀಡುತ್ತದೆ. ಒಂದು ಬಟ್ಟಲಿನಲ್ಲಿ ತೆಂಗಿನೆಣ್ಣೆ ತೆಗೆದುಕೊಂಡು ಅದಕ್ಕೆ 3 – 4 ಹನಿ ನಿಂಬೆರಸ ಬೆರೆಸಿ ಕೂದಲಿಗೆ ಹಚ್ಚುವುದರಿಂದ ಬಿಳಿ ಕೂದಲಿನ ಸಮಸ್ಯೆ ನಿವಾರಣೆಯಾಗುತ್ತದೆ.

## ಕೀರ್ತಿ ಸುರೇಶ್ ಬೋಲ್ಡ್ ಅವತಾರ ಕಂಡು ದಂಗಾದ ಫ್ಯಾನ್ಸ್



ಮಹಾನಟಿ ಕೀರ್ತಿ ಸುರೇಶ್ ತಮ್ಮ 15 ವರ್ಷಗಳ ಪ್ರೇಮವನ್ನು ಪರಿಚಯಿಸುವ ಮೂಲಕ ಅಚ್ಚರಿ ಮೂಡಿಸಿದ್ದರು.. ಕಾಲೇಜು ದಿನಗಳಿಂದಲೇ ಪ್ರೀತಿ ಮಾಡಿದ ಕೀರ್ತಿ, ಚಿತ್ರರಂಗ ಪ್ರವೇಶಿಸಿ ಸ್ಟಾರ್ ಹೀರೋಯಿನ್ ಆದ ಮೇಲೂ ಆ ಪ್ರೀತಿಯನ್ನು ಮುಂದುವರೆಸಿದ್ದರು. ಕೀರ್ತಿ ಸುರೇಶ್ ತಮ್ಮ ಪ್ರೀತಿಯನ್ನು ಮದುವೆಗೆ ತಿರುಗಿಸಿ.. ಕೆಲ ದಿನಗಳ ಹಿಂದೆ ತನ್ನ ಗೆಳೆಯ ಆಂಟೋನಿ ಜೊತೆ ಏಳು ಹೆಜ್ಜೆ ಹಾಕಿದ್ದಾರೆ..

ಗೋವಾದಲ್ಲಿ ನಟಿ ಕೀರ್ತಿ ಸುರೇಶ್ ಮದುವೆ ನಡೆದಿದ್ದು.. ಡಿಸೆಂಬರ್ 11-12 ರಂದು ಗೋವಾದಲ್ಲಿ ಅವರ ಡೆಸ್ಟಿನೇಶನ್ ವೆಡ್ಡಿಂಗ್ ನಡೆಯಿತು. ಮದುವೆಗೆ ಸಂಬಂಧಿಸಿದ ಎಲ್ಲಾ ಕೆಲಸಗಳನ್ನು ಕೀರ್ತಿ ಸುರೇಶ್ ವಹಿಸಿಕೊಂಡಿದ್ದರು ಎಂದು ಹೇಳಲಾಗಿತ್ತು.. ಕೀರ್ತಿ ಸುರೇಶ್ ಮೊದಲು ಹಿಂದೂ ಸಂಪ್ರದಾಯದ ಪ್ರಕಾರ ಮದುವೆಯಾದರು, ನಂತರ ಅವರ ಪತಿ ಆಂಟೋನಿ ಅವರಿಗಾಗಿ ಕ್ರಿಶ್ಚಿಯನ್ ಸಂಪ್ರದಾಯದಲ್ಲಿ ವಿವಾಹವಾದರು..

ಮದುವೆ ಮುಗಿದ ನಂತರ ಕೀರ್ತಿ ಸುರೇಶ್ ಮತ್ತೆ ತಮ್ಮ ಚಿತ್ರದ ಶೂಟಿಂಗ್ನಲ್ಲಿ ಭಾಗವಹಿಸಲಿದ್ದಾರೆ. ಕೀರ್ತಿ ಈ ವರ್ಷ ಬಾಲಿವುಡ್ಗೆ ಎಂಟ್ರಿ ಕೊಡುತ್ತಿರುವುದು ಗೊತ್ತೇ ಇದೆ. ಅವರು ಬಾಲಿವುಡ್ ಯಂಗ್ ಹೀರೋ ವರುಣ್ ಧವನ್ ಜೊತೆ ಬೇಬಿ ಜಾನ್ ಎಂಬ ಚಿತ್ರದಲ್ಲಿ ನಟಿಸಿದ್ದಾರೆ. ಮದುವೆಗೂ ಮುನ್ನ ಶೂಟಿಂಗ್ ಮುಗಿಸಿದ್ದ ಕೀರ್ತಿ, ಮದುವೆಯ ನಂತರ 'ಬೇಬಿ ಜಾನ್' ಚಿತ್ರದ ಪ್ರಚಾರಕ್ಕಾಗಿ ಮುಂಬೈಗೆ ಆಗಮಿಸಿದ್ದರು. ಮಾಡರ್ನ್ ಡ್ರೆಸ್ನಲ್ಲಿ ಕಾಣಿಸಿಕೊಂಡ ಕೀರ್ತಿ ಸುರೇಶ್ ಅವರನ್ನು ನೋಡಿ ಫ್ಯಾನ್ಸ್ ಶಾಕ್ ಆಗಿದ್ದಾರೆ.

ಕೀರ್ತಿ ಸುರೇಶ್ ಮಾಡರ್ನ್ ಬಟ್ಟೆ ಹಾಕಿದ್ದರೂ ಅದರ ಮೇಲೆ ತಾಳಿ ಧರಿಸಿದ್ದರು. ಹೀಗಾಗಿ ಕೀರ್ತಿ ಸಂಪ್ರದಾಯವನ್ನು ಗೌರವಿಸುತ್ತಾರೆ ಎಂದು ಹಲವರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಆದರೆ ಇನ್ನು ಕೆಲವರು ಕೀರ್ತಿ ಧರಿಸಿರುವ ಡ್ರೆಸ್ ಬಗ್ಗೆ ಟೀಕೆ ಮಾಡುತ್ತಿದ್ದಾರೆ. ಮದುವೆಯಾಗಿ ಕೇವಲ 10 ದಿನ ಆಗಿದೆ ಹೀಗಿರುವಾಗ ಇಂತಹ ಡ್ರೆಸ್ ನಲ್ಲಿ ದರ್ಶನ ನೀಡುವುದು ದೊಡ್ಡ ತಪ್ಪು ಎಂದಿದ್ದಾರೆ.. ಒಟ್ಟಿನಲ್ಲಿ ಇದೀಗ ಕೀರ್ತಿ ಸುರೇಶ್ ಅವರ ಮದುವೆಯ ನಂತರದ ಲುಕ್ ಈಗ ವೈರಲ್ ಆಗಿದೆ.



## ಎಕ್ಸ್‌ಕ್ಲೂಸಿವ್ ರಿಯಾಯಿತಿ ಘೋಷಿಸಿದ ಟ್ರೆಂಡ್ಸ್

ಭಾರತದ ಪ್ರಮುಖ ಫ್ಯಾಷನ್ ತಾಣವಾದ ರಿಲಯನ್ಸ್ ಟ್ರೆಂಡ್ಸ್ ನಿಂದ ಎಕ್ಸ್ ಕ್ಲೂಸಿವ್ ಆದ ರಿಯಾಯಿತಿ ಆಫರ್ ಘೋಷಣೆ ಮಾಡಲಾಗಿದೆ. ಋತುವಿನ ಅಂತ್ಯಕ್ಕೆ ಇಂಥದ್ದೊಂದು ಆಫರ್ ನೀಡಲಾಗುತ್ತಿದೆ. ಈ ಸೀಸನ್ ಅಂತ್ಯದ ಮಾರಾಟವು ಇನ್ನೂ ರೋಮಾಂಚಕ ಹಾಗೂ ಗ್ರಾಹಕರಿಗೆ ಒಳ್ಳೆ ಪ್ರಯೋಜನ ಮತ್ತು ಅನುಕೂಲಕರವಾಗಲಿ ಎಂಬ ಕಾರಣಕ್ಕೆ ಟ್ರೆಂಡ್ಸ್ ನಿಂದ ವಿಶೇಷ ಯೋಜನೆ ತಂದಿದೆ. ಇದರಲ್ಲಿ ಗ್ರಾಹಕರಿಗೆ ಶೇಕಡಾ 70ರ ತನಕ ರಿಯಾಯಿತಿ ನೀಡಲಾಗುತ್ತಿದೆ. ಈ ಯೋಜನೆಯು ಡಿಸೆಂಬರ್ 12ರಿಂದ ಆರಂಭವಾಗಿದೆ.

ಟ್ರೆಂಡ್ಸ್ ವಿಶೇಷತೆ ಏನೆಂದರೆ, ಭಾರತದಲ್ಲಿ ಎಲ್ಲರಿಗೂ ಫ್ಯಾಷನ್ ತಲುಪಿಸುವಂಥ ಕೆಲಸ ಮಾಡುತ್ತಿದೆ. ಅದಕ್ಕಾಗಿ ದೇಶದ ಮೂಲೆ ಮೂಲೆಗೆ, ಎಲ್ಲ ಗ್ರಾಹಕರಿಗೂ ತಲುಪಿಸುವ ಮತ್ತು ಕೈಗೆಟುಕುವಂತೆ ಮಾಡುತ್ತಿದೆ. ಅದು ಮೆಟ್ರೋ, ಮಿನಿ ಮೆಟ್ರೋದಿಂದ ಶ್ರೇಣಿ ಒಂದು, ಶ್ರೇಣಿ ಎರಡು ಪಟ್ಟಣಗಳು ಹಾಗೂ ಅದರ ಆಚೆಗೂ ರಿಲಯನ್ಸ್ ಟ್ರೆಂಡ್ಸ್ ವ್ಯಾಪಕವಾಗಿದೆ. ಇದರೊಂದಿಗೆ ಭಾರತದಲ್ಲಿ ಫ್ಯಾಷನ್ ಪ್ರಿಯರಿಗೆ ಖರೀದಿ ಮಾಡುವುದಕ್ಕೆ ನೆಚ್ಚಿನ ತಾಣವಾಗಿದೆ.




ಆಧುನಿಕ ಲುಕ್ ಗೆ ಮತ್ತು ಒಳಾಂಗಣ-ಹೊರಾಂಗಣ ನೋಟಕ್ಕೆ ಟ್ರೆಂಡ್ಸ್ ಸ್ಟೋರ್ ಗಳು ಬಹಳ ಅಚ್ಚುಮೆಚ್ಚಿನದ್ದಾಗಿದೆ. ದೇಶದ ಆಯಾ ಭಾಗದ ಖರೀದಿದಾರರು ಆಯ್ಕೆ ಮಾಡಿಕೊಳ್ಳುವಂಥ, ಮೆಚ್ಚುವಂಥ, ಸೂಕ್ತವಾಗುವಂಥ ದಿರಿಸುಗಳು ಹಾಗೂ ಪರಿಕರಗಳು, ಉತ್ತಮ ಗುಣಮಟ್ಟದ್ದು, ಕೈಗೆಟುಕುವಂಥ ಬೆಲೆಗೆ ಹಾಗೂ ಕೊಡುವ ಬೆಲೆಗೆ ಉತ್ತಮ ಮೌಲ್ಯ ನೀಡುವಂಥದ್ದಾಗಿರುತ್ತದೆ.

ಅನನ್ಯವಾಗಿ ವಿಶಿಷ್ಟ ಎನಿಸುವಂಥ, ಖರೀದಿಯ ಅದ್ಭುತ ಅನುಭವ ನೀಡುವಂಥದ್ದನ್ನು ಗ್ರಾಹಕರು ನಿರೀಕ್ಷೆ ಮಾಡಬಹುದು. ಮಹಿಳೆಯರು, ಪುರುಷರು ಹಾಗೂ ಮಕ್ಕಳ ಬಟ್ಟೆಗಳು, ಪರಿಕರಗಳನ್ನು ಕಡಿಮೆ ಬೆಲೆಯಲ್ಲಿ ಟ್ರೆಂಡ್ಸ್ ಸ್ಟೋರ್ಸ್ ಗಳಿಂದ ಖರೀದಿ ಮಾಡಬಹುದು. ಎಂಡ್ ಆಫ್ ಸೀಸನ್ ಸೇಲ್ ಸಂದರ್ಭವನ್ನು ತಪ್ಪಿಸಿಕೊಳ್ಳದೆ, ಗ್ರಾಹಕರು ಈ ಅವಕಾಶವನ್ನು ಬಳಸಿಕೊಳ್ಳಬೇಕು.

## ಮತ್ತೆ ಒಂದಾದ ಕೃಷ್ಣ-ಶಶಾಂಕ್: ಹೊಸ ಚಿತ್ರಕ್ಕೆ 'ಬ್ಯಾಟ್' ಟೈಟಲ್ ಫಿಕ್ಸ್..?



ಕೌಸಲ್ಯ ಸುಪ್ರಜಾ ರಾಮಾ' ಯಶಸ್ವಿ ಚಿತ್ರ ನೀಡಿದ ನಿರ್ದೇಶಕ ಶಶಾಂಕ್ ಮತ್ತು ನಟ ಡಾರ್ಲಿಂಗ್ ಕೃಷ್ಣ ಅವರು ಮತ್ತೊಂದು ಚಿತ್ರಕ್ಕೆ ಕೈಜೋಡಿಸಿದ್ದು, ಚಿತ್ರತಂಡ ಸದ್ದಿಲ್ಲದೆ ಚಿತ್ರೀಕರಣ ಪ್ರಾರಂಭಿಸಿದೆ.

ಫಾದರ್ ಚಿತ್ರದ ಚಿತ್ರೀಕರಣ ಪೂರ್ಣಗೊಂಡ ಬೆನ್ನಲ್ಲೇ ಡಾರ್ಲಿಂಗ್ ಕೃಷ್ಣ ಅವರು ಶಶಾಂಕ್ ನಿರ್ದೇಶನ ಮಾಡುತ್ತಿರುವ ಹೊಸ ಚಿತ್ರದ ಚಿತ್ರೀಕರಣದಲ್ಲಿ ಭಾಗಿಯಾಗಿದ್ದಾರೆ. ಚಿತ್ರದ ಮೊದಲ ಹಂತದ ಚಿತ್ರೀಕಱಣ ಆರಂಭವಾಗಿದ್ದು, ಚಿತ್ರ, ತಾರಾಗಣ ಹಾಗೂ ಸಿಬ್ಬಂದಿಗಳ ಕುರಿತು ಹೆಚ್ಚಿನ ಮಾಹಿತಿಗಳನ್ನು ಚಿತ್ರತಂಡ ಬಿಟ್ಟುಕೊಟ್ಟಿಲ್ಲ. ಆದರೆ, ಶಶಾಂಕ್ ಅವರೊಂದಿಗೆ ಚಿತ್ರ ಮಾಡುತ್ತಿರುವ ಕುರಿತು ಡಾರ್ಲಿಂಗ್ ಕೃಷ್ಣ ದೃಢಪಡಿಸಿದ್ದಾರೆ.

ಈ ವರೆಗೂ ಪ್ರೀತಿ ಹಾಗೂ ಕೌಟುಂಬಿಕ ಚಿತ್ರಗಳನ್ನು ನೀಡಿರುವ ಶಶಾಂಕ್ ಅವರು ಈ ಬಾರಿ ಥ್ರಿಲ್ಲರ್ ಚಿತ್ರವೊಂದನ್ನು ಪ್ರೇಕ್ಷಕರ ಮುಂದೆ ತರುತ್ತಿದ್ದಾರೆ.

ಚಿತ್ರ ತಂಡ ಚಿತ್ರದ ಹೆಸರನ್ನು ಅಧಿಕೃತವಾಗಿ ಹೇಳದಿದ್ದರೂ. ಬ್ಯಾಟ್ ಎಂದು ಟೈಟಲ್ ಫಿಕ್ಸ್ ಮಾಡಲಾಗಿದೆ ಎಂದು ಮೂಲಗಳು ತಿಳಿಸಿವೆ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಆರ್ಥಿಕವಾಗಿ ಲಾಭ, ಕೌಟುಂಬಿಕವಾಗಿ ಅನುಕೂಲ, ಆರೋಗ್ಯ ಸಮಸ್ಯೆ ಬಾಧಿಸುವುದು, ಮಾನಸಿಕವಾಗಿ ನೋವು.

**ವೃಷಭ:** ಅಧಿಕ ಖರ್ಚು, ಮಿತ್ರರೊಂದಿಗೆ ಮೋಜು ಮಸ್ತಿ, ನೆರೆಹೊರೆಯವರಿಂದ ಅಅ **ಮೇಷ:** ದೂರ ಪ್ರಯಾಣ ಮಾಡುವ ಸಂದರ್ಭ, ತಾಯಿಯಿಂದ ಧನಾಗಮನ, ದಾನ ಧರ್ಮದ ಫಲ ಪಡೆಯುವಿರಿ.

**ವೃಷಭ:** ಆಧ್ಯಾತ್ಮಿಕ ಕ್ಷೇತ್ರದಲ್ಲಿರುವವರಿಗೆ ಅನುಕೂಲ, ಮನೆಯ ವಾತಾವರಣದಲ್ಲಿ ಕಿರಿಕಿರಿ, ಮಾನಸಿಕ ನೆಮ್ಮದಿ ಭಂಗ.

**ಮಿಥುನ:** ಪಾಲುದಾರಿಕೆ ವ್ಯವಹಾರ ಕ್ಷೇತ್ರದಲ್ಲಿ ಲಾಭ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಬಂಧುಮಿತ್ರರ ಆಗಮನ, ಕುಟುಂಬದಲ್ಲಿ ಆತಂಕ.

**ಕಟಕ:** ಕೆಲಸ ಕಾರ್ಯಗಳಲ್ಲಿ ಜಯ, ಮಕ್ಕಳಿಂದ ಕುಟುಂಬದಲ್ಲಿ ಕಿರಿ ಕಿರಿ, ಆರ್ಥಿಕ ನೆರವು ಸಿಗುವುದು.

**ಸಿಂಹ:** ಅತಿಯಾದ ಒಳ್ಳೆತನದಿಂದ ಸಂಕಷ್ಟ, ಮಾನಸಿಕ ಚಿಂತೆ, ಉದ್ಯೋಗ ಕಳೆದುಕೊಳ್ಳುವ ಸಂದರ್ಭ, ಕುಟುಂಬದಲ್ಲಿ ಆತಂಕ.

**ಕನ್ಯಾ:** ಮಿತ್ರರಿಂದ ನಷ್ಟ, ಪಾಲುದಾರಿಕೆ ವ್ಯವಹಾರದಲ್ಲಿ ಸಂಕಷ್ಟ, ದಾಂಪತ್ಯದಲ್ಲಿ ಕಿರಿಕಿರಿ, ನಿದ್ರಾಭಂಗ.

**ತುಲಾ:** ಸೇವಾ ವೃತ್ತಿಯ ಉದ್ಯೋಗ ಲಾಭ, ಆರ್ಥಿಕ ಸಮಸ್ಯೆಯಿಂದ ಮುಕ್ತಿ, ಆರೋಗ್ಯದಲ್ಲಿ ವ್ಯತ್ಯಾಸ.

**ವೃಶ್ಚಿಕ:** ಉದ್ಯೋಗ ನಿಮಿತ್ತ ಪ್ರಯಾಣ, ಗುರು ನಿಂದನೆ ಮತ್ತು ದೈವನಿಂದನೆ, ಅನಾರೋಗ್ಯ ಸಮಸ್ಯೆಗಳಿಂದ ಚಿಂತೆ.

**ಧನಸ್ಸು:** ಕುಲದೇವರ ದರ್ಶನ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ಅಧಿಕ ಖರ್ಚು, ಪೂರ್ವಭಾಗದಲ್ಲಿರುವ ವ್ಯಕ್ತಿಗಳಿಂದ ಕಿರಿಕಿರಿ.

**ಮಕರ:** ಬಂಧು ಬಾಂಧವರ ನಡುವೆ ವಿರಸಗಳು, ಪಾಲುದಾರಿಕೆ ವ್ಯವಹಾರದಲ್ಲಿ ಅನಾನುಕೂಲ, ಪ್ರಯಾಣದಿಂದ ಸಂಕಷ್ಟ.

**ಕುಂಭ:** ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ಶುಭಕಾರ್ಯಗಳಿಗೆ ಕಾಲ ಕೂಡುವುದು, ಆರ್ಥಿಕ ಮತ್ತು ಕೌಟುಂಬಿಕ ದುಸ್ಥಿತಿಗಳು, ಗುರು ನಿಂದನೆ ಮತ್ತು ದೈವನಿಂದನೆ.

**ಮೀನ:** ದೈಹಿಕ ಮತ್ತು ಮಾನಸಿಕ ತೊಂದರೆ, ಕೆಲಸ ಕಾರ್ಯದ ಅಡೆತಡೆಗಳಿಂದ ಚಿಂತೆ, ಅನಾರೋಗ್ಯ ಸಮಸ್ಯೆಗಳು. ನುಕೂಲ.

## ಅಂತರಾಷ್ಟ್ರೀಯ ಮಾನವ ಒಗ್ಗಟ್ಟಿನ ದಿನ

ಈ ಪ್ರಪಂಚವು ವೈವಿಧ್ಯತೆಯಿಂದ ಕೂಡಿದೆ. ಇಲ್ಲಿ ಅನೇಕ ಧರ್ಮಗಳು, ಸಂಸ್ಕೃತಿಗಳ ಜನರಿದ್ದಾರೆ. ಈ ವೈವಿಧ್ಯತೆಯ ಕಾರಣದಿಂದಾಗಿ ಜನರಲ್ಲಿ ಸಹಜವಾಗಿ ಬೇರೆ ಧರ್ಮಗಳು, ಸಂಸ್ಕೃತಿ, ದೇಶಗಳ ಬಗ್ಗೆ ಭೇದಭಾವದ ಭಾವನೆ ಮೂಡತ್ತದೆ. ಇದರಿಂದಾಗಿ ಸಮಾಜ ಮತ್ತು ದೇಶ ದೇಶಗಳ ನಡುವೆ ಯುದ್ಧ, ಹಿಂಸಾಚಾರ, ಭಯೋತ್ಪಾದನೆ ಮತ್ತು ಇತರ ಸಮಸ್ಯೆಗಳು ಉದ್ಭವಿಸುತ್ತದೆ. ಈ ಎಲ್ಲಾ ಸಮಸ್ಯೆಗಳು ಇಡೀ ಮಾನವ ಜನಾಂಗಕ್ಕೆ ಹಾನಿಯುಂಟುಮಾಡುತ್ತದೆ. ಮತ್ತು ಶಾಂತಿಯು ಹದಗೆಡುತ್ತದೆ. ಒಗ್ಗಟ್ಟಿನಲ್ಲಿ ಬಲವಿದೆ ಎಂಬ ಮಾತಿದೆ. ಅದೇ ರೀತಿ ಪ್ರತಿಯೊಂದು ದೇಶಗಳು ದ್ವೇಷವನ್ನು ಮರೆತು ಪರಸ್ಪರ ಒಗ್ಗಾಟ್ಟಾಗಿದ್ದಾ, ಅಲ್ಲಿ ಯಾವುದೇ ಸಮಸ್ಯೆಗಳು ಉದ್ಭವವಾಗುವುದಿಲ್ಲ, ಅಲ್ಲಿ ಅಭಿವೃದ್ಧಿ ಸಾಧ್ಯವಾಗುತ್ತದೆ. ಅದೇ ರೀತಿ ದೇಶಗಳ ನಡುವೆ ಒಂದು ಉತ್ತಮ ಸಂಬಂಧ ಏರ್ಪಡುತ್ತದೆ. ಈ ನಿಟ್ಟಿನಲ್ಲಿ ?ವಸುದೈವ ಕುಟುಂಬಕಂ? ಅಂದರೆ ಇಡೀ ಜಗತ್ತು ಒಂದೇ ಕುಟುಂಬ ಎಂಬ ಪರಿಕಲ್ಪನೆಯಂತೆ ಅಂತರಾಷ್ಟ್ರೀಯ ಸಂಬಂಧಗಳನ್ನು ಬಲಪಡಿಸುವ, ನಾಗರಿಕರಲ್ಲಿ ಏಕತೆ ಮತ್ತು ಸಹೋದರತ್ವ ಭಾವನೆಯನ್ನು ಮೂಡಿಸುವ ಮತ್ತು , ಜಗತ್ತಿನಲ್ಲಿ ಸಾಮರಸ್ಯ ಮತ್ತು ಶಾಂತಿಯನ್ನು ಉತ್ತೇಜಿಸುವ ಉದ್ದೇಶದಿಂದ ಪ್ರತಿವರ್ಷ ಡಿಸೆಂಬರ್ 20 ರಂದು ''ಅಂತರಾಷ್ಟ್ರೀಯ ಮಾನವ ಒಗಟ್ಟಿನ ದಿನ''ವನ್ನು ಆಚರಿಸಲಾಗುತ್ತದೆ.

ಈ ವಿಶೇಷ ದಿನದ ಆಚರಣೆಯನ್ನು ಮೊದಲ ಬಾರಿಗೆ 2005 ರಲ್ಲಿ ಪ್ರಾರಂಭಿಸಲಾಯಿತು. ವಾಸ್ತವವಾಗಿ ನಮ್ಮ ಪ್ರಪಂಚವು ವೈವಿಧ್ಯತೆಯಿಂದ ಕೂಡಿದೆ. ಅನೇಕ ಧರ್ಮಗಳು, ಸಂಸ್ಕೃತಿಗಳ ಜನರು ಇಲ್ಲಿ ವಾಸಿಸುತ್ತಿದ್ದಾರೆ. ಈ ವೈವಿಧ್ಯತೆಯಿಂದಾಗಿ ಜನರಲ್ಲಿ ಸಹಜವಾಗಿ ಭೇದಭಾವಗಳ ಭಾವನೆ ಮೂಡತ್ತದೆ. ಈ ಕಾರಣದಿಂದಾಗಿ ಸಮಾಜ ಮತ್ತು ದೇಶ ದೇಶಗಳ ನಡುವೆ ಯುದ್ಧ, ಹಿಂಸಾಚಾರ, ಭಯೋತ್ಪಾದನೆ ಮತ್ತು ಇತರ ಸಮಸ್ಯೆಗಳು ಉದ್ಭವಿಸುತ್ತದೆ. ಇದು ಇಡೀ ಮಾನವ ಜನಾಂಗಕ್ಕೆ ಹಾನಿಯುಂಟುಮಾಡುತ್ತದೆ. ಅದೇ ದೇಶದೇಶಗಳು ಒಗ್ಗಟ್ಟಾಗಿದ್ದಾ ಅಲ್ಲಿ ಅಭಿವೃದ್ಧಿ ಸಾಧ್ಯವಾಗುತ್ತದೆ, ಅದೇ ರೀತಿ ದೇಶಗಳ ನಡುವೆ ಒಂದು ಉತ್ತಮ ಸಂಬಂಧ ಏರ್ಪಡುತ್ತದೆ. ಜಗತ್ತಿನಲ್ಲಿ ಶಾಂತಿಯು ನೆಲೆಸುತ್ತದೆ. ಹೀಗೆ ಜಗತ್ತಿನ ಇತಿಹಾಸವನ್ನು ಅವಲೋಕಿಸಿದಾಗ, ಈ ಪ್ರಪಂಚದಲ್ಲಿ ನಡೆದ ಎಲ್ಲಾ ಮಹತ್ಕಾರ್ಯಗಳು ಸಾಧ್ಯವಾದದ್ದು ದೇಶ ದೇಶಗಳ ನಡುವಿನ ಒಗ್ಗಟ್ಟು ಮತ್ತು ಸಹಕಾರದಿಂದಲೇ ಎಂಬುದು ತಿಳಿಯುತ್ತದೆ.

# ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿರುದ್ಧ ಎಫ್ಐಆರ್



**ನವದೆಹಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಕಾಂಗ್ರೆಸ್ ಮುಖಂಡ, ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ದಿಲ್ಲಿ ಪೊಲೀಸರು ಎಫ್ ಐಆರ್ ದಾಖಲಿಸಿದ್ದಾರೆ. ಸಂಸತ್ತಿನಲ್ಲಿ ನಡೆದ ಘರ್ಷಣೆಯಲ್ಲಿ ಇಬ್ಬರು ಬಿಜೆಪಿ ನಾಯಕರು ಗಾಯಗೊಂಡ ಹಿನ್ನೆಲೆಯಲ್ಲಿ ಅವರ ವಿರುದ್ಧ ದೂರು ದಾಖಲಿಸಲಾಗಿತ್ತು.

ಸೆಕ್ಷನ್ 117 (ಸ್ವಯಂ ಪ್ರೇರಿತವಾಗಿ ತೀವ್ರ ಗಾಯ ಉಂಟು ಮಾಡುವುದು), 125 (ಇತರರ ಜೀವ ಅಥವಾ ವೈಯಕ್ತಿಕ ಸುರಕ್ಷತೆಗೆ ಅಪಾಯವನ್ನುಂಟು ಮಾಡುವ ಕೃತ್ಯ), 131 (ಕ್ರಿಮಿನಲ್ ಬಲದ ಬಳಕೆ), 351 (ಕ್ರಿಮಿನಲ್ ಬೆದರಿಕೆ) ಮತ್ತು 3 (5) (ಸಾಮಾನ್ಯ ಉದ್ದೇಶ) ಅಡಿಯಲ್ಲಿ ಪಾರ್ಲಿಮೆಂಟ್ ಸ್ಟ್ರೀಟ್ ಪೊಲೀಸ್ ಠಾಣೆಯಲ್ಲಿ ಎಫ್ ಐಆರ್ ದಾಖಲಿಸಲಾಗಿದೆ ಎಂದು ಸುದ್ದಿಸಂಸ್ಥೆ ಪಿಟಿಐ ವರದಿ ಮಾಡಿದೆ.

ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವಮಾನಿಸಿದ್ದಾರೆ ಎಂದು ಆರೋಪಿಸಿ ವಿಪಕ್ಷಗಳು ಗುರುವಾರ ಸಂಸತ್ತಿನ ಹೊರಗೆ ಪ್ರತಿಭಟನೆ ನಡೆಸಿದ್ದವು. ಈ ವೇಳೆ ನಡೆದ ಘರ್ಷಣೆಯಲ್ಲಿ ಬಿಜೆಪಿಯ ಇಬ್ಬರು ಸಂಸದರಾದ ತಾಪ್ ಚಂದ್ರ ಸಾರಂಗಿ ಮತ್ತು ಮುಖೇಶ್ ರಜಪೂತ್ ಗಾಯಗೊಂಡಿದ್ದು, ಪ್ರಸ್ತುತ ರಾಮ್ ಮನೋಹರ್ ಲೋಹಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಬಿಜೆಪಿ ನಾಯಕ ಅನುರಾಗ್ ಠಾಕೂರ್ ರಾಹುಲ್ ಗಾಂಧಿ ವಿರುದ್ಧ ಪಾರ್ಲಿಮೆಂಟ್ ಸ್ಟ್ರೀಟ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದರು. ಈ ವೇಳೆ ಬಿಜೆಪಿ ಸಂಸದರಾದ ಹೇಮಂಗ್ ಜೋಶಿ, ಬಾನ್ಸುರಿ ಸ್ವರಾಜ್ ಮತ್ತಿತರರು ಉಪಸ್ಥಿತರಿದ್ದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅನುರಾಗ್ ಠಾಕೂರ್, ಹಲ್ಲೆ ಮತ್ತು ಪ್ರಚೋದನೆಗಾಗಿ ರಾಹುಲ್ ಗಾಂಧಿ ವಿರುದ್ಧ ನಾವು ದಿಲ್ಲಿ ಪೊಲೀಸರಿಗೆ ದೂರು ನೀಡಿದ್ದೇವೆ. ಮಕರ್ ದ್ವಾರದ ಹೊರಗಡೆ ಎನ್ಡಿಎ ಸಂಸದರು ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ವೇಳೆ ಸಂಘರ್ಷ ನಡೆದಿದೆ. ಇದರ ವಿವರಗಳನ್ನು ನಾವು ಪೊಲೀಸರಿಗೆ ನೀಡಿದ್ದೇವೆ. ಸೆಕ್ಷನ್ 109, 115, 117, 125, 131 ಮತ್ತು 351ರ ಅಡಿ ನಾವು ದೂರು ನೀಡಿದ್ದೇವೆ ಎಂದು ವಿವರಿಸಿದ್ದರು. ಸೆಕ್ಷನ್ 109 ಕೊಲೆ ಯತ್ನವನ್ನು ಸೂಚಿಸಿದರೆ, ಸೆಕ್ಷನ್ 117 ಸ್ವಯಂಪ್ರೇರಿತವಾಗಿ ತೀವ್ರ ನೋವನ್ನು ಉಂಟು ಮಾಡುವುದಾಗಿದೆ.

## ಪ್ಯಾಲೆಸ್ಟೈನ್ ರಾಷ್ಟ್ರ ಸ್ಥಾಪನೆಗೆ ಎಂದಿಗೂ ಒಪ್ಪಲ್ಲ: ಇಸ್ರೇಲ್ ಪ್ರಧಾನಿ





**ಜೆರುಸಲೇಂ:** ಪ್ಯಾಲೆಸ್ಟೈನ್ ದೇಶ ಸ್ಥಾಪನೆಗೆ ಯಾವುದೇ ಕಾರಣಕ್ಕೂ ಅವಕಾಶ ನೀಡುವುದಿಲ್ಲ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಸ್ಪಷ್ಟಪಡಿಸಿದ್ದಾರೆ. ಸೌದಿ ಅರೇಬಿಯಾದೊಂದಿಗಿನ ಸಂಬಂಧವನ್ನು ಸಹಜ ಸ್ಥಿತಿಗೆ ತರುವ ಪ್ರಯತ್ನಗಳ ಭಾಗವಾಗಿ ಪ್ಯಾಲೆಸ್ಟೈನ್ ರಾಷ್ಟ್ರ ಸ್ಥಾಪನೆಗೆ ಇಸ್ರೇಲ್ ಒಪ್ಪಿಕೊಂಡಿದೆ ಎಂಬ ವರದಿಗಳನ್ನು ನೆತನ್ಯಾಹು ತಿರಸ್ಕರಿಸಿದ್ದಾರೆ. ಪ್ರಧಾನಿ ನೆತನ್ಯಾಹು ಪ್ಯಾಲೆಸ್ಟೈನ್ ರಾಷ್ಟ್ರ ಸ್ಥಾಪನೆಯಾಗದಂತೆ ಪ್ರಯತ್ನಿಸಿದ್ದಾರೆ ಹಾಗೂ ಮುಂದೆಯೂ ಅದೇ ಪ್ರಯತ್ನಗಳನ್ನು ಮುಂದುವರಿಸಲಿದ್ದಾರೆ ಎಂದು ಅವರ ಕಚೇರಿ ಮಂಗಳವಾರ ಹೇಳಿಕೆಯಲ್ಲಿ ತಿಳಿಸಿದೆ. ಪ್ಯಾಲೆಸ್ಟೈನ್ ರಾಷ್ಟ್ರ ಸ್ಥಾಪನೆಯು ಇಸ್ರೇಲ್ನ ಭದ್ರತೆಗೆ ಅಪಾಯವನ್ನುಂಟು ಮಾಡುತ್ತದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. ಸೌದಿ ಅರೇಬಿಯಾದೊಂದಿಗಿನ ಸಂಬಂಧಗಳನ್ನು ಉತ್ತಮಗೊಳಿಸಲು ನಡೆಯುತ್ತಿರುವ ಮಾತುಕತೆಗಳ ಭಾಗವಾಗಿ ಪ್ಯಾಲೆಸ್ಟೈನ್ ರಾಷ್ಟ್ರ ಸ್ಥಾಪನೆಯ ವಿಷಯವನ್ನು ಇಸ್ರೇಲ್ ಪರಿಗಣಿಸುತ್ತಿದೆ ಎಂದು ಇಸ್ರೇಲ್ ಮಾಧ್ಯಮಗಳು ಈ ಹಿಂದೆ ವರದಿ ಮಾಡಿರುವುದಾಗಿ ಕ್ಸಿನ್ಹುವಾ ಸುದ್ದಿ ಸಂಸ್ಥೆ ಹೇಳಿತ್ತು. ಏತನ್ಮಧ್ಯೆ ಸೌದಿ ಕೂಡ ಈ ವರದಿಯನ್ನು ಬಲವಾಗಿ ನಿರಾಕರಿಸಿದ್ದು, ಈ ವಿಷಯದಲ್ಲಿ ಯಾವುದೇ ಪ್ರಗತಿ ಕಂಡು ಬಂದಿಲ್ಲ ಎಂದು ಹೇಳಿದೆ. ಸ್ವತಂತ್ರ ಪ್ಯಾಲೆಸ್ಟೈನ್ ರಾಷ್ಟ್ರದ ಸ್ಥಾಪನೆಯಾಗಬೇಕು ಎಂಬ ತನ್ನ ನಿಲುವಿನಿಂದ ಸೌದಿ ಅರೇಬಿಯಾದ ನಾಯಕತ್ವವು ಹಿಂದೆ ಸರಿದಿದೆ ಎಂಬ ವರದಿಗಳು ಕೂಡ ಅಷ್ಟೇ ಆಧಾರರಹಿತವಾಗಿವೆ ಎಂದು ಹೆಸರು ಹೇಳಲಿಚ್ಛಿಸದ ಸೌದಿ ಅಧಿಕಾರಿಯೊಬ್ಬರು ಮಾಧ್ಯಮಗಳಿಗೆ ಹೇಳಿಕೆಯಲ್ಲಿ ತಿಳಿಸಿದ್ದಾರೆ.ಗಾಜಾದಲ್ಲಿನ ಯುದ್ಧ ಕೊನೆಗೊಳಿಸಲು ಮತ್ತು ಪ್ಯಾಲೆಸ್ಟೈನ್ ಜನರಿಗೆ ಸ್ವತಂತ್ರ ರಾಷ್ಟ್ರ ಸ್ಥಾಪಿಸಲು ಸಹಾಯ ಮಾಡುವುದನ್ನು ಸೌದಿ ಅರೇಬಿಯಾ ಮುಂದುವರಿಸುತ್ತದೆ ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

## ಸಭಾಪತಿ ಜಗದೀಪ್ ಧನಕರ್ ವಿರುದ್ಧದ ಅವಿಶ್ವಾಸ ನಿರ್ಣಯ ವಜಾ

**ನವದೆಹಲಿ:** ಉಪರಾಷ್ಟ್ರಪತಿ, ರಾಜ್ಯಸಭಾ ಸಭಾಪತಿ ಜಗದೀಪ್ ಧನಕರ್ ಅವರ ವಿರುದ್ಧ ಮಹಾಭಿಯೋಗ ನಡೆಸಲು ಕೋರಿ ವಿಪಕ್ಷಗಳು ಸಲ್ಲಿಸಿದ್ದ ನೋಟಿಸ್ ವಜಾಗೊಂಡಿದೆ. ನಿಯಮಗಳು ಪಾಲನೆ ಮಾಡಿಲ್ಲ ಎಂದು ರಾಜ್ಯಸಭಾ ಉಪಸಭಾಪತಿ



ಹರಿವಂಶ್ ಅವರು ವಿಪಕ್ಷಗಳ ಅವಿಶ್ವಾಸ ನಿರ್ಣಯವನ್ನು ತಿರಸ್ಕರಿಸಿದ್ದಾರೆ. ತಮ್ಮ ವಿರುದ್ಧ ಪಕ್ಷಪಾತ ಧೋರಣೆ ಮಾಡುತ್ತಿದ್ದಾರೆ. ಅವರನ್ನು ಪದಚ್ಯುತಗೊಳಿಸಬೇಕು ಎಂದು ಕೋರಿ ಕಾಂಗ್ರೆಸ್ ಸೇರಿದಂತೆ ವಿಪಕ್ಷಗಳ 60 ಸದಸ್ಯರು ಡಿಸೆಂಬರ್ 10 ರಂದು ರಾಜ್ಯಸಭಾ ಸಭಾಪತಿ ಧನಕರ್ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಿದ್ದರು.ನಿರ್ಣಯ ತಿರಸ್ಕರಿಸಿದ ಉಪ ಸಭಾಪತಿ: ಅವಿಶ್ವಾಸ ನಿರ್ಣಯ ಮಂಡಿಸುವ ಮೊದಲು ಪಾಲಿಸಬೇಕಾದ ನಿಯಮಗಳನ್ನು ವಿಪಕ್ಷಗಳು ಅನುಸರಿಸಿಲ್ಲ. ಮಹಾಭಿಯೋಗಕ್ಕೆ 14 ದಿನಗಳ ಮೊದಲು ನೋಟಿಸ್ ನೀಡಬೇಕಿತ್ತು. ಜೊತೆಗೆ ನಿರ್ಣಯದ ನೋಟಿಸ್ನಲ್ಲಿ ಜಗದೀಪ್ ಧನಕರ್ ಅವರ ಹೆಸರನ್ನೇ ತಪ್ಪಾಗಿ ಬರೆಯಲಾಗಿದೆ. ಇದು ದೋಷಪೂರಿತವಾಗಿದ್ದು, ನಿರ್ಣಯವನ್ನು ತಿರಸ್ಕರಿಸಲಾಗುತ್ತಿದೆ ಎಂದು ರಾಜ್ಯಸಭಾ ಉಪಸಭಾಪತಿ ಹರಿವಂಶ್ ಅವರು ಹೇಳಿದ್ದಾರೆ. ಮಹಾಭಿಯೋಗ ನೋಟಿಸ್ ಅನೌಪಚಾರಿಕ ಕೃತ್ಯವಾಗಿದ್ದು, ತೀವ್ರ ದೋಷಪೂರಿತವಾಗಿದೆ. ಸಭಾಪತಿಗಳ ವಿರುದ್ಧ ಆತುರದ ನಿರ್ಧಾರವಾಗಿದೆ. ಉಪರಾಷ್ಟ್ರಪತಿಗಳನ್ನು ನಿಂದಿಸಲು ಕೈಗೊಂಡ ನಿರ್ಣಯವಾಗಿದೆ ಎಂದು ರಾಜ್ಯಸಭೆಯ ಪ್ರಧಾನ ಕಾರ್ಯದರ್ಶಿ ಪಿ.ಸಿ. ಮೋದಿ ಅವರು ತಿಳಿಸಿದ್ದಾಗಿ ಮೂಲಗಳು ಹೇಳಿವೆ.

## ಸ್ಪೀಡ್ ಬೋಟ್ ಫೆರ್ರಿಗೆ ಡಿಕ್ಕಿ ಹೊಡೆಯಲು ಕಾರಣ ಏನು?

**ಮುಂಬೈ:** ನೌಕಾಪಡೆಯ ಸ್ಪೀಡ್ ಬೋಟ್ ನಿಯಂತ್ರಣ ತಪ್ಪಿ ಪ್ರವಾಸಿಗರಿಂದ ಫೆರ್ರಿಗೆ ಡಿಕ್ಕಿ ಹೊಡೆದಿದ್ದರಿಂದ ಮುಂಬೈ ಸಮುದ್ರದಿಂದ ಘನಘೋರ ದುರಂತ ಸಂಭವಿಸಿದೆ. ಗೇಟ್ ವೇ ಆಫ್ ಇಂಡಿಯಾದಿಂದ ಎಲಿಫೆಂಟಾ ಗುಹೆಗಳ ಕಡೆ ಜನರನ್ನು ಕರೆದೊಯ್ಯುತ್ತಿದ್ದ ಫೆರ್ರಿಗೆ ನೌಕಾ ಪಡೆಯ ಸ್ಪೀಡ್ ಬೋಟ್ ಡಿಕ್ಕಿ ಹೊಡೆದು ನೌಕಾಪಡೆಯ ಮೂವರು ಸಿಬ್ಬಂದಿ ಸೇರಿ 13 ಮಂದಿ ಮೃತಪಟ್ಟು 101 ಮಂದಿ ಗಾಯಗೊಂಡಿದ್ದಾರೆ. ರಕ್ಷಿಸಲ್ಪಟ್ಟವರಲ್ಲಿ ನಾಲ್ವರ ಸ್ಥಿತಿ ಗಂಭೀರವಾಗಿದೆ.

**ಘಟನೆ ಹೇಗಾಯ್ತು?:** 110 ಪ್ರಯಾಣಿಕರಿದ್ದ ನೀಲ್ ಕಮಾಲ್ ಹೆಸರಿನ ಫೆರ್ರಿ ಮಧ್ಯಾಹ್ನ 3:15ಕ್ಕೆ ಗೇಟ್‌ವೇ ಆಫ್ ಇಂಡಿಯಾದಿಂದ ಪ್ರಯಾಣ ಬೆಳೆಸಿತ್ತು. 8.5 ಕಿ.ಮೀ ದೂರದಲ್ಲಿರರುವ ಜವಾಹರ ದ್ವೀಪದ ಬಳಿ ಸಾಗುತ್ತಿದ್ದಾಗ ಫೆರ್ರಿಯ ಮುಂಭಾಗಕ್ಕೆ ಸಂಜೆ 3:55ಕ್ಕೆ ನೌಕಾಪಡೆಯ ಸ್ಪೀಡ್ ಬೋಟ್ ಡಿಕ್ಕಿ ಹೊಡೆದಿದೆ. ಬಲಗಡೆಗೆ ಡಿಕ್ಕಿ ಹೊಡೆದ ರಭಸಕ್ಕೆ ಫೆರ್ರಿ ಪಲ್ಟಿಯಾಗಿದೆ. ವಿಷಯ ತಿಳಿಯುತ್ತಿದ್ದಂತೆ ನೌಕಾಪಡೆ, ಕರಾವಳಿ ಪಡೆಯ ಸಿಬ್ಬಂದಿಗಳು ರಕ್ಷಣಾ ಕಾರ್ಯ ನಡೆಸಿದ್ದಾರೆ. ನೌಕಾ ಪಡೆಯ 4 ಹೆಲಿಕಾಪ್ಟರ್‌ಗಳು, ನೌಕಾಪಡೆಯ 11 ಕ್ರಾಫ್ಟ್‌ಗಳು, ಕರಾವಳಿ ಕಾವಲು ಪಡೆಯ ಒಂದು ಬೋಟ್ ಮತ್ತು ಸ್ಥಳೀಯ ಪೊಲೀಸರು ರಕ್ಷಣಾ ಕಾರ್ಯಕ್ಕೆ ನೆರವಾಗಿ ಪ್ರಯಾಣಿಕರನ್ನು ರಕ್ಷಿಸಿದ್ದಾರೆ.

## ಎಲೆಕ್ಟ್ರಿಕ್ ವಾಹನ ವಲಯದಲ್ಲಿ 50 ಮಿಲಿಯನ್ ಉದ್ಯೋಗ ಸೃಷ್ಟಿ: ಗಡ್ಕರಿ



**ನವದೆಹಲಿ:** ಭಾರತದಲ್ಲಿ ಎಲೆಕ್ಟ್ರಿಕ್ ವಾಹನಗಳ ಮಾರುಕಟ್ಟೆಯ ಬೆಳವಣಿಗೆಯು ಮುಂದೆ ಉತ್ತಮವಾಗಿರುತ್ತದೆ. 2023ರ ವೇಳೆಗೆ ದೇಶದ ಇವಿ ವಲಯದಲ್ಲಿ ಸುಮಾರು 5 ಕೋಟಿ ಉದ್ಯೋಗಗಳನ್ನು ಸೃಷ್ಟಿಸಲಾಗುವುದು ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಗುರುವಾರ ಹೇಳಿದ್ದಾರೆ. 2030ರ ವೇಳೆಗೆ ಭಾರತೀಯ ಎಲೆಕ್ಟ್ರಿಕ್ ವಾಹನ ಮಾರುಕಟ್ಟೆ ಸಾಮರ್ಥ್ಯವು 20 ಲಕ್ಷ ಕೋಟಿ ರೂಪಾಯಿಗಳನ್ನ ತಲುಪುವ ಸಾಧ್ಯತೆಯಿದೆ ಎಂದು ಗಡ್ಕರಿ ಹೇಳಿದರು. ವರದಿಗಳ ಪ್ರಕಾರ, ಕೇಂದ್ರ ಸಚಿವರು 2030 ರ ವೇಳೆಗೆ ಎಲೆಕ್ಟ್ರಿಕ್ ವಾಹನ ಹಣಕಾಸು ಮಾರುಕಟ್ಟೆಯ ಗಾತ್ರವು ಸುಮಾರು 4 ಲಕ್ಷ ಕೋಟಿ ರೂಪಾಯಿ ಆಗಲಿದೆ.

**ಭಾರತದಲ್ಲಿ ಶೇ.40ರಷ್ಟು ವಾಯು ಮಾಲಿನ್ಯಕ್ಕೆ ಸಾರಿಗೆ ವಲಯವೇ ಕಾರಣ.!:** ಸುದ್ದಿ ಪ್ರಕಾರ, ಭಾರತದಲ್ಲಿ ಶೇಕಡಾ 40 ರಷ್ಟು ವಾಯು ಮಾಲಿನ್ಯವು ಸಾರಿಗೆ ವಲಯದಿಂದ ಉಂಟಾಗುತ್ತದೆ ಎಂದು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವರು ಹೇಳಿದ್ದಾರೆ. ಭಾರತವು 22 ಲಕ್ಷ ಕೋಟಿ ರೂಪಾಯಿ ಮೌಲ್ಯದ ಪಳೆಯುಳಿಕೆ ಇಂಧನಗಳನ್ನು ಆಮದು ಮಾಡಿಕೊಳ್ಳುತ್ತದೆ, ಇದು ಪ್ರಮುಖ ಆರ್ಥಿಕ ಸವಾಲಾಗಿದೆ. ಪಳೆಯುಳಿಕೆ ಇಂಧನಗಳ ಈ ಆಮದು ನಮ್ಮ ದೇಶದಲ್ಲಿ ಬಹಳಷ್ಟು ಸಮಸ್ಯೆಗಳನ್ನು ಸೃಷ್ಟಿಸುತ್ತಿದೆ. ಗಡ್ಕರಿ ಅವರ ಪ್ರಕಾರ, ಭಾರತದ ವಿದ್ಯುತ್ ಬಳಕೆಯ ಶೇಕಡಾ 44 ರಷ್ಟು ಸೌರಶಕ್ತಿಯಿಂದ ಬರುವುದರಿಂದ ಸರ್ಕಾರವು ಹಸಿರು ಶಕ್ತಿಯತ್ತ ಗಮನ ಹರಿಸುತ್ತಿದೆ.

**ಇಂಧನ ಅಭಿವೃದ್ಧಿಗೆ ಮೊದಲ ಆದ್ಯತೆ.!:** ನಮ್ಮ ಜಲವಿದ್ಯುತ್, ನಂತರ ಸೌರಶಕ್ತಿ, ಹಸಿರು ಶಕ್ತಿ, ವಿಶೇಷವಾಗಿ ಜೈವಿಕ ಇಂಧನದ ಅಭಿವೃದ್ಧಿಗೆ ನಾವು ಹೆಚ್ಚಿನ ಆದ್ಯತೆ ನೀಡುತ್ತಿದ್ದೇವೆ ಎಂದು ಗಡ್ಕರಿ ಹೇಳಿದರು. ಸೌರ ಶಕ್ತಿಯು ನಮ್ಮೆಲ್ಲರಿಗೂ ಪ್ರಮುಖ ಮೂಲಗಳಲ್ಲಿ ಒಂದಾಗಿದೆ. ಭಾರತವು ಎಲೆಕ್ಟ್ರಿಕ್ ಬಸ್ಗಳ ಕೊರತೆಯನ್ನು ಎದುರಿಸುತ್ತಿದೆ ಎಂದು ಅವರು ಹೇಳಿದರು. ನಮ್ಮ ದೇಶಕ್ಕೆ ಒಂದು ಲಕ್ಷ ಎಲೆಕ್ಟ್ರಿಕ್ ಬಸ್ಗಳ ಅಗತ್ಯವಿದೆ, ಆದರೆ ನಮ್ಮ ಸಾಮರ್ಥ್ಯ 50,000 ಬಸ್ಗಳು. ಕಂಪನಿಗಳು ತಮ್ಮ ಕಾರ್ಖಾನೆಗಳನ್ನು ವಿಸ್ತರಿಸಲು ಇದು ಸರಿಯಾದ ಸಮಯ ಎಂದು ಅವರು ವಿನಂತಿಸುತ್ತಾರೆ.



# ಗಗನಯಾತ್ರಿ ಸುನೀತಾ ವಿಲಿಯಮ್ಸ್ ಮರಳುವ ದಿನಾಂಕ ಮತ್ತೆ ಮುಂದೂಡಿಕೆ



**ವಾಷಿಂಗ್ಟನ್:** ನಾಸಾ ಗಗನಯಾತ್ರಿಗಳಾದ ಭಾರತೀಯ ಮೂಲದ ಸುನೀತಾ ವಿಲಿಯಮ್ಸ್ ಹಾಗೂ ಬುಚ್ ವಿಲ್ಮೋರ್ ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರ ದಲ್ಲೇ ಬಾಕಿಯಾಗಿದ್ದು, ಭೂಮಿಗೆ ಮರಳುವುದು ಇನ್ನಷ್ಟು ತಡವಾಗಲಿದೆ. ಕನಿಷ್ಠ 2025ರ ಮಾರ್ಚ್ ತನಕ ಅವರು ಅಲ್ಲಿಯೇ ಉಳಿಯಬೇಕಾಗುತ್ತದೆ ಎಂದು ನಾಸಾ ತಿಳಿಸಿದೆ. ಈ ಹಿಂದೆ ಅವರು 2025ರ ಫೆಬ್ರವರಿಯಲ್ಲಿ ಭೂಮಿಗೆ ಹಿಂದಿರುಗಲಿದ್ದಾರೆ ಎನ್ನಲಾಗಿತ್ತು.

4 ಸದಸ್ಯರ ಕ್ರೂ –10 ಮಿಷನ್ ಬಾಹ್ಯಾಕಾಶ ನಿಲ್ದಾಣವನ್ನು ತಲುಪಿದ ನಂತರ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರು ಗಗನಯಾತ್ರಿ ನಿಕ್ ಹೇಗ್ ಮತ್ತು ರಷ್ಯಾದ ಗಗನಯಾತ್ರಿ



ಅಲೆಕ್ಸಾಂಡರ್ ಗೋರ್ಬುನೋವ್ ಅವರೊಂದಿಗೆ ಭೂಮಿಗೆ ಮರಳಲಿದ್ದಾರೆ ಎಂದು ನಾಸಾ ತಿಳಿಸಿದೆ. ಈ ಮಿಷನ್ 2025ರ ಮಾರ್ಚ್ ಕೊನೆಯಲ್ಲಿ ಪ್ರಾರಂಭವಾಗುವ ನಿರೀಕ್ಷೆಯಿದೆ. ಇದನ್ನು ಈ ಹಿಂದೆ ಫೆಬ್ರವರಿಯಲ್ಲಿ ಪ್ರಾರಂಭಿಸಲು ನಿರ್ಧರಿಸಲಾಗಿತ್ತು. ಸ್ಟಾರ್ಲೈನರ್ ಬಾಹ್ಯಾಕಾಶ ನೌಕೆಯಲ್ಲಿನ ತಾಂತ್ರಿಕ ದೋಷದಿಂದಾಗಿ ಇಬ್ಬರು ಗಗನಯಾತ್ರಿಗಳನ್ನು ಹಿಂದಿರುಗಿಸುವ ಕಾರ್ಯಾಚರಣೆಯನ್ನು ಹಲವು ಬಾರಿ ಮುಂದೂಡಬೇಕಾಯ್ತು. 2024ರ ಆ. 24ರಂದು ನಾಸಾ ಸುನೀತಾ ವಿಲಿಯಮ್ಸ್ ಮತ್ತು ವಿಲ್ಮೋರ್ ಕ್ರ್ಯೂ 9 ಮಿಷನ್ನ ಭಾಗವಾಗಲಿದ್ದಾರೆ ಎಂದು ಘೋಷಿಸಿತ್ತು. ಅದರಂತೆ 2025ರ ಫೆಬ್ರವರಿಯಲ್ಲಿ ಸ್ಪೇಸ್‌ಎಕ್ಸ್‌ನ ಕೆ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯ ಮೂಲಕ 8 ತಿಂಗಳ ನಂತರ ಇವರು ಹಿಂತಿರುಗಲಿದ್ದಾರೆ ಎಂದು ಹೇಳಿತ್ತು. ಇದೀಗ ಕ್ರ್ಯೂ–9 ಬದಲು ಕ್ರ್ಯೂ–10 ಮಿಷನ್ ಮೂಲಕ ಸುನೀತಾ ವಿಲಿಯಮ್ಸ್ ಮತ್ತು ಬುಚ್ ವಿಲ್ಮೋರ್ ಅವರನ್ನು ಮರಳಿ ಕರೆತರಲು ನಿರ್ಧರಿಸಿರುವುದರಿಂದ ಈ ಕಾರ್ಯಾಚರಣೆ ಮಾರ್ಚ್‌ಗೆ ಮುಂದೂಡಲಾಗಿದೆ ಎಂದು ನಾಸಾ ಹೇಳಿದೆ. ಅದಾಗ್ಯೂ ಖಚಿತ ದಿನಾಂಕವನ್ನೂ ಪ್ರಕಟಿಸಿಲ್ಲ. ಹೊಸ ಡ್ರ್ಯಾಗನ್ ಬಾಹ್ಯಾಕಾಶ ನೌಕೆಯನ್ನು ತಯಾರಿಸಲು ಸ್ಪೇಸ್‌ಎಕ್ಸ್‌ಗೆ ಹೆಚ್ಚಿನ ಸಮಯ ಬೇಕಾಗಿರುವುದರಿಂದ ಈ ವಿಳಂಬ ಕಂಡು ಬಂದಿದೆ ಎನ್ನಲಾಗಿದೆ.

## ಸಂಸತ್ತಿನ ಗೇಟ್‌ಗಳಲ್ಲಿ ಪ್ರತಿಭಟನೆಗಳ ನಿಷೇಧಿಸಿದ ಸ್ಪೀಕರ್

**ದೆಹಲಿ:** ರಾಜಕೀಯ ಪ್ರತಿಭಟನೆಗಳು ವಿಕೋಪಕ್ಕೆ ತಿರುಗಿದ ನಂತರ ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ಗುರುವಾರ ಸಂಸತ್ತಿನ ಯಾವುದೇ ಗೇಟ್‌ಗಳಲ್ಲಿ ಸಂಸದರು ಮತ್ತು ರಾಜಕೀಯ ಪಕ್ಷಗಳ ಪ್ರತಿಭಟನಾ ಪ್ರದರ್ಶನಗಳನ್ನು ನಿಷೇಧಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಯಾವುದೇ ರಾಜಕೀಯ ಪಕ್ಷಗಳು, ಸಂಸದರು ಅಥವಾ ಸದಸ್ಯರ ಗುಂಪುಗಳು ಸಂಸತ್ ಭವನದ ಕಟ್ಟಡದ ಗೇಟ್‌ಗಳಲ್ಲಿ ಯಾವುದೇ ಧರಣಿ ಮತ್ತು ಪ್ರತಿಭಟನೆ ನಡೆಸದಂತೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ ಎಂದು ಸಂಸತ್ತಿನ ಮೂಲಗಳು ತಿಳಿಸಿವೆ ಎಂದು ವರದಿಯಾಗಿದೆ.

ಸಂಸತ್ತಿನ ಆವರಣದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮತ್ತು ಕಾಂಗ್ರೆಸ್ ನೇತೃತ್ವದ ಇಂಡಿಯಾ ಮೈತ್ರಿಕೂಟದ ಪಕ್ಷಗಳು ಬಿ ಆರ್ ಅಂಬೇಡ್ಕರ್ ಅವರನ್ನು ಅವಮಾನಿಸಿದ ಆರೋಪದ ಮೇಲೆ ಪ್ರತಿಭಟನೆ ನಡೆದ ಬೆನ್ನಿಗೇ ಈ ಸೂಚನೆಗಳು ಬಂದಿವೆ.




# ನೆಲ್ಲೂರಿನಲ್ಲಿ ಝೀಕಾ ವೈರಸ್ ಆತಂಕ

**ನೆಲ್ಲೂರು (ಆಂಧ್ರ ಪ್ರದೇಶ):** ಜಿಲ್ಲೆಯ ಮರಿಪಡು ಮಂಡಲದ ವೆಂಕಟಪುರಂ ಗ್ರಾಮದ 6 ವರ್ಷದ ಬಾಲಕನಲ್ಲಿ ಝೀಕಾ ಸೋಂಕು ಕಾಣಿಸಿಕೊಂಡಿದ್ದು, ಇದೀಗ ಆತಂಕ ಮೂಡಿದೆ. ಮುಂಬೈನ ಖಾಸಗಿ ಲ್ಯಾಬ್ನಲ್ಲಿ ನಡೆಸಿದ ಪರೀಕ್ಷೆಯಲ್ಲಿ ಸೋಂಕು ದೃಢಪಟ್ಟಿದ್ದು, ಮತ್ತೊಮ್ಮೆ ಖಾತ್ರಿ ಪಡಿಸಿಕೊಳ್ಳುವ ಉದ್ದೇಶದಿಂದು ಬಾಲಕನ ರಕ್ತ ಮತ್ತು ಮೂತ್ರದ ಸೋಂಕನ್ನು ಪುಣೆಯ ವೈರಲಾಜಿ ಸಂಸ್ಥೆ ಸಹಯೋಜನೆಯ ಸಂಸ್ಥೆಗೆ ಕಳುಹಿಸಲಾಗಿದೆ.

ವಿಶ್ವ ಆರೋಗ್ಯ ಸಂಸ್ಥೆಗೆ ಕೂಡ ಇದನ್ನು ತಿಳಿಸಲಾಗಿದ್ದು, ರಾಜ್ಯ ವೈದ್ಯಕೀಯ ಮತ್ತು ಆರೋಗ್ಯ ಇಲಾಖೆಯಿಂದ ಪ್ರತಿಕ್ರಿಯೆಗೆ ತಿಳಿಸಿದೆ.

ನವೆಂಬರ್ 30ರಂದು ಬಾಲಕನಿಗೆ ಮೊದಲ ಬಾರಿಗೆ ಜ್ವರ ಬಂದಿತ್ತು.



ಇದಾದ ಬಳಿಕ ಡಿಸೆಂಬರ್ 7ರಂದು ಮತ್ತೆ ಜ್ವರ ಕಾಣಿಸಿಕೊಂಡಿದ್ದು, ಆತನಿಗೆ ಮೂರ್ಛೆ ಸಮಸ್ಯೆ ಮತ್ತು ತ್ವಚೆಯಲ್ಲಿ ದದ್ದು ಕಾಣಿಸಿಕೊಂಡಿದೆ. ಆರಂಭದಲ್ಲಿ ನೆಲ್ಲೂರಿನ ಎರಡು ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿದ್ದು, ವೈದ್ಯರು ಸೋಂಕಿನ ಅನುಮಾನದ ಮೇರೆಗೆ ಪರೀಕ್ಷೆಗೆ ಮಾದರಿಯನ್ನು ಮುಂಬೈಗೆ ಕಳುಹಿಸಿದ್ದರು. ಅಲ್ಲಿ ಝೀಕಾ ಸೋಂಕು ಲಕ್ಷಣ ಪತ್ತೆಯಾಗಿದ್ದು, ಬಾಲಕನನ್ನು ಚೆನ್ನೈನ ಇಗ್ಮೋರ್ ಆಸ್ಪತ್ರೆಗೆ ಶಿಫಾರಸು ಮಾಡಲಾಗಿದ್ದು, ಸದ್ಯ ಬಾಲಕ ಚಿಕಿತ್ಸೆ ಪಡೆಯುತ್ತಿದ್ದಾನೆ.

ಡಬ್ಲ್ಯೂಹೆಚ್ಓ ಎಚ್ಚರಿಕೆ ಹಿನ್ನೆಲೆ, ರಾಜ್ಯ ಆರೋಗ್ಯ ಇಲಾಖೆ ತಂಡ ಕೂಡ ವಿಜಯವಾಡದಿಂದ ತೆರಳಿದೆ. ಉಪ ನಿರ್ದೇಶಕ ರಾಮನಾಥ್ ರಾವ್ ಗ್ರಾಮವನ್ನು ತಲುಪಿದ್ದಾರೆ. ಡಬ್ಲ್ಯೂಹೆಚ್ಓ ಮೇಲ್ವಿಚಾರಕ ಅಧಿಕಾರಿ ಮೌನಿಕಾ ಮತ್ತು ರಾಜ್ಯ ಸೋಂಕುತಜ್ಞ ಕೊಂಡರೆಡ್ಡಿ ಹಾಗೂ ಸ್ಥಳೀಯ ಆರೋಗ್ಯ ಅಧಿಕಾರಿಗಳು ಭೇಟಿ ನೀಡಿದ್ದರು.

## ಅಮೆರಿಕದ 51ನೇ ರಾಜ್ಯವಾಗಬೇಕೆಂಬುದು ಕೆನಡಾ ಜನ ಬಯಸುತ್ತಾರೆ: ಟ್ರಂಪ್

**ವಾಷಿಂಗ್ಟನ್ ಡಿಸಿ:** ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕೆನಡಾವನ್ನು ಗೇಲಿ ಮಾಡಿದ್ದಾರೆ. ಕೆನಡಾ ಅಮೆರಿಕದ 51 ನೇ ರಾಜ್ಯವಾಗುವುದನ್ನು ಅನೇಕ ಕೆನಡಿಯನ್ನರು ಬಯಸುತ್ತಿದ್ದಾರೆ ಎಂದು ಹೇಳಿದ್ದಾರೆ. ಹೀಗೆನಾದರೂ ಆದರೆ, ಕಡಿಮೆ ತೆರಿಗೆ ಮತ್ತು ಮಿಲಿಟರಿ ರಕ್ಷಣೆಯ ಮೂಲಕ ಕೆನಡಿಯನ್ನರಿಗೆ ಪ್ರಯೋಜನ ನೀಡುತ್ತದೆ ಎಂದು ಟ್ರಂಪ್ ಅಭಿಪ್ರಾಯಪಟ್ಟಿದ್ದಾರೆ. ಈ ಕಲ್ಪನೆಯನ್ನು ಶ್ರೇಷ್ಠ ಎಂದು ವಿವರಿಸಿದ ಅವರು, ಅನೇಕ ಕೆನಡಿಯನ್ನರು ಈ ಪ್ರಸ್ತಾಪವನ್ನು ಬೆಂಬಲಿಸುತ್ತಾರೆ ಎಂದು ಅವರು ಪ್ರತಿಪಾದಿಸಿದ್ದಾರೆ. ಟ್ರೂತ್ ಸೋಷಿಯಲ್ನಲ್ಲಿ ತಮ್ಮ ಪೋಸ್ಟ್ನಲ್ಲಿ ಟ್ರಂಪ್ ಹೀಗೆ ಬರೆದಿದ್ದಾರೆ, ನಾವು ಕೆನಡಾಕ್ಕೆ ವರ್ಷಕ್ಕೆ 100,000,000 ಕ್ಕಿಂತ ಹೆಚ್ಚು ಸಬ್ಸಿಡಿಯನ್ನು ಏಕೆ ನೀಡುತ್ತೇವೆ ಎಂದು ಯಾರೂ ಉತ್ತರಿಸುವುದಿಲ್ಲ? ಇದು ಅರ್ಥ ಹೀನ ಎಂದಿದ್ದಾರೆ. ಅನೇಕ ಕೆನಡಿಯನ್ನರು ಕೆನಡಾ ಅಮೆರಿಕದ 51 ನೇ ರಾಜ್ಯವಾಗಬೇಕೆಂದು ಬಯಸುತ್ತಾರೆ. ಅವರು ತೆರಿಗೆಗಳು ಮತ್ತು ಮಿಲಿಟರಿ ರಕ್ಷಣೆಯ ಮೇಲೆ ಬೃಹತ್ ಪ್ರಮಾಣದಲ್ಲಿ ಉಳಿತಾಯ ಮಾಡುತ್ತಾರೆ. ಇದು ಉತ್ತಮ ಉಪಾಯ ಎಂದು ನಾನು ಭಾವಿಸುತ್ತೇನೆ. 51 ನೇ ರಾಜ್ಯ !!! ಎಂದು ಪೋಸ್ಟ್ ನಲ್ಲಿ ಸೇರಿಸಲಾಗಿದೆ. ಕೆನಡಾದ ಹಣಕಾಸು ಸಚಿವ ಮತ್ತು ಉಪ ಪ್ರಧಾನ ಮಂತ್ರಿ ಕ್ರಿಸ್ಟಿಯಾ ಫ್ರೀಲ್ಯಾಂಡ್ ಅವರ ರಾಜೀನಾಮೆ ನಂತರ ಕೆನಡಾದ ಆಡಳಿತ ಪಕ್ಷದಲ್ಲಿ ಆಗಿರುವ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಟ್ರಂಪ್ ಈ ಟೀಕಾ ಪ್ರಹಾರ ನಡೆಸಿದ್ದಾರೆ. ಅಧ್ಯಕ್ಷರಾಗಿ ಚುನಾಯಿತರಾಗಿರುವ ಟ್ರಂಪ್, ಕೆನಡಾದ ಪಿಎಂ ಜಸ್ಟಿನ್ ಟ್ರುಡೊ ಅವರನ್ನು ಕೆನಡಾದ ಗವರ್ನರ್ ಎಂದು ಕರೆದಿದ್ದಾರೆ. ಫ್ರೀಲ್ಯಾಂಡ್ ಅವರ ನಡವಳಿಕೆಯು ಕೆನಡಾದ ನಾಗರಿಕರ ಪರ ಉತ್ತಮ ನಿರ್ಧಾರಗಳನ್ನು ತೆಗೆದುಕೊಳ್ಳಲು ಅನುಕೂಲಕರವಲ್ಲ ಎಂದು ಟೀಕಿಸಿದ್ದಾರೆ.



## 11 ಉಗ್ರರನ್ನು ಹೊಡೆದುರುಳಿಸಿದ ಪಾಕ್ ಭದ್ರತಾ ಪಡೆ

**ಪೇಶಾವರ:** ವಾಯುವ್ಯ ಖೈಬರ್ ಪಖ್ತುನ್ಖ್ವಾ ಪ್ರಾಂತ್ಯದಲ್ಲಿ ನಡೆದ ಮೂರು ಪ್ರತ್ಯೇಕ ಕಾರ್ಯಾಚರಣೆಗಳಲ್ಲಿ ಪಾಕಿಸ್ತಾನದ ಭದ್ರತಾ ಪಡೆಗಳು 11 ಭಯೋತ್ಪಾದಕರನ್ನು ಹೊಡೆದುರುಳಿಸಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ

ಡಿಸೆಂಬರ್ 17 ಮತ್ತು 18 ರಂದು ಪ್ರಾಂತ್ಯದ ವಿವಿಧ ಪ್ರದೇಶಗಳಲ್ಲಿ ಈ ಕಾರ್ಯಾಚರಣೆಗಳು ನಡೆದಿವೆ ಎಂದು ಪಾಕಿಸ್ತಾನ ಸಶಸ್ತ್ರ ಪಡೆಗಳ ಮಾಧ್ಯಮ ವಿಭಾಗವಾದ ಇಂಟರ್–ಸರ್ವೀಸಸ್ ಪಬ್ಲಿಕ್ ರಿಲೇಶನ್ಸ್ (ಐಎಸ್ಪಿಆರ್) ತಿಳಿಸಿದೆ.

ಈ ಪ್ರದೇಶದಲ್ಲಿ ಭಯೋತ್ಪಾದಕರು ಇರುವ ಬಗ್ಗೆ ಮಾಹಿತಿ ಪಡೆದ ನಂತರ ಟ್ಯಾಂಕ್ ಜಿಲ್ಲೆಯಲ್ಲಿ ಮೊದಲ ಕಾರ್ಯಾಚರಣೆ ನಡೆಸಲಾಯಿತು.

ಈ ಕಾರ್ಯಾಚರಣೆಯಲ್ಲಿ ಏಳು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ.

ಎರಡನೇ ಕಾರ್ಯಾಚರಣೆ ಉತ್ತರ ವಜಿರಿಸ್ತಾನ್ ಜಿಲ್ಲೆಯ ದತ್ತಾ ಖೇಲ್ನಲ್ಲಿ ನಡೆದಿದ್ದು, ಅಲ್ಲಿ ಇಬ್ಬರು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ.

ಮೊಹಮಂಡ್ ಜಿಲ್ಲೆಯಲ್ಲಿ ಇನ್ನೂ ಇಬ್ಬರು ಭಯೋತ್ಪಾದಕರು ಸಾವನ್ನಪ್ಪಿದ್ದಾರೆ.

ಹತ್ಯೆಗೀಡಾದ ಭಯೋತ್ಪಾದಕರಿಂದ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ.



2024 ರ ಮೂರನೇ ತ್ರೈಮಾಸಿಕದಲ್ಲಿ (ಜುಲೈ–ಸೆಪ್ಟೆಂಬರ್) ಪಾಕಿಸ್ತಾನದಲ್ಲಿ ಭಯೋತ್ಪಾದಕ ಹಿಂಸಾಚಾರ ಮತ್ತು ಭಯೋತ್ಪಾದನಾ ನಿಗ್ರಹ ಅಭಿಯಾನಗಳ ಸಾವುನೋವುಗಳಲ್ಲಿ ತೀವ್ರ ಹೆಚ್ಚಳ ಕಂಡುಬಂದಿದೆ, ಹಿಂಸಾಚಾರದಲ್ಲಿ ಶೇಕಡಾ 90 ರಷ್ಟು ಏರಿಕೆಯಾಗಿದೆ ಎಂದು ಸೆಂಟರ್ ಫಾರ್ ರಿಸರ್ಚ್ ಅಂಡ್ ಸೆಕ್ಯುರಿಟಿ ಸ್ಟಡೀಸ್ (ಸಿಆರ್‌ಎಸ್‌ಎಸ್) ಬಿಡುಗಡೆ ಮಾಡಿದ ವರದಿ ತಿಳಿಸಿದೆ.

ನಾಗರಿಕರು, ಭದ್ರತಾ ಸಿಬ್ಬಂದಿ ಮತ್ತು ಕಾನೂನುಬಾಹಿರರು ಸೇರಿದಂತೆ ಒಟ್ಟು 722 ಜನರು ಕೊಲ್ಲಲ್ಪಟ್ಟರು ಮತ್ತು 615 ಜನರು ಗಾಯಗೊಂಡರು.

## ಬಿಪಿನ್ ರಾವತ್ ಇದ್ದ ಹೆಲಿಕಾಪ್ಟರ್ ಪತನಕ್ಕೆ ಮಾನವ ಲೋಪವೇ ಕಾರಣ

**ನವದೆಹಲಿ:** ಭಾರತೀಯ ಸೇನಾ ಪಡೆಗಳ ಮುಖ್ಯಸ್ಥ ಬಿಪಿನ್ ರಾವತ್ ಅವರು ಪ್ರಯಾಣಿಸುತ್ತಿದ್ದ ಹೆಲಿಕಾಪ್ಟರ್ ಪತನಕ್ಕೆ ಮಾನವ ಲೋಪವೇ (ವಿಮಾನ ಸಿಬ್ಬಂದಿ) ಕಾರಣ ಎಂದು ರಕ್ಷಣಾ ಸ್ಥಾಯಿ ಸಮಿತಿಯು ತನ್ನ ವರದಿಯಲ್ಲಿ ಉಲ್ಲೇಖಿಸಿದೆ.

ಚೀಫ್ ಆಫ್ ಡಿಫೆನ್ಸ್ ಸ್ಟಾಫ್ ಜನರಲ್ ಬಿಪಿನ್ ರಾವತ್ ಅವರು 2021ರ ಡಿಸೆಂಬರ್ 8 ರಂದು ಪ್ರಯಾಣಿಸುತ್ತಿದ್ದ ಒ–17 ಗಿ5 ಹೆಲಿಕಾಪ್ಟರ್ ಪತನಗೊಂಡಿತ್ತು. ಈ ಅಪಘಾತದಲ್ಲಿ ಜನರಲ್ ರಾವತ್ ಹಾಗೂ ಅವರ ಪತ್ನಿ ಮಧುಲಿಕಾ ರಾವತ್ ಸೇರಿದಂತೆ ಒಟ್ಟು 12 ಜನರು ಸಾವನ್ನಪ್ಪಿದರು. ತಮಿಳುನಾಡಿನ ಕೂನೂರು ಬಳಿಯ ಪರ್ವತಗಳಲ್ಲಿ ಹೆಲಿಕಾಪ್ಟರ್ ಪತನಗೊಂಡಿತ್ತು. ಮೂರು ವರ್ಷಗಳ ನಂತರ, ನಿನ್ನೆ ಹಿಂದಿನ ದಿನ ಲೋಕಸಭೆಯಲ್ಲಿ ಮಂಡಿಸಲಾದ ರಕ್ಷಣಾ ಸ್ಥಾಯಿ ಸಮಿತಿಯ ವರದಿಯು ಒ–17 ಅಪಘಾತವು 'ಮಾನವ ದೋಷ (ಏರ್ಕ್ರೂ)' ಕಾರಣದಿಂದಾಗಿ ಸಂಭವಿಸಿದೆ ಎಂದು ಹೇಳಿದೆ.



2017 ರಿಂದ 2022 ರ ವರೆಗೆ ಭಾರತೀಯ ವಾಯು ಸೇನೆಯಲ್ಲಿ ಒಟ್ಟು 34 ಅಪಘಾತಗಳು ಸಂಭವಿಸಿವೆ ಎಂದು 18 ನೇ ಲೋಕಸಭೆಯ ಸ್ಥಾಯಿ ಸಮಿತಿ ವರದಿ ಹೇಳಿದೆ. 2021–2022 ಅವಧಿಯಲ್ಲಿ ಒಟ್ಟು ಒಂಬತ್ತು ಅಪಘಾತಗಳು ಸಂಭವಿಸಿವೆ ಎಂದು ವರದಿ ತಿಳಿಸಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಗೌತಮಿ ಪಕ್ಷಪಾತಿ ಎಂದು ದೂರಿದ ಮೋಕ್ಷಿತಾ



ದೊಡ್ಮನೆಯ ಆಟ ದಿನದಿಂದ ದಿನಕ್ಕೆ ರಂಗೇರುತ್ತಿದೆ. 80 ದಿನಗಳನ್ನು ಪೂರೈಸಿ ಮುನ್ನುಗ್ಗುತ್ತಿದೆ. ಸ್ಪರ್ಧಿಗಳ ಅಳಿವು ಉಳಿವಿಗಾಗಿ ಹೋರಾಟ ನಡೆಯುತ್ತಿದೆ. ಹೀಗಿರುವಾಗ ಟಾಸ್ಕ್‌ವೊಂದರಲ್ಲಿ ಮನೆಯ ಪಕ್ಷಪಾತಿ ಯಾರು? ಎಂದು ಕೇಳಿದ್ರೆ, ಗೌತಮಿ ಹೆಸರು ಹೇಳಿ ಮೋಕ್ಷಿತಾ ನೀರಿಗೆ ತಳ್ಳಿದ್ದಾರೆ. ಇದನ್ನು ನೋಡಿ ಮನೆ ಮಂದಿ ಶಾಕ್ ಆಗಿದ್ದಾರೆ.

ಮಂಜು, ಮೋಕ್ಷಿತಾ, ಗೌತಮಿ ನಡುವಿನ ಸ್ನೇಹಕ್ಕೆ ಬ್ರೇಕ್ ಬಿದ್ದು ಹಲವು ದಿನಗಳಾಗಿದೆ. ಮೂವರು ಜಿದ್ದಿಗೆ ಬಿದ್ದಿದ್ದು ಇದೆ. ಹೀಗಿರುವಾಗ ಗೌತಮಿ ಮೇಲೆ ಮೋಕ್ಷಿತಾ ಸೇಡು ತೀರಿಸಿಕೊಳ್ಳುವ ಕೆಲಸ ಶುರು ಮಾಡಿದ್ದಾರೆ. ಸದ್ಯ ವಾಹಿನಿ ಹಂಚಿಕೊಂಡ ಪ್ರೋಮೋದಲ್ಲಿ 'ಬಿಗ್ ಬಾಸ್' ಟಾಸ್ಕ್‌ವೊಂದರಲ್ಲಿ ನೀಡಿದ್ದಾರೆ. ಪಕ್ಷಪಾತಿ ಹಾಗೂ ನಿರ್ಧಾರ ತೆಗೆದುಕೊಳ್ಳುವ ಅಶಕ್ತ, ಕೊಟ್ಟ ಮಾತನ್ನು ಉಳಿಸಿಕೊಳ್ಳುವಲ್ಲಿ ಅಶಕ್ತ, ಜನ ನಿರ್ವಹಣೆಯಲ್ಲಿ ಅಶಕ್ತ ಎಂಬ ಆಯ್ಕೆಗೆ ಸ್ಪರ್ಧಿಗಳನ್ನು ಸೂಚಿಸುವಂತೆ 'ಬಿಗ್ ಬಾಸ್' ಸೂಚನೆ ನೀಡಿದ್ದಾರೆ. ಟಾಸ್ಕ್ ಮುಂದುವರಿದ ಭಾಗವಾಗಿ ತಾವು ತೆಗೆದುಕೊಂಡ ವ್ಯಕ್ತಿಯ ಹೆಸರನ್ನು ಹೇಳಿ, ಅದಕ್ಕೆ ಸೂಕ್ತ ಕಾರಣ ನೀಡಿ ಸ್ವಿಮ್ಮಿಂಗ್ ಪೂಲ್‌ಗೆ ತಳ್ಳಬೇಕು ಎಂದು ಆದೇಶ ನೀಡಿದರು.

ಅದರಂತೆಯೇ ಮೋಕ್ಷಿತಾ, ಅವರು ನಿರ್ಧಾರಗಳನ್ನು ತೆಗೆದುಕೊಳ್ಳುವಲ್ಲಿ ಅಶಕ್ತ ಸ್ಥಾನಕ್ಕೆ ಗೌತಮಿ ಹೆಸರನ್ನು ತಿಳಿಸಿದ್ದಾರೆ. ಇದೇ ವಿಚಾರಕ್ಕೆ ಇಬ್ಬರ ನಡುವೆ ಮತ್ತೆ ವಾಕ್ಸಮರ ನಡೆದಿದೆ. ನಮ್ಮ ಮೂರು ಜನರ ಫ್ರೆಂಡ್‌ಶಿಪ್ ಕಡೆವರೆಗೂ ಕಾಪಾಡುತ್ತೇನೆ ಎಂದಿದ್ರಿ, ಎಂದ ಮೋಕ್ಷಿತಾಗೆ ನೀವು ಒಮ್ಮೆ ನಮ್ಮಿಂದ ದೂರಾದ ಮೇಲೆ ಆಟದ ಸಲುವಾಗಿ ನಿಮ್ಮಲ್ಲಿ ಸಾಕಷ್ಟು ಬದಲಾವಣೆ ಆಗಿದೆ ಎಂದು ಗೌತಮಿ ತಿರುಗೇಟು ನೀಡಿದರು. ಅದಕ್ಕೆ ನಿಮಗೆ ಮಂಜುರವರು ಬೇಜಾರ್ ಆದರೆ ಫೀಲ್ ಆಗುತ್ತದೆ. ಅದೇ ಮೋಕ್ಷಿತಾಗೆ ಫೀಲ್ ಆದರೆ ಅಲ್ಲಿ ಗೌತಮಿ ಇರುತ್ತಿರಲಿಲ್ಲ ಎಂದು ಮೋಕ್ಷಿತಾ ತಿವಿದಿದ್ದಾರೆ. ಅವರ ಮಾತಿಗೆ ನನಗೆ ನಿಮ್ಮ ಹಾಗೆ ಯೋಚನೆ ಮಾಡೋಕೆ ಬರಲ್ಲ. ಇಂದಿಗೂ ಈ ಸ್ನೇಹವನ್ನು ನಿಭಾಯಿಸುತ್ತಿರೋದು ನಾನು ಎಂದಿದ್ದಾರೆ ಗೌತಮಿ. ನಂತರ ಗೌತಮಿರನ್ನು ಮೋಕ್ಷಿತಾ ನೀರಿಗೆ ತಳ್ಳಿದ್ದಾರೆ. ಇದರ ಜೊತೆಗೆ ಪಕ್ಷಪಾತಿ ವ್ಯಕ್ತಿಗಳ ಸಾಲಿನಲ್ಲಿ ಹೆಚ್ಚು ಮಂದಿ ಚೈತ್ರಾ ಕುಂದಾಪುರ ಹೆಸರನ್ನು ಟಾರ್ಗೆಟ್ ಮಾಡಿದ್ದಾರೆ.



# ಸಿನಿಮಾ ಚಾನ್ಸ್‌ಗಾಗಿ ಸೆಕ್ಸ್ ಮಾಡಿದ್ದೀರಾ? ಎಂದವನಿಗೆ ಚೈತ್ರಾ ಆಚಾರ್ ತಿರುಗೇಟು

ಕನ್ನಡದ 'ಟೋಬಿ' ಬ್ಯೂಟಿ ಚೈತ್ರಾ ಆಚಾರ್‌ಗೆ ಕನ್ನಡ ಮತ್ತು ತಮಿಳು ಚಿತ್ರರಂಗದಿಂದ ಅವಕಾಶಗಳು ಅರಸಿ ಬರುತ್ತಿವೆ. ಎರಡು ಕಡೆ ನಟಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಸೋಶಿಯಲ್ ಮೀಡಿಯಾದಲ್ಲಿ ಸಿನಿಮಾ ಚಾನ್ಸ್‌ಗಾಗಿ ಸೆಕ್ಸ್ ಮಾಡಿದ್ದೀರಾ? ಎಂದವನಿಗೆ ಖಡಕ್ ತಿರುಗೇಟು ಕೊಟ್ಟಿದ್ದಾರೆ.



ತಮ್ಮ ಇನ್ಸ್ಟಾಗ್ರಾಂ ಖಾತೆಯಲ್ಲಿ ನಟಿ ಅಭಿಮಾನಿಗಳ ಪ್ರಶ್ನೆಗೆ ಉತ್ತರಿಸಲು ಆಕ್ಸ್ ಮಿ ಸೆಷನ್ ಮಾಡಿದ್ದಾರೆ. ಈ ವೇಳೆ ಅಭಿಮಾನಿಯೊಬ್ಬ, ನೀವು ಸಿನಿಮಾ ಅವಕಾಶಕ್ಕಾಗಿ ಸೆಕ್ಸ್ ಮಾಡಿದ್ದೀರಾ? ಎಂದು ನೇರವಾಗಿ ಪ್ರಶ್ನೆ ಕೇಳಿದ್ದಾರೆ. ಅದಕ್ಕೆ ನಟಿ ತಕ್ಕ ಉತ್ತರವನ್ನೇ ನೀಡಿದ್ದಾರೆ. ಅವಕಾಶಕ್ಕಾಗಿ ಎಂದು ಪಲ್ಲಂಗ ಏರಿಲ್ಲ. ಯಾಕೆಂದರೆ ನಾನು ಪ್ರತಿಭಾವಂತೆ. ಹಾಗಾಗಿ ಸೆಕ್ಸ್ ಮಾಡಿ ಅವಕಾಶ ಪಡೆದುಕೊಳ್ಳಬೇಕು ಎಂಬ ಅಗತ್ಯ ನನಗಿಲ್ಲ ಎಂದಿದ್ದಾರೆ.

ಬಳಿಕ ಮತ್ತೊಬ್ಬರು, ನಿಮ್ಮ ಕನ್ಯತ್ವ ಹೇಗೆ ಕಳೆದುಕೊಂಡ್ರಿ? ಮತ್ತು ಆ ಅನುಭವ ಹೇಗಿತ್ತು ಎಂದಿದ್ದಾರೆ. ಅದಕ್ಕೆ ನಟಿ, ನಿಮ್ಮ ಮನೆಯಲ್ಲಿ ನಿಮ್ಮ ತಾಯಿ, ತಂಗಿ ಇದ್ದಾರೆ ಅಲ್ಲವೇ? ಅವರನ್ನೇ ಕೇಳಿ. ಇದರ ಪ್ರೋಸೆಸ್ ಹೇಗಿತ್ತು? ಎಂದು ಕೇಳಿ ಜೊತೆಗೆ ಡೆಮೋ ತೋರಿಸಲು ಹೇಳಿ ಅಣ್ಣ. ಅದನ್ನು ನೀವು ಹತ್ತಿರದಿಂದ ನೋಡಬಹುದು ಎಂದು ತಕ್ಕ ಉತ್ತರ ಕೊಟ್ಟಿದ್ದಾರೆ ಚೈತ್ರಾ. ನಟಿಯ ನಡೆಗೆ ಅಭಿಮಾನಿಗಳು ಮೆಚ್ಚುಗೆ ಸೂಚಿಸಿದ್ದಾರೆ.

ಅಂದಹಾಗೆ, ಕನ್ನಡದ ಜೊತೆ ತಮಿಳಿನ ನಟ ಸಿದ್ಧಾರ್ಥ್‌ಗೆ ನಾಯಕಿಯಾಗಿ ಚೈತ್ರಾ ನಟಿಸುತ್ತಿದ್ದಾರೆ. 'ಸಪ್ತಸಾಗರದಾಚೆ ಎಲ್ಲೋ ಸೈಡ್ ಬಿ' ಮತ್ತು 'ಟೋಬಿ' ಚಿತ್ರದಲ್ಲಿನ ಚೈತ್ರಾ ನಟನೆಗೆ ಅಭಿಮಾನಿಗಳಿಂದ ಭೇಷ್ ಎನಿಸಿಕೊಂಡಿದ್ದಾರೆ.



# ಕೀರ್ತಿ ಸುರೇಶ್ ಮದುವೆ ಸಂಭ್ರಮದಲ್ಲಿ ವಿಜಯ್- ಫೋಟೋ ಹಂಚಿಕೊಂಡ ನಟಿ

ಸೌತ್ ನಟಿ ಕೀರ್ತಿ ಸುರೇಶ್ ಡಿ.12ರಂದು ಆಂಟೋನಿ ಜೊತೆ ಗೋವಾದಲ್ಲಿ ಅದ್ಧೂರಿಯಾಗಿ ಮದುವೆಯಾದರು. ಈ ಸಂಭ್ರಮದಲ್ಲಿ ಸ್ಟಾರ್ ನಟ ದಳಪತಿ ವಿಜಯ್ ಕೂಡ ಭಾಗಿಯಾಗಿದ್ದರು. ನಟ ಭಾಗಿಯಾಗಿ ಶುಭಹಾರೈಸಿದ್ದರ ಬಗ್ಗೆ ಫೋಟೋ ಶೇರ್ ಮಾಡಿ ನಟಿ ಸಂತಸ ವ್ಯಕ್ತಪಡಿಸಿದ್ದಾರೆ.

'ನನ್ನ ಕನಸಿನ ಮದುವೆಯಲ್ಲಿ ನಮ್ಮ ಡ್ರೀಮ್ ಐಕಾನ್ ನಮ್ಮನ್ನು ಆಶೀರ್ವದಿಸಿದಾಗ' ಎಂದು ನಟಿ ಅಡಿಬರಹ ನೀಡಿ, ವಿಜಯ್ ಜೊತೆಗಿನ ಫೋಟೋ ಹಂಚಿಕೊಂಡಿದ್ದಾರೆ. ಅವರ ಉಪಸ್ಥಿತಿಯನ್ನು ನಟಿ ಸಂಭ್ರಮಿಸಿದ್ದಾರೆ.

ಇನ್ನೂ ವಿಜಯ್ ಮತ್ತು ಕೀರ್ತಿ ಸುರೇಶ್ ನಡುವೆ ಉತ್ತಮ ಒಡನಾಟವಿದೆ. 'ಭೈರವ' ಮತ್ತು 'ಸರ್ಕಾರ್' ಸಿನಿಮಾಗಳಲ್ಲಿ ವಿಜಯ್‌ಗೆ ಕೀರ್ತಿ ನಾಯಕಿಯಾಗಿ ನಟಿಸಿದರು.

ಅಂದಹಾಗೆ, ಆಂಟೋನಿ ತಟ್ಟಿಲ್ ಮತ್ತು ಕೀರ್ತಿ 15 ವರ್ಷಗಳಿಂದ ಪ್ರೀತಿಸುತ್ತಿದ್ದರು. ಇತ್ತೀಚೆಗೆ ಹಿಂದೂ ಮತ್ತು ಕ್ರೈಸ್ತ ಪದ್ಧತಿಯಂತೆ ಮದುವೆಯಾದರು. ಕುಟುಂಬಸ್ಥರು ಮತ್ತು ನಟಿಯ ಆಪ್ತ ಕಲಾವಿದರು ಈ ಮದುವೆಯಲ್ಲಿ ಭಾಗಿಯಾದರು.



## ನನ್ನ ಮಗ ಅವಮಾನವನ್ನು ಸಹಿಸಲಾಗದೆ ನಿವೃತ್ತಿ ಘೋಷಿಸಿದ್ದಾನೆ

# ಅಶ್ವಿನ್ ತಂದೆಯ ಸ್ಫೋಟಕ ಹೇಳಿಕೆ



ಟೀಂ ಇಂಡಿಯಾದ ಅನುಭವಿ ಆಫ್ ಸ್ಪಿನ್ನರ್ ರವಿಚಂದ್ರನ್ ಅಶ್ವಿನ್ ಅಂತರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಹೇಳುವ ಮೂಲಕ ಎಲ್ಲರನ್ನು ಅಚ್ಚರಿಗೊಳಿಸಿದ್ದರು. ಐದು ಪಂದ್ಯಗಳ ಟೆಸ್ಟ್ ಸರಣಿಗಾಗಿ ಆಸ್ಟ್ರೇಲಿಯಾಕ್ಕೆ ತೆರಳಿದ್ದ ಅಶ್ವಿನ್ ಸರಣಿಯ ಮಧ್ಯದಲ್ಲೇ ಈ ರೀತಿಯ ಹಠಾತ್ ನಿರ್ಧಾರ ತೆಗೆದುಕೊಂಡಿದ್ದರು. ಇನ್ನು ಸಾಕಷ್ಟು ಕ್ರಿಕೆಟ್ ಆಡುವ ಸಾಮರ್ಥ್ಯ ಹೊಂದಿದ್ದ ಅಶ್ವಿನ್ ಏಕಾಏಕಿ ಇಷ್ಟೊಂದು ದೊಡ್ಡ ನಿರ್ಧಾರ ತೆಗೆದುಕೊಂಡಿದ್ದು ಏಕೆ ಎಂಬುದು ಇದೀಗ ಎಲ್ಲರ ಮನದಾಳದಲ್ಲಿ ಮೂಡಿರುವ ಪ್ರಶ್ನೆ. ಆದರೆ, ಇದೆಲ್ಲದರ ನಡುವೆ ಅಶ್ವಿನ್ ಅವರ ತಂದೆ ದೊಡ್ಡ ಹೇಳಿಕೆ ನೀಡಿದ್ದು, ತಮ್ಮ ಮಗನನ್ನು ತಂಡದಲ್ಲಿ ನಿರಂತರವಾಗಿ ಅವಮಾನಿಸಲಾಗುತ್ತಿದೆ. ಹೀಗಾಗಿಯೇ ಅವನು ಆಸ್ಟ್ರೇಲಿಯಾ ಪ್ರವಾಸದ ಮಧ್ಯದಲ್ಲಿ ನಿವೃತ್ತಿ ಘೋಷಿಸಿದ್ದಾನೆ ಎಂದು ಹೇಳಿದ್ದಾರೆ. ಅಶ್ವಿನ್ ಅವರ ತಂದೆಯ ಈ ರೀತಿಯ ಹೇಳಿಕೆ ಭಾರತೀಯ ಕ್ರಿಕೆಟ್‌ನಲ್ಲಿ ಸಾಕಷ್ಟು ಸಂಚಲನ ಮೂಡಿಸಿದೆ.

**ಅಶ್ವಿನ್ ತಂದೆಯ ಸ್ಫೋಟಕ ಹೇಳಿಕೆ:** ಮಗನ ನಿವೃತ್ತಿಯ ನಿರ್ಧಾರದ ಬಳಿಕ ಸಿಎನ್‌ಎನ್ ನ್ಯೂಸ್ 18 ರೊಂದಿಗೆ ಮಾತನಾಡಿದ ಅಶ್ವಿನ್ ಅವರ ತಂದೆ, 'ಕೊನೆಯ ಗಳಿಗೆಯಲ್ಲಿ ನನ್ನ ಮಗನ ನಿವೃತ್ತಿ ನಿರ್ಧಾರದ ಬಗ್ಗೆ ನನಗೂ ತಿಳಿಯಿತು. ಅವನ ಮನಸ್ಸಿನಲ್ಲಿ ಏನಾಗುತ್ತಿದೆಯೋ ಗೊತ್ತಿಲ್ಲ. ನಾನಂತೂ ಸಂಪೂರ್ಣ ಸಂತೋಷದಿಂದ ಒಪ್ಪಿಕೊಂಡೆ. ಆದರೆ ಅವರು ನಿವೃತ್ತಿ ಘೋಷಿಸಿದ ರೀತಿ, ಒಂದು ಕಡೆ ನನಗೆ ತುಂಬಾ ಸಂತೋಷ ನೀಡಿದ್ದರೆ, ಮತ್ತೊಂದೆಡೆ ನನಗೆ ನೋವುಂಟು ಮಾಡಿದೆ. ಏಕೆಂದರೆ ಅವನು ತನ್ನ ಆಟವನ್ನು ಮುಂದುವರಿಸಬೇಕಾಗಿತ್ತು. ನಿವೃತ್ತಿ ಎಂಬುದು ಅಶ್ವಿನ್ ಅವರ ನಿರ್ಧಾರವಾಗಿದ್ದು, ನಾನು ಅದರಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಆದರೆ ಅವನು ನಿವೃತ್ತಿ ತೆಗೆದುಕೊಂಡ ರೀತಿಗೆ ಹಲವು ಕಾರಣಗಳಿರಬಹುದು. ಅದು ಅಶ್ವಿನ್‌ಗೆ ಮಾತ್ರ ಗೊತ್ತು, ಇದರಲ್ಲಿ ತಂಡದಲ್ಲಿ ಆತನಿಗೆ ಆಗುತ್ತಿದ್ದ ಅವಮಾನವೂ ಕಾರಣವಾಗಿರಬಹುದು.

ಅಶ್ವಿನ್ ಅವರ ನಿವೃತ್ತಿ ನಮಗೆ ಭಾವನಾತ್ಮಕ ಕ್ಷಣವಾಗಿದೆ ಏಕೆಂದರೆ ಅವರು 14-15 ವರ್ಷಗಳ ಕಾಲ ತಂಡದಲ್ಲಿ ಆಡಿದರು. ಹೀಗಾಗಿ ಅವರ ಹಠಾತ್ ನಿವೃತ್ತಿ ನಮಗೆ ಆಘಾತ ತಂದಿತು. ಆತನನ್ನು ನಿರಂತರವಾಗಿ ಅವಮಾನಿಸಲಾಗುತ್ತಿದೆ ಎಂದು ನಾವು ಭಾವಿಸುತ್ತೇವೆ. ಹೀಗಾಗಿ ಇದನ್ನೆಲ್ಲಾ ಇನ್ನೆಷ್ಟು ದಿನ ಸಹಿಸಿಕೊಳ್ಳಲು ಸಾಧ್ಯ ಹೇಳಿ? ಹಾಗಾಗಿಯೇ ಅಶ್ವಿನ್ ನಿವೃತ್ತಿ ನಿರ್ಧಾರ ಮಾಡಿರಬಹುದು ಎಂದು ಅಶ್ವಿನ್ ಅವರ ತಂದೆ ಹೇಳಿದ್ದಾರೆ.

**ಅಶ್ವಿನ್ ಮೇಲೆ ವಿಶ್ವಾಸ ಮೂಡಲಿಲ್ಲವೇ?:** ಪ್ರಸ್ತುತ ಅಶ್ವಿನ್ ಟೀಂ ಇಂಡಿಯಾದ ಬೆಸ್ಟ್ ಬೌಲರ್ ಆಗಿದ್ದರೂ, ವಿಶ್ವದಲ್ಲೇ ನಂಬರ್ 1 ಟೆಸ್ಟ್ ಬೌಲರ್ ಆಗಿದ್ದರೂ, ಟೀಂ ಇಂಡಿಯಾದಲ್ಲಿ ಅವರಿಗೆ ಸಿಗಬೇಕಾದ ಗೌರವ ಸಿಕ್ಕಿಲ್ಲ. ಎರಡೂ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ಗಳಲ್ಲಿ ಅಶ್ವಿನ್ ಅದ್ಭುತ ಪ್ರದರ್ಶನ ನೀಡಿದ್ದರು ಆದರೆ ಕೊನೆಯ ಫೈನಲ್ ಪಂದ್ಯದಲ್ಲಿ ಅಶ್ವಿನ್‌ಗೆ ಆಡುವ ಅವಕಾಶ ಸಿಗಲಿಲ್ಲ. ಈ ವಿಚಾರವನ್ನು ಮಾಜಿ ನಾಯಕ ಸುನಿಲ್ ಗವಾಸ್ಕರ್ ಕೂಡ ಪ್ರಸ್ತಾಪಿಸಿದ್ದರು. ನೀವು ವಿಶ್ವದ ನಂಬರ್ 1 ಬ್ಯಾಟ್ಸ್‌ಮನ್‌ನನ್ನು ಆಡುವ ಹನ್ನೊಂದರಲ್ಲಿ ಆಯ್ಕೆ ಮಾಡಿದ್ದೀರಿ. ಆದರೆ ವಿಶ್ವದ ನಂಬರ್ 1 ಟೆಸ್ಟ್ ಬೌಲರ್?ನ ಮಾತ್ರ ಏಕೆ ಬೆಂಚ್ ಮೇಲೆ ಕುಳಿಸಿದ್ದೀರಿ ಎಂದು ಗವಾಸ್ಕರ್ ಪ್ರಶ್ನಿಸಿದ್ದರು.

# ಖಾಸಗೀತನಕ್ಕೆ ಧಕ್ಕೆ; ಆಸೀಸ್ ಮಾಧ್ಯಮಗಳ ಮೇಲೆ ಮುನಿದ ವಿರಾಟ್

ಭಾರತ ತಂಡ ಪ್ರಸ್ತುತ ಆಸ್ಟ್ರೇಲಿಯಾ ಪ್ರವಾಸದಲ್ಲಿದೆ. ಸರಣಿಯ ಮೂರು ಪಂದ್ಯಗಳು ನಡೆದಿದ್ದು, ಇದೀಗ ನಾಲ್ಕನೇ ಪಂದ್ಯ ಮೆಲ್ಬೋರ್ನ್‌ನಲ್ಲಿ ನಡೆಯಲಿದೆ. ಹೀಗಾಗಿ ಈ ಬಾರಿಯ ಬಾಕ್ಸಿಂಗ್ ಡೇ ಟೆಸ್ಟ್‌ಗಾಗಿ ಟೀಂ ಇಂಡಿಯಾದ ಸ್ಟಾರ್ ಬ್ಯಾಟ್ಸ್‌ಮನ್ ವಿರಾಟ್ ಕೊಹ್ಲಿ ಮೆಲ್ಬೋರ್ನ್ ತಲುಪಿದ್ದಾರೆ. ಈ ವೇಳೆ ವಿರಾಟ್ ಕೊಹ್ಲಿ ಅವರು ಮೆಲ್ಬೋರ್ನ್ ವಿಮಾನ ನಿಲ್ದಾಣದಲ್ಲಿ ಆಸ್ಟ್ರೇಲಿಯಾದ ಮಾಧ್ಯಮಗಳೊಂದಿಗೆ ವಾಗ್ವಾದ ನಡೆಸಿದ್ದು, ಇದೀಗ ಅದರ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ವೈರಲ್ ಆಗುತ್ತಿದೆ.



**ಆಸೀಸ್ ಮಾಧ್ಯಮಗಳ ಅತಿರೇಕ:** ಬಾಕ್ಸಿಂಗ್ ಡೇ ಟೆಸ್ಟ್‌ಗಾಗಿ ಮೆಲ್ಬೋರ್ನ್‌ಗೆ ಬಂದಿಳಿದ ವಿರಾಟ್ ಕೊಹ್ಲಿ ವಿಮಾನ ನಿಲ್ದಾಣದಲ್ಲೇ ಮಾಧ್ಯಮಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಚಾನೆಲ್ 7 ವರದಿ ಪ್ರಕಾರ, ಕೊಹ್ಲಿ ಮತ್ತು ಟಿವಿ ಪತ್ರಕರ್ತರ ನಡುವೆ ಸ್ವಲ್ಪ ವಾಗ್ವಾದ ನಡೆದಿದೆ. ಆರಂಭದಲ್ಲಿ ಏನೂ ಮಾತನಾಡದೆ ಅಲ್ಲಿಂದ ಹೊರಟು ಹೋದ ಕೊಹ್ಲಿ ನಂತರ ಮತ್ತೆ ಬಂದು ಆಸ್ಟ್ರೇಲಿಯಾದ ಪತ್ರಕರ್ತರಿಗೆ ನನ್ನ ಅನುಮತಿಯಿಲ್ಲದೆ ನೀವು ನನ್ನ ಮಕ್ಕಳ ಫೋಟೋ ತೆಗೆಯುವಂತಿಲ್ಲ ಎಂದು ಹೇಳಿದ್ದಾರೆ. ಆದಾಗ್ಯೂ, ಚಾನೆಲ್ 7 ಅವರ ಮಕ್ಕಳ ಫೋಟೋಗಳನ್ನು ಕ್ಲಿಕ್ ಮಾಡಿಲ್ಲ ಅಥವಾ ಅವರ ವೀಡಿಯೊಗಳನ್ನು ಮಾಡಿಲ್ಲ ಎಂದು ಹೇಳಿಕೊಂಡಿದೆ. ಮುಂದುವರೆದು ಮಾತನಾಡಿದ ವಿರಾಟ್ ಕೊಹ್ಲಿ ತನ್ನ ಖಾಸಗೀತನವನ್ನು ಗೌರವಿಸುವಂತೆ ಪಾಪರಾಜಿಗಳ ಬಳಿ ಕೇಳಿಕೊಂಡು ಅಲ್ಲಿಂದ ಹೊರಟು ಹೋಗಿದ್ದಾರೆ.

**ವಿರಾಟ್ ಕೊಹ್ಲಿ ಕಳಪೆ ಫಾರ್ಮ್:** ವಿರಾಟ್ ಕೊಹ್ಲಿಗೆ ಆಸ್ಟ್ರೇಲಿಯಾ ಪ್ರವಾಸ ಇಲ್ಲಿಯವರೆಗೆ ಅಷ್ಟು ಹೇಳಿಕೊಳ್ಳುವಂತಿಲ್ಲ. ಪರ್ತ್‌ನಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲಿ ಶತಕ ಬಾರಿಸಿದ್ದ ವಿರಾಟ್, ಆ ನಂತರದ ಮುಂದಿನ ನಾಲ್ಕು ಇನ್ನಿಂಗ್ಸ್‌ಗಳಲ್ಲಿ ಒಟ್ಟು 26 ರನ್‌ಗಳಿಸಲಷ್ಟೇ ಶಕ್ತರಾಗಿದ್ದಾರೆ. ಇದು ಕೊಹ್ಲಿಗೆ ಸವಾಲಿನ ಸಮಯವಾಗಿದ್ದು, ಅವರ ಆತ್ಮವಿಶ್ವಾಸದ ಮೇಲೂ ಪರಿಣಾಮ ಬೀರಿದೆ. ಇದೀಗ ಉಭಯ ತಂಡಗಳ ನಡುವಿನ ನಾಲ್ಕನೇ ಟೆಸ್ಟ್ ಪಂದ್ಯ ಡಿಸೆಂಬರ್ 26 ರಿಂದ ಮೆಲ್ಬೋರ್ನ್‌ನಲ್ಲಿ ನಡೆಯಲಿದೆ. ಈ ಪಂದ್ಯದಲ್ಲಾದರೂ ಕೊಹ್ಲಿ ಬ್ಯಾಟ್ ಆಗಸ ನೋಡಲಿ ಎಂಬುದು ಅಭಿಮಾನಿಗಳ ಆಶಯವಾಗಿದೆ.

# ಕನ್ನಡ ಭಾಷೆ ಸದಾ ಶ್ರೀಮಂತ ಮತ್ತು ಸಮೃದ್ಧ

## ಖ್ಯಾತ ಹಾಸ್ಯ ಸಾಹಿತಿ ಶ್ರೀ ಎಮ್. ಎಸ್. ನರಸಿಂಹ ಮೂರ್ತಿ



ಬರೆದದ್ದನ್ನೇ ಮಾತನಾಡಬಹುದಾದ, ಮಾತನಾಡಿದ್ದನ್ನೇ ಬರೆಯಬಹುದಾದ ವರ್ಣಮಾಲೆಯಿರುವ ಸಮೃದ್ಧ ಭಾಷೆ ಕನ್ನಡವಾಗಿದ್ದು, ಇದೊಂದು ಆತ್ಮವಿಶ್ವಾಸದ ಭಾಷೆಯಾಗಿದೆ ಎಂದು ಖ್ಯಾತ ಹಾಸ್ಯ ಸಾಹಿತಿ ಶ್ರೀ ಎಮ್. ಎಸ್. ನರಸಿಂಹ ಮೂರ್ತಿ ರವರು ಅಭಿಪ್ರಾಯಪಟ್ಟರು.

ಶ್ರೀಯುತರು ಬೆಂಗಳೂರಿನ ಮಹಾತ್ಮಾ ಗಾಂಧಿ ರಸ್ತೆಯಲ್ಲಿರುವ ಕೆನರಾ ಬ್ಯಾಂಕ್ ವೃತ್ತ ಕಛೇರಿಯಲ್ಲಿ ಕೆನರಾ ಬ್ಯಾಂಕ್ ಸ್ಪೆನ್ಸರ್ಸ್ ಕನ್ನಡ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡುತ್ತಿದ್ದರು .

ಕೋವಿಡ್ ಕ್ಷೋಭೆಯ ಸಂಕಷ್ಟದ ಸಮಯದಲ್ಲಿ ಬೇರೆಲ್ಲ ವ್ಯವಸ್ಥೆಗಳು ಸ್ತಬ್ಧಗೊಂಡಿದ್ದರೂ, ಬ್ಯಾಂಕಿಂಗ್ ವ್ಯವಸ್ಥೆಯು ಮಾತ್ರ ತನ್ನ ಸೇವೇಯನ್ನು ಅನಿರ್ಬಂಧಿತವಾಗಿ ಮುಂದುವರಿಸಿಕೊಂಡು ಬಂದಿದ್ದರಿಂದ, ಭಾರತದ ಆರ್ಥಿಕ ಸ್ವಾಸ್ಥ್ಯವು ಎಲ್ಲಿಯೂ ಹದಗೆಡಲಿಲ್ಲ. ಇದರ ಹಿಂದಿದ್ದ ಬ್ಯಾಂಕಿಂಗ್ ನೌಕರರ ಮತ್ತು ಅಧಿಕಾರಿಗಳ ಸೇವೆ ಪ್ರಶಂಸಾರ್ಹ ಎಂದು ಬಣ್ಣಿಸಿದರು. ಕರ್ನಾಟಕ ರಾಜ್ಯವು ಹಲವು ಪ್ರತಿಷ್ಠಿತ ಬ್ಯಾಂಕ್‌ಗಳ ತವರೂರಾಗಿದೆ. ಅದರಲ್ಲೂ ಕೆನರಾ ಬ್ಯಾಂಕ್ ತನ್ನ ಸದೃಢ ಸಮರ್ಥ ಆಡಳಿತದಿಂದ ಬ್ಯಾಂಕ್‌ಗಳ ವಿಲೀನದ ಪ್ರಕ್ರಿಯೆಯ ನಂತರವೂ ತನ್ನ ಅಸ್ಮಿತೆಯನ್ನು ಉಳಿಸಿಕೊಂಡು ಭಾರತ ದೇಶದ ಬಲಿಷ್ಠವಾದ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿರುವುದು ಕನ್ನಡಿಗರೆಲ್ಲರಿಗೂ ಹೆಮ್ಮೆಯ ವಿಷಯವೆಂದು ಅಭಿಪ್ರಾಯ ಪಟ್ಟರು. ತಾವು ಮೈಸೂರು ಬ್ಯಾಂಕಿನಿಂದ ನಿವೃತ್ತರಾಗಿದ್ದರೂ, ತಮ್ಮ ಬ್ಯಾಂಕಿಂಗ್ ವ್ಯವಹಾರಗಳನ್ನು ಬಹಳ ವರ್ಷಗಳಿಂದ ಕೆನರಾ ಬ್ಯಾಂಕನಲ್ಲಿಯೇ ಮುಂದುವರಿಸಿಕೊಂಡು ಬಂದಿರುವುದನ್ನು ಸ್ಮರಿಸಿಕೊಳ್ಳುತ್ತ, ಕೆನರಾ ಬ್ಯಾಂಕ್ ಗ್ರಾಹಕ ಸೇವೆಗೆ ಕೊಡುತ್ತಿರುವ ಮಹತ್ವವನ್ನು ಉಲ್ಲೇಖಿಸಿದರು.

ಮುಖ್ಯ ಮಹಾ ಪ್ರಬಂಧಕರಾದ ಶ್ರೀಯುತ ಪುಷ್ಕರ್ ಸಿನ್ಹಾರವರು ತಮ್ಮ ಆಶಯ ನುಡಿಯಲ್ಲಿ 'ಕನ್ನಡೇತರರು ಉದ್ಯಮ ಮತ್ತು ವೃತ್ತಿಯನ್ನು ಕರ್ನಾಟಕದಲ್ಲಿ ನಿರ್ವಹಿಸಲು ಕನ್ನಡಿಗರು ತೆರೆದ ಬಾಹುಗಳಿಂದ ಅವಕಾಶ ನೀಡುತ್ತಿರುವುದರಿಂದ ಕರ್ನಾಟಕ ರಾಜ್ಯವು ಹೆಚ್ಚು ಅಭಿವೃದ್ಧಿ ಹೊಂದಲು ಸಹಕಾರಿಯಾಗಿದೆ' ಎಂದು ಕನ್ನಡಿಗರ ಹೃದಯ ಶ್ರೀಮಂತಿಕೆಯನ್ನು ಕೊಂಡಾಡಿದರು.

ವೃತ್ತ ಕಛೇರಿಯ ಮುಖ್ಯಸ್ಥರಾದ ಮಹಾ ಪ್ರಬಂಧಕ ಶ್ರೀಯುತ ಮಹೇಶ್ ಎಮ್ ಪೈಯವರು ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ, ಕರ್ನಾಟಕದಾದ್ಯಂತ ಕನ್ನಡ ರಾಜ್ಯೋತ್ಸವದ ಆಚರಣೆಯ ಔಚಿತ್ಯವನ್ನು ವಿವರಿಸುತ್ತ, ಭಾಷಾವಾರು ಪ್ರಾಂತ್ಯಗಳ ರಚನೆಯಲ್ಲಿ ಉದಯವಾದ ರಾಜ್ಯಗಳ ಸ್ಥಾಪನೆಯ ರಾಜ್ಯೋತ್ಸವ ಆಚರಣೆಗಳು ಪ್ರಾದೇಶಿಕ ಭಾಷೆಗಳ ಉಳಿವಿಗೆ ಅತ್ಯಗತ್ಯವೆಂದರು. ಕರ್ನಾಟಕದಲ್ಲಿ ನೌಕರಿ ಮಾಡುತ್ತಿರುವ ಅನ್ಯ ಭಾಷಿಕ ಸಿಬ್ಬಂದಿಯು, ಸ್ಥಳೀಯ ಭಾಷೆಯಾದ ಕನ್ನಡವನ್ನು ಕಲಿತುಕೊಂಡು ಬ್ಯಾಂಕಿಂಗ್ ಸೇವೆಯನ್ನು ನೀಡಬೇಕಾಗಿರುವ ಅಗತ್ಯವನ್ನು ಒತ್ತಿ ಹೇಳಿದರು.

ತಮ್ಮ ಸ್ವಾಗತ ಭಾಷಣದಲ್ಲಿ ಉಪ ಮಹಾ ಪ್ರಬಂಧಕರಾದ ಶ್ರೀಯುತ ಆರ್. ಗಣೇಶ್‌ರವರು ಕನ್ನಡ ಪ್ರದೇಶವು ಸ್ವಾಭಾವಿಕ ಸಂಪನ್ಮೂಲಗಳಿಂದ, ಎರಡು ಸಾವಿರ ವರ್ಷಗಳಿಗೂ ಅಧಿಕ ಇತಿಹಾಸವಿರುವ ಪ್ರಬುದ್ಧ ನಾಡ ನುಡಿಯಿಂದ, ತನ್ನಂತೆ ಪರರೆಂದು ಭಾವಿಸುವ ವಿಶ್ವ ಭ್ರಾತೃತ್ವದ ಮನೋಭಾವದ ಮಾನವ ಸಂಪತ್ತಿನಿಂದ, ಹೊಸ ಆವಿಷ್ಕಾರಗಳ ಕೈಗಾರಿಕೆಗಳಿಗೆ, ಉದ್ಯಮಗಳಿಗೆ ತನ್ನ ನೆಲದಲ್ಲಿ ಅವಕಾಶವನ್ನು ನೀಡುವ ವಿಶಾಲ ಮನೋಭಾವದಿಂದ ಭಾರತ ದೇಶದಲ್ಲಿಯೇ ಪ್ರಭಾವಿ ರಾಜ್ಯವಾಗಿ ಎಲ್ಲರನ್ನೂ ತನ್ನತ್ತ ಆಕರ್ಷಿಸುತ್ತಿದೆ ಎಂದು ವಿಶ್ಲೇಷಿಸಿದರು.

ರಾಜ್ಯೋತ್ಸವ ಆಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಹಲವಾರು ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಅತಿಥಿ ಗಣ್ಯರಿಂದ ಬಹುಮಾನಗಳನ್ನು ವಿತರಿಸಲಾಯಿತು. ಕನ್ನಡ ರಾಜ್ಯೋತ್ಸವದಲ್ಲಿ ಕನ್ನಡೇತರರೂ ಹಲವಾರು ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದದ್ದು ಗಮನಾರ್ಹವಾಗಿತ್ತು. ಬ್ಯಾಂಕ್ ನೌಕರರು ಮತ್ತು ಅಧಿಕಾರಿಗಳು ವೈವಿಧ್ಯಮಯ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸಿಕೊಟ್ಟು ಸಭಿಕರನ್ನು ರಂಜಿಸಿದರು. ಇದೇ ಸಂದರ್ಭದಲ್ಲಿ ಕೆನರಾ ಬ್ಯಾಂಕ್‌ನಲ್ಲಿ ಅನುಪಮ ಸೇವೆ ಸಲ್ಲಿಸಿ, ನಿವೃತ್ತರಾದ ಮೇಲೂ ಕನ್ನಡ ಸೇವೆಯಲ್ಲಿ ನಿರತರಾಗಿರುವ ಶ್ರೀ ಎಂ ವೆಂಕಟೇಶ ಶೇಷಾದ್ರಿಯವರನ್ನು ಮತ್ತು ಶ್ರೀ ಕೆ ಜಿ ಸಂಪತ್ ಕುಮಾರ್ ಕೆ.ಜೆ.ಯವರನ್ನು ಆತ್ಮೀಯವಾಗಿ ಸನ್ಮಾನಿಸಲಾಯಿತು.

ಕರ್ನಾಟಕ ರಾಜ್ಯದ ಸೊಗಡನ್ನು ಸಾರುವ ಜನಪದ ಕಲೆಯಾದ ಡೊಳ್ಳು ಕುಣಿತವನ್ನು ಸಮಾರಂಭದ ಕೊನೆಯಲ್ಲಿ ಆಯೋಜಿಸಲಾಗಿತ್ತು. ಡೊಳ್ಳುಗಳ ಲಯಬದ್ಧವಾದ ಬಡಿತಕ್ಕೆ ಅಬಾಲ ವೃದ್ದರೆಲ್ಲರ ಹೃದಯಗಳಲ್ಲೂ ತರಂಗಗಳೆದ್ದು, ಹೆಜ್ಜೆಗಳನ್ನು ಕೂಡಿಸಿ ಕುಣಿದು ಕುಪ್ಪಳಿಸಿ ಸಂಭ್ರಮದಲ್ಲಿ ಮಿಂದೆದ್ದರು.

ಶ್ರೀಮತಿ ಶೈಲಾ ಮಮತಾಪುರ್, ಶ್ರೀಮತಿ ಇಂದುಮತಿ ಠಾಣ್ಗೆ ಮತ್ತು ಮಂಜುನಾಥರವರು ಅಚ್ಚುಕಟ್ಟಾಗಿ ಕಾರ್ಯಕ್ರಮದ ನಿರೂಪಣೆ ಮಾಡಿದರು. ಮಹಾ ಪ್ರಬಂಧಕ ಶ್ರೀಮತಿ ಕೆ ಬಿ ಗೀತಾ ರವರು ಮುಖ್ಯ ಅತಿಥಿಗಳ ಪರಿಚಯವನ್ನು ಮಾಡಿಕೊಟ್ಟರು. ಸಹಾಯಕ ಮಹಾ ಪ್ರಬಂದಕರಾದ ಶ್ರೀಯುತ ರಮೇಶ್ ಬಿಳೂರ್ಕರ್ ವಂದನಾರ್ಪಣೆ ಸಮರ್ಪಿಸಿದರು. ಬ್ಯಾಂಕಿನ ಹಿರಿಯ ಅಧಿಕಾರಿಗಳು, ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com